

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 | Issue: 279 | ₹ ಬೆಲೆ: 4 | Sunday, 31, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23


## ಕೋವಿಡ್ ಪ್ರಕರಣಗಳ ಏರಿಕೆ: 743 ಕೇಸ್ ಪತ್ತೆ, 7 ಸಾವು



ನವದೆಹಲಿ: ದೇಶದಲ್ಲಿ ದಿನದಿಂದ ದಿನಕ್ಕೆ ಕೋವಿಡ್ ಪ್ರಕರಣಗಳ ಸಂಖ್ಯೆ ಆರಿಕೆಯಾಗುತ್ತಿದ್ದು, 225 ದಿನಗಳ ಬಳಿಕ ಇದೇ ಮೊದಲ ಬಾರಿಗೆ 24 ಗಂಟೆಗಳ ಅವಧಿಯಲ್ಲಿ 225ಕ್ಕೂ ಕೊರೊನಾವೈರಸ್ ಸೋಂಕು ಪ್ರಕರಣಗಳು ಪತ್ತೆಯಾಗಿವೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ಶನಿವಾರ ತಿಳಿಸಿದೆ.

ಈ ಮೂಲಕ ಈವರೆಗೆ 4,50,12,431 ಮಂದಿಗೆ ಕೋವಿಡ್ ತಗುಲಿದೆ. ಇದೇ ಅವಧಿಯಲ್ಲಿ ಸಕ್ರಿಯ ಪ್ರಕರಣಗಳ ಸಂಖ್ಯೆ 3,997ಕ್ಕೆ ಏರಿಕೆಯಾಗಿದೆ.

ಕಳೆದ 24 ಗಂಟೆಗಳಲ್ಲಿ 7 ಮಂದಿ ಸಾವಿಗೀಡಾಗಿದ್ದು, ಈವರೆಗೆ ಮೃತಪಟ್ಟವರ ಒಟ್ಟು ಸಂಖ್ಯೆ 5,33,358ಕ್ಕೆ ಏರಿಕೆಯಾಗಿದೆ.

ಮೃತಪಟ್ಟಿರುವ 7 ಮಂದಿಯ ಪೈಕಿ ಕೇರಳದಲ್ಲಿ ಮೂರು, ಕರ್ನಾಟಕ ಎರಡು ಮತ್ತು ಛತ್ತೀಸ್‌ಗಢ ಮತ್ತು ತಮಿಳುನಾಡಿನಿಂದ ತಲಾ ಒಬ್ಬರು ಸಾವನ್ನಪ್ಪಿದ್ದಾರೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

ರಾಷ್ಟ್ರೀಯ ಕೋವಿಡ್–19 ಚೇತರಿಕೆ ದರ 98.81 ರಷ್ಟಿದ್ದು, ಈವರೆಗೆ 4,44,75,076 ಮಂದಿ ಕೋವಿಡ್‌ನಿಂದ ಗುಣಮುಖರಾಗಿದ್ದಾರೆ.

ಸಚಿವಾಲಯದ ವೆಬ್‌ಸೈಟ್‌ನಲ್ಲಿ ನೀಡಿರುವ ಮಾಹಿತಿ ಪ್ರಕಾರ, ದೇಶದಾದ್ಯಂತ ನಡೆಯುತ್ತಿರುವ ಲಸಿಕಾ ಅಭಿಯಾನದ ಅಡಿಯಲ್ಲಿ 220.67 ಕೋಟಿಗೂ ಅಧಿಕ ಮಂದಿಗೆ ಲಸಿಕೆಗಳನ್ನು ವಿತರಿಸಲಾಗಿದೆ ಎಂದು ತಿಳಿದುಬಂದಿದೆ.

# ಜನವರಿ 22ರಂದು ನಡೆಯಲಿರುವ ಶ್ರೀರಾಮನ ಪ್ರಾಣ ಪ್ರತಿಷ್ಠಾನ ಸಮಾರಂಭಕ್ಕಾಗಿ ಇಡೀ ಜಗತ್ತು ಕಾಯುತ್ತಿದೆ: ಪ್ರಧಾನಿ ಮೋದಿ

ಅಯೋಧ್ಯಾ: ಜನವರಿ 22ರಂದು ಇಲ್ಲಿ ನಡೆಯಲಿರುವ ಐತಿಹಾಸಿಕ ರಾಮ್ ಲಲ್ಲಾ ಪ್ರಾಣ ಪ್ರತಿಷ್ಠಾನ ಸಮಾರಂಭಕ್ಕಾಗಿ ಇಡೀ ಜಗತ್ತು ಕಾಯುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶನಿವಾರ ಹೇಳಿದ್ದು ಈ ಸಮಾರಂಭಕ್ಕಾಗಿ ಅಯೋಧ್ಯೆಗೆ ಜನರು ಬಾರದಂತೆ ಮನವಿ ಮಾಡಿದ್ದಾರೆ.

ನಗರದಲ್ಲಿ ನವೀಕೃತ ರೈಲು ನಿಲ್ದಾಣ ಹಾಗೂ ವಿಮಾನ ನಿಲ್ದಾಣವನ್ನು ಉದ್ಘಾಟಿಸಿದ ಬಳಿಕ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, 'ವಿಕಾಸ್' (ಅಭಿವೃದ್ಧಿ) ಮತ್ತು 'ವಿರಾಸತ್' (ಪರಂಪರೆ) ಶಕ್ತಿಯು ದೇಶವನ್ನು ಮುನ್ನಡೆಸುತ್ತದೆ ಎಂದು ಹೇಳಿದರು. ಈ ಮೂಲಸೌಕರ್ಯ ಸಂಬಂಧಿತ ಕಾಮಗಾರಿಗಳು ಮತ್ತೊಮ್ಮೆ ದೇಶದ ಭೂಪಟದಲ್ಲಿ ಆಧುನಿಕ ಅಯೋಧ್ಯೆಯನ್ನು ಹೆಮ್ಮೆಯಿಂದ ಸ್ಥಾಪಿಸಲಿವೆ. ಜಗತ್ತಿನಲ್ಲಿ ಯಾವುದೇ ದೇಶವಿರಲಿ, ಅದು ಅಭಿವೃದ್ಧಿಯ ಹೊಸ ಎತ್ತರವನ್ನು ತಲುಪಬೇಕಾದರೆ, ಅದು ತನ್ನ ಪರಂಪರೆಯನ್ನು ಕಾಳಜಿ ವಹಿಸಬೇಕಾಗುತ್ತದೆ. ನಮ್ಮ ಪರಂಪರೆ ನಮಗೆ ಸ್ಫೂರ್ತಿ ನೀಡುತ್ತದೆ, ಸರಿಯಾದ



ಮಾರ್ಗವನ್ನು ತೋರಿಸುತ್ತದೆ. ಆದುದರಿಂದ ಇಂದಿನ ಭಾರತವು ಹಳತು–ಹೊಸತೆರಡನ್ನೂ ಮೈಗೂಡಿಸಿಕೊಂಡು ಮುನ್ನಡೆಯುತ್ತಿದೆ ಎಂದರು.

'ಇಂದು ಇಡೀ ಜಗತ್ತು ಜನವರಿ 22ರ ಐತಿಹಾಸಿಕ ಕ್ಷಣಕ್ಕಾಗಿ ಕಾತರದಿಂದ ಕಾಯುತ್ತಿದೆ. ಇಂತಹ ಸಂದರ್ಭದಲ್ಲಿ ಅಯೋಧ್ಯೆಯ ಜನರಲ್ಲಿ ವಿಪರೀತ ಉತ್ಸಾಹ ಮೂಡುವುದು ಸಹಜ. ನಾನು ಭಾರತದ ಮಣ್ಣಿನ ಪ್ರತಿಯೊಂದು ಕಣದ ಮತ್ತು ಭಾರತದ ಪ್ರತಿಯೊಬ್ಬ ವ್ಯಕ್ತಿಯ ಆರಾಧಕ. ನನಗೂ ನಿಮ್ಮಂತೆ ಕುತೂಹಲವಿದೆ. ನಮ್ಮೆಲ್ಲರ ಈ ಉತ್ಸಾಹ ಮತ್ತು ಉತ್ಸಾಹವು ಅಯೋಧ್ಯೆಯ ಬೀದಿಗಳಲ್ಲಿ ಸಂಪೂರ್ಣವಾಗಿ ಗೋಚರಿಸಿತು. ಇಡೀ ಅಯೋಧ್ಯಾ ನಗರವೇ ಬೀದಿಗಿಳಿದಂತಿತ್ತು. ಈ ಪ್ರೀತಿ ಮತ್ತು ಆಶೀರ್ವಾದಕ್ಕಾಗಿ ನಾನು ನನ್ನ ಹೃತ್ಪೂರ್ವಕ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತೇನೆ.



ರೈಲ್ವೆ ನಿಲ್ದಾಣ ನಂತರ ಅಯೋಧ್ಯೆಯಲ್ಲಿ ಮಹರ್ಷಿ ವಾಲ್ಮೀಕಿ ವಿಮಾನ ನಿಲ್ದಾಣ ಉದ್ಘಾಟಿಸಿದ ಪ್ರಧಾನಿ ಮೋದಿ.

ಆದರೆ ಜನವರಿ 22ರಂದು ಜನರು ಅಯೋಧ್ಯೆಗೆ ಬಾರದಂತೆ ಮನವಿ ಮಾಡಿದರು.

ಜನವರಿ 22ರಂದು ಎಲ್ಲಾ ನಾಗರಿಕರು ತಮ್ಮ ಮನೆಗಳಲ್ಲಿ ದೀಪಗಳನ್ನು ಬೆಳಗಿಸಬೇಕೆಂದು ಪ್ರಧಾನಿ ಒತ್ತಾಯಿಸಿದರು. ಇದರಿಂದ ಇಡೀ ದೇಶವು ವೈಭವಕ್ಕೆ ಸಾಕ್ಷಿಯಾಗಬೇಕು. ಜನವರಿ 14 ಮತ್ತು ಜನವರಿ 22 ರಿಂದ ದೇಶಾದ್ಯಂತ ಯಾತ್ರಾ ಸ್ಥಳಗಳು ಮತ್ತು ದೇವಾಲಯಗಳಲ್ಲಿ ಸ್ವಚ್ಛತಾ ಅಭಿಯಾನವನ್ನು ಪ್ರಾರಂಭಿಸಲು ಅವರು ಜನರನ್ನು ಒತ್ತಾಯಿಸಿದರು. ಪ್ರಭು ಶ್ರೀರಾಮ ಟೆಂಟ್ ನಲ್ಲಿ ವಾಸಿಸುತ್ತಿದ್ದ ಕಾಲವಿತ್ತು. ಆದರೆ ಈಗ ನಾಲ್ಕು ಕೋಟಿ ಬಡವರು ಪಕ್ಕಾ ಮನೆಗಳನ್ನು ಪಡೆದಂತೆ ರಾಮನು ಕಾಂಕ್ರೀಟ್ ಮನೆಯನ್ನು ಪಡೆಯುತ್ತಾರೆ.

ಉಜ್ವಲಾ ಯೋಜನೆಯು ಕೋಟಿಗಟ್ಟಲೆ ತಾಯಂದಿರು ಮತ್ತು ಸಹೋದರಿಯರ ಜೀವನವನ್ನು ಪರಿವರ್ತಿಸಿದೆ ಎಂದು ಅವರು ಹೇಳಿದರು.

ಐದು ದಶಕಗಳಲ್ಲಿ ಕೇವಲ 14 ಕೋಟಿ ಗ್ಯಾಸ್ ಸಂಪರ್ಕಗಳನ್ನು ನೀಡಲಾಗಿತ್ತು, ಆದರೆ ಒಂದು ದಶಕದಲ್ಲಿ ತಮ್ಮ ಸರ್ಕಾರ ಉಜ್ವಲ ಯೋಜನೆಯಡಿ 10 ಕೋಟಿ ಉಚಿತವಾಗಿ ಸೇರಿದಂತೆ 18 ಕೋಟಿ ಗ್ಯಾಸ್ ಸಂಪರ್ಕಗಳನ್ನು ನೀಡಿದೆ ಎಂದು ಹೇಳಿದರು.

**ಅಯೋಧ್ಯೆಯಲ್ಲಿ 15 ಸಾವಿರ ಕೋಟಿ ರೂ. ಅಭಿವೃದ್ಧಿ ಯೋಜನೆಗೆ ಮೋದಿ ಶಂಕುಸ್ಥಾಪನೆ**

ಅಯೋಧ್ಯೆಗೆ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರು 15 ಸಾವಿರ ಕೋಟಿಗಿಂತ ಹೆಚ್ಚಿನ ಬಹು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಇವುಗಳಲ್ಲಿ ಅಯೋಧ್ಯೆ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳ ಅಭಿವೃದ್ಧಿಗೆ ಸುಮಾರು ರೂ.11,100 ಕೋಟಿ ಯೋಜನೆಗಳು ಮತ್ತು ಉತ್ತರ ಪ್ರದೇಶದಾದ್ಯಂತ ಇತರ ಯೋಜನೆಗಳಿಗೆ ಸಂಬಂಧಿಸಿದ ಸುಮಾರು ರೂ.4600 ಕೋಟಿ ಯೋಜನೆಗಳು ಇದಾಗಿದೆ.

## ಬಿ.ವೈ.ವಿಜಯೇಂದ್ರ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಬೇಕು: ಕಾಂಗ್ರೆಸ್ ಧರಣಿ ಸತ್ಯಾಗ್ರಹ

ಬೆಂಗಳೂರು: 'ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಕುಟುಂಬದ ವಿರುದ್ಧ ಭ್ರಷ್ಟಾಚಾರದ ನೇರ ಆರೋಪ ಮಾಡಿರುವ ಹಿನ್ನೆಲೆಯಲ್ಲಿ ಬಿ.ವೈ.ವಿಜಯೇಂದ್ರ ತಮ್ಮ ಶಾಸಕ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು' ಎಂದು ಆಗ್ರಹಿಸಿ ಕಾಂಗ್ರೆಸ್ ಕಾರ್ಯಕರ್ತರು ಧರಣಿ ಸತ್ಯಾಗ್ರಹ ನಡೆಸಿದರು.

ಇಲ್ಲಿನ ಆನಂದರಾವ್ ವೃತ್ತದಲ್ಲಿನ ಕಾಂಗ್ರೆಸ್ ಕಚೇರಿ ಬಳಿ ಧರಣಿ ನಡೆಸಿದ ಕಾರ್ಯಕರ್ತರು, ಶಾಸಕ ಯತ್ನಾಳ್ ಬಹಿರಂಗವಾಗಿ ಮಾಜಿ ಸಿಎಂ ಬಿಎಸ್ವೈ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧ 40ಸಾವಿರ ಕೋಟಿ ರೂ.ಕೋವಿಡ್



ಹಗರಣದ ಆರೋಪ ಮಾಡಿದ್ದು, ಬಿಜೆಪಿ ಮುಖಂಡರಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ. ಕೂಡಲೇ ಈ ಕುರಿತು ಸ್ಪಷ್ಟಣೆ ನೀಡಬೇಕು ಎಂದು ಒತ್ತಾಯಿಸಿದರು.

ಧರಣಿ ನಿರತರನ್ನು ಉದ್ದೇಶಿಸಿ ಮಾತನಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್, ದೇಶದಲ್ಲಿ ಬಿಜೆಪಿಯನ್ನು ವಿರೋಧಿಸುವ ವಿಪಕ್ಷಗಳ ವಿರುದ್ಧ ಸಿಬಿಐ, ಈಡಿ, ಐಟಿ ಮೂಲಕ ನಿರಂತರವಾಗಿ ದಾಳಿ ನಡೆಸಲಾಗುತ್ತಿದೆ. ಆದರೆ, ಬಿಜೆಪಿ ಮುಖಂಡರೇ 40 ಸಾವಿರ ಕೋಟಿ ರೂ.ಕೋವಿಡ್ ಹಗರಣ ನಡೆಸಿದ್ದಾರೆಂದು ಸ್ವತಃ ಬಿಜೆಪಿ ಶಾಸಕರೂ ಆರೋಪ ಮಾಡಿದ್ದರೂ ಈ ಬಗ್ಗೆ ಕೇಂದ್ರ ಬಿಜೆಪಿ ಮೌನವಹಿಸಿದೆ ಎಂದು ದೂರಿದರು.

ರಾಜ್ಯದಲ್ಲಿ ಈ ಹಿಂದೆ ಆಡಳಿತ ನಡೆಸಿದ ಬಿಜೆಪಿ ಭ್ರಷ್ಟಾಚಾರದಲ್ಲಿ ಮುಳುಗಿರುವುದನ್ನು ಕಂಡು ಜನ ತಕ್ಕ ಉತ್ತರ ನೀಡಿದ್ದಾರೆ. ಭ್ರಷ್ಟಾಚಾರದ ಆರೋಪ ಹೊತ್ತಿರುವ ಯಡಿಯೂರಪ್ಪರನ್ನು ಪಕ್ಷದಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಈ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರಾದ ಜಿ.ಜನಾರ್ಧನ್, ಸುಧಾಕರ್ ರಾವ್, ಪರಿಸರ ರಾಮಕೃಷ್ಣ, ಹೇಮರಾಜ್, ಪ್ರಕಾಶ್, ಬಬಳೇಶ್, ಉಮೇಶ್, ಆನಂದ್, ಚಂದ್ರಶೇಖರ, ದರ್ಶನ್, ಪುಟ್ಟರಾಜು ಸಹಿತ ಇನ್ನಿತರರು ಪಾಲ್ಗೊಂದಿದ್ದರು.

## ರಾಮಮಂದಿರ ಉದ್ಘಾಟನಾ ಸಮಾರಂಭಕ್ಕೆ ನನಗೆ ಆಹ್ವಾನ ಬಂದಿಲ್ಲ: ಸಿಎಂ ಸಿದ್ದರಾಮಯ್ಯ



ಕೊಪ್ಪಳ: ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮಮಂದಿರ ಉದ್ಘಾಟನಾ ಸಮಾರಂಭಕ್ಕೆ ನನಗೆ ಇನ್ನೂ ಆಹ್ವಾನ ಬಂದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶನಿವಾರ ಹೇಳಿದ್ದಾರೆ.

ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ದೇಶದ ಹಲವಾರು ಪ್ರಮುಖ ವ್ಯಕ್ತಿಗಳು ಮತ್ತು ರಾಜಕೀಯ ನಾಯಕರನ್ನು ಈ ಮಹಾ ಕಾರ್ಯಕ್ರಮಕ್ಕೆ ಆಹ್ವಾನಿಸುತ್ತಿದೆ.

ಈ ಕುರಿತು ಕೊಪ್ಪಳದಲ್ಲಿ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಇಂದಿನವರೆಗೂ ನನಗೆ ಯಾವುದೇ ಆಹ್ವಾನ ಬಂದಿಲ್ಲ, ಆಹ್ವಾನ ಬಂದ ನಂತರ ಆ ಬಗ್ಗೆ ಯೋಚಿಸುತ್ತೇನೆ ಎಂದರು.

ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಅವರಿಗೆ ಆಹ್ವಾನ ನೀಡಲಾಗಿದೆ. ಆದರೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಬಗ್ಗೆ ಸೂಕ್ತ ಸಮಯದಲ್ಲಿ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಕಾಂಗ್ರೆಸ್ ಶುಕ್ರವಾರ ಹೇಳಿದೆ.

## ಅಸಮಾಧಾನ ತಣಿಸಲು ರಾಯರೆಡ್ಡಿ, ಬಿಆರ್ ಪಾಟೀಲ್, ದೇಶಪಾಂಡೆಗೆ ಸಂಪುಟ ದರ್ಜೆ ಸ್ಥಾನ ಮಾನ ನೀಡಿದ ಸಿಎಂ



ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಸಮಾಧಾನ ತಣಿಸಲು ಮೂವರು ಹಿರಿಯ ಶಾಸಕರಿಗೆ ಮಹತ್ವದ ಸ್ಥಾನ ನೀಡಿದ್ದು, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರನ್ನಾಗಿ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಹಿರಿಯ ಶಾಸಕ ಬಸವರಾಜ ರಾಯರಡ್ಡಿ ಅವರನ್ನು ನೇಮಕ ಮಾಡಲಾಗಿದೆ.

ಅಲ್ಲದೇ ಮುಖ್ಯಮಂತ್ರಿಗಳ ಸಲಹೆಗಾರರಾಗಿ ಆಳಂದ ಶಾಸಕ ಶಾಸಕ ಬಿಆರ್ ಪಾಟೀಲ್ ಅವರನ್ನು ಮತ್ತು ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾಗಿ ಆರ್ವಿ.ದೇಶಪಾಂಡೆ ಅವರನ್ನು ನೇಮಕ ಮಾಡಲಾಗಿದೆ.

ಈ ಮೂವರು ಶಾಸಕರಿಗೆ ಸಚಿವ ಸಂಪುಟ ದರ್ಜೆ ಸ್ಥಾನ ಮಾನ ನೀಡಿ ರಾಜ್ಯಪಾಲರ ಆದೇಶಾನುಸಾರ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ–2(ಪ್ರ) ಶುಕ್ರವಾರ ಆದೇಶ ಹೊರಡಿಸಿದ್ದಾರೆ.

ಈ ಮೂವರೂ ಶಾಸಕರು ಸಚಿವರಾಗಲು ತೀವ್ರ ಪ್ರಯತ್ನ ನಡೆಸಿದ್ದರು. ಆದರೆ ಸಚಿವ ಸ್ಥಾನ ಸಿಗದಿದ್ದಾಗ ಸಚಿವರ ಕಾರ್ಯ ವೈಖರಿ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರು. ಶಾಸಕರ ಪತ್ರಗಳಿಗೆ ಸಚಿವರು ಕಿಮ್ಮತ್ತು ನೀಡುತ್ತಿಲ್ಲ ಎಂದು ಮುಖ್ಯಮಂತ್ರಿಗಳಿಗೆ ಪತ್ರ ಬರೆದು ಆಕ್ರೋಶ ವ್ಯಕ್ತಪಡಿಸಿದ್ದರು.

## ಸರಕಾರಿ ಶಾಲೆಗೆ ಜಾಗ ನೀಡುವಂತೆ ಮನವಿ

### ಗ್ರೂಪ್ ಕಾಲೋನಿ ಲೇಔಟ್ ನಲ್ಲಿರುವ ಖಾಲಿ ಜಾಗದಲ್ಲಿ ಶಾಲೆ ನಿರ್ಮಿಸಲು ಪಂ ಸದಸ್ಯೆ ಜನಾಭಾಯಿ ಗುಡಗೆನಟ್ಟಿ ಆಗ್ರಹ




ಬೆಳಗಾವಿ: ಬೆಳಗಾವಿ ನಗರಕ್ಕೆ ಹೊಂದಿಕೊಂಡಿರುವ ಕಂಗ್ರಾಳಿ ಕೆ ಎಚ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರೂಪ್–ಡಿ ಕಾಲೋನಿ ಲೇಔಟ್ ನಲ್ಲಿ ಲಭ್ಯವಿರುವ ಖಾಲಿ ಜಾಗದಲ್ಲಿ ಸರ್ಕಾರಿ ಕನ್ನಡ ಶಾಲೆ ನಿರ್ಮಿಸಬೇಕೆಂದು ಸಮಾಜ ಸೇವಕಿ, ಪಂಚಾಯತಿ ಸದಸ್ಯೆ ಜನಾಭಾಯಿ ಸತೀಶ್ ಗುಡಗೆನಟ್ಟಿ ಒತ್ತಾಯಿಸಿದ್ದಾರೆ.

ಬೆಳಗಾವಿ ತಾಲೂಕಿನ ಕಂಗ್ರಾಳಿ ಕೆ. ಎಚ್. ಗ್ರಾಮ ಪಂಚಾಯತಿ ವ್ಯಾಪ್ತಿಯ ವಾರ್ಡ್ ನಂಬರ್ 12 ರಲ್ಲಿ ಈ ಹಿಂದೆ ನಿರ್ಮಿಸಿದ ಲೇಔಟ್ ಗ್ರೂಪ್–ಡಿ ಕಾಲೋನಿ ಲೇಔಟ್ ನಿರ್ಮಾಣ ಸಂದರ್ಭದಲ್ಲಿ ಶಾಲೆಗೆಂದೆ ಖಾಲಿ ಜಾಗವನ್ನು ಕಾಯ್ದಿರಿಸಲಾಗಿತ್ತು ಎಂದು ಅವರು ತಿಳಿಸಿದ್ದಾರೆ.

ಈ ಪ್ರದೇಶದಲ್ಲಿ ಶಾಲೆಯ ಅವಶ್ಯಕತೆ ಇರುತ್ತದೆ. ಈ ಖಾಲಿ ಜಾಗದಲ್ಲಿ ಸರಕಾರಿ ಶಾಲೆ ಕಟ್ಟಿದರೆ ಬಡ ಮಕ್ಕಳಿಗೆ ಅನುಕೂಲವಾಗುತ್ತದೆ. ಖಾಲಿ ಜಾಗವನ್ನು ಬೆಳಗಾವಿ ನಗರದ ಕ್ಷೇತ್ರ ಶಿಕ್ಷಣ ಅಧಿಕಾರಿಗಳ ಹೆಸರಿಗೆ ವರ್ಗಾಯಿಸಿದರು ಶಾಲೆ ನಿರ್ಮಾಣ ಸುಲಭವಾಗುತ್ತದೆ ಎಂದು ಹೇಳಿದ್ದಾರೆ.

## ಕೊನೆಯ ಹಂತಕ್ಕೂ ನೀರು ತಲುಪಿಸಲು ಸಚಿವ ಸತೀಶ್ ಜಾರಕಿಹೊಳಿ ಸೂಚನೆ

ಬೆಳಗಾವಿ: 'ಹಿಡಕಲ್ ಜಲಾಶಯದಿಂದ ಘಟಪ್ರಭಾ ಬಲದಂಡೆ, ಎಡದಂಡೆ ಹಾಗೂ ಉಪಕಾಲುವೆಗೆ 10 ದಿನಗಳ ಕಾಲ ನೀರು ಹರಿಸಲು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಆದೇಶ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಅವರು, ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಗಳ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಿಡಿಕಲ್ ಜಲಾಶಯದದಿಂದ ಘಟಪ್ರಭಾ



ಎಡದಂಡೆ ಜಿ.ಎಲ್.ಬಿ.ಸಿ ಕಾಲುವೆಗೆ ದಿನಾಂಕ.01–01–2024 ರಿಂದ 10–01–2024ರವೆರೆಗೆ ಒಟ್ಟು 10 ದಿನಗಳ ಕಾಲ ಹಾಗೂ ಘಟಪ್ರಭಾ ಬಲದಂಡೆ ಜೆ.ಆರ್.ಬಿ.ಎಸ್. ಚಿಕ್ಕೋಡಿ ಉಪ (ಸಿಬಿಎಸ್) ಹಾಗೂ ಮಾರ್ಕಂಡೆ ಕಾಲುವೆಗಳಿಗೆ ದಿನಾಂಕ 11–01–2024 ರಿಂದ 20–01–2024 ರವರೆಗೆ ಒಟ್ಟು 10 ದಿನಗಳ ಕಾಲ ನೀರನ್ನು ಕಾಲುವೆಗಳಿಗೆ ಹರಿಸಲು ಸಚಿವ ಸತೀಶ್ ಜಾರಕಿಹೊಳಿ ಆದೇಶ ಹೊರಡಿಸಿದ್ದಾರೆ.

ಆದ್ದರಿಂದ ಬೆಳಗಾವಿ ಹಾಗೂ ಬಾಗಲಕೋಟೆ ಜಿಲ್ಲೆಯ ಭಾಗದ ರೈತರು ಹಾಗೂ ಸಾರ್ವಜನಿಕರು ನೀರನ್ನು ಪೋಲಾಗದಂತೆ ಸದುಪಯೋಗ ಪಡೆದುಕೊಳ್ಳಲು ಮುಂದಾಗಬೇಕು ಎಂದು ತಿಳಿಸಿದ್ದಾರೆ.

## ಬಸ್ ಪಲ್ಟಿ; ಇಬ್ಬರು ಸ್ಥಳದಲ್ಲೇ ಸಾವು 55 ಪ್ರಯಾಣಿಕರಿಗೆ ತೀವ್ರ ಗಾಯ



ಮುಂಬೈ: ಬಸ್ ಪಲ್ಟಿಯಾಗಿ ಇಬ್ಬರು ಸಾವನ್ನಪ್ಪಿ 55 ಪ್ರಯಾಣಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಮಹಾರಾಷ್ಟ್ರದ ತಮ್ಹನಿ ಘಾಟ್ ಬಳಿ ನಡೆದಿದೆ.

ಶನಿವಾರ ಬೆಳಗ್ಗೆ ದುರಂತ ಸಂಭವಿಸಿದ್ದು ಮತ್ತಷ್ಟು ಸಾವು ನೋವುಗಳ ಆತಂಕ ಎದುರಾಗಿದೆ. ಸದ್ಯ ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ರಾಯಗಡ ಎಸ್ಪಿ ಸೋಮನಾಥ್ ಘಾರ್ಗೆ ಮಾಹಿತಿ ನೀಡಿದ್ದಾರೆ. ಅಪಘಾತಕ್ಕೆ ಕಾರಣ ಇನ್ನೂ ತಿಳಿದುಬಂದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿರೀಕ್ಷಿಸಲಾಗಿದೆ.

## ಸಿಎಂ ಆರ್ಥಿಕ ಸಲಹೆಗಾರನನ್ನಾಗಿ ನೇಮಕ ಮಾಡಿದ್ದರೂ ನಾನು ಸಂಬಳ ತಗೊಳ್ಳಲ್ಲ: ಶಾಸಕ ಬಸವರಾಜ ರಾಯರೆಡ್ಡಿ



ಬೆಂಗಳೂರು: ಮುಖ್ಯಮಂತ್ರಿ ಸಿದ್ಧರಾಮಯ್ಯ ನನ್ನನ್ನು ಸಿಎಂ ಆರ್ಥಿಕ ಸಲಹೆಗಾರರನ್ನಾಗಿ ಮಾಡಿದ್ದಾರೆ. ಇದು ಅಸಮಾಧಾನ ಶಮಕ್ಕೆ ಅಂತ ನನಗೆ ಅನ್ನಿಸೋದಿಲ್ಲ. ನನಗೆ ಯಾವುದೇ ಅಸಮಾಧಾನವಿಲ್ಲ.

ನನ್ನ ಅಸಮಾಧಾನ ಅಭಿವೃದ್ಧಿಯ ವಿಚಾರವಾಗಿ ಅಷ್ಟೇ. ನನ್ನನ್ನು ಆರ್ಥಿಕ ಸಲಹೆಗಾರರನ್ನಾಗಿ ನೇಮಕ ಮಾಡಿದ್ರೂ , ನಾನು ಸಂಬಳ ತಗೊಳ್ಳೋದಿಲ್ಲ ಅಂತ ಕಾಂಗ್ರೆಸ್ ಹಿರಿಯ ಶಾಸಕ ಬಸವರಾಜ ರಾಯರೆಡ್ಡಿ ತಿಳಿಸಿದ್ದಾರೆ.

ಸಿಎಂ ಆರ್ಥಿಕ ಸಲಹೆಗಾರರಾಗಿ ನೇಮಕಗೊಂಡ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದಂತ ಅವರು, ನಮ್ಮ ಕಾಂಗ್ರೆಸ್ ವರಿಷ್ಠರು, ಸಿಎಂ ಸಿದ್ಧರಾಮಯ್ಯ ಅವರು ಸಿಎಂಗೆ ಆರ್ಥಿಕ ಸಲಹೆಗಾರರು ಬೇಕೆಂದೇ ಈ ಹುದ್ದೆ ಕೊಟ್ಟಿದ್ದಾರೆ. ನನ್ನನ್ನು ಈ ಸ್ಥಾನ ಒಪ್ಪಿಕೊಂಡ್ರೆ ರಾಜ್ಯಕ್ಕೆ ಒಳ್ಳೇದಾಗಲಿದೆ ಅಂತ ಹೇಳಿದ್ರು. ಹೀಗಾಗಿ ನಾನು ಒಪ್ಪಿಕೊಂಡಿದ್ದೇನೆ. ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಆರ್ಥಿಕ ಸಲಹೆಗಾರರ ಹುದ್ದೆಗೆ ನೇಮಕ ಮಾಡಲಾಗಿದೆ. ಇದೊಂದು ಚಾಲೆಂಜಿಂಗ್ ಹುದ್ದೆಯಾಗಿದೆ. ಈ ಹುದ್ದೆಯಿಂದ ಏನೆಲ್ಲಾ ಪ್ರಯೋಜನ ಆಗಬೇಕೋ ಹಾಗೆ ಕೆಲಸ ಮಾಡುವುದಾಗಿ ಹೇಳಿದರು.

ರಾಜಕಾರಣದಲ್ಲಿ ಸೀನಿಯಾರಿಟಿ, ಜ್ಯೂನಿಯಾರಿಟಿ ಅಂತ ಬರೋದಿಲ್ಲ. ಅವರವರು ಅವರ ಮಟ್ಟದಲ್ಲಿ ಬುದ್ಧಿವಂತರಾಗಿರುತ್ತಾರೆ. ನನ್ನ ಮಟ್ಟಿಗೆ ಇದೊಂದು ಉದ್ಯೋಗವಲ್ಲ. ನಾನು ಶಾಸಕನಾದಾಗಲೂ ಸಂಬಳ ಪಡೆದಿಲ್ಲ. ಈಗಲೂ ಸಿಎಂ ಆರ್ಥಿಕ ಸಲಹೆಗಾರರನ್ನಾಗಿ ನೇಮಕ ಮಾಡಿದ ಮೇಲೂ ವೇತನ ಪಡೆಯೋದಿಲ್ಲ ಅಂತ ತಿಳಿಸಿದರು.

## ವಿಜಯಕಾಂತ್ ಅಂತಿಮ ದರ್ಶನಕ್ಕೆ ಬಂದ ದಳಪತಿ ವಿಜಯ್ ಮೇಲೆ ಚಪ್ಪಲಿ ಎಸೆತ



ತಮಿಳುನಾಡು: ವಿಜಯಕಾಂತ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದ ನಟ ದಳಪತಿ ವಿಜಯ್ ಅವರ ಮೇಲೆ ಅಭಿಮಾನಿಗಳ ಗುಂಪೊಂದು ಹಲ್ಲೆ ನಡೆಸಿದೆ ಎಂದು ವರದಿಯಾಗಿದೆ. ವಿಜಯ್ ಅವರು ತಮ್ಮ ಕಾರನ್ನ ಪ್ರವೇಶಿಸುವಾಗ ಅಭಿಮಾನಿಗಳ ಸಾಗರದಿಂದ ಸುತ್ತುವರೆದಿರುವ ವೀಡಿಯೊ ಎಕ್ಸ್ (ಹಿಂದೆ ಟ್ವಿಟರ್) ನಲ್ಲಿ ಹರಿದಾಡುತ್ತಿದೆ. ಅಭಿಮಾನಿಗಳ ಗುಂಪಿನಿಂದ ಯಾರೋ ಅವನ ಮೇಲೆ ಚಪ್ಪಲಿ ಎಸೆಯುತ್ತಾರೆ ಆದರೆ ವಿಜಯ್ ಹಿಂತಿರುಗಿ ನೋಡದೆ ತನ್ನ ಕಾರಿನ ಕಡೆಗೆ ಮುಂದುವರಿಯುತ್ತಾರೆ.

ಇನ್ನು ಅವ್ರ ಭದ್ರತಾ ಸಿಬ್ಬಂದಿಯೊಬ್ಬರು ಚಪ್ಪಲಿ ತನ್ನ ಕಡೆಗೆ ಬರುತ್ತಿರುವುದನ್ನ ನೋಡಿದ ತಕ್ಷಣ, ಅದನ್ನು ಹಿಡಿದು ಹಿಂದಕ್ಕೆ ಎಸೆಯುತ್ತಾರೆ.

## ಎಣ್ಣೆ ಪ್ರಿಯರಿಗೆ ಶಾಕ್

ಬೆಂಗಳೂರು: ಹೊಸ ವರ್ಷದ ಆಗಮನಕ್ಕೆ ಒಂದೇ ದಿನ ಬಾಕಿ. ಹೀಗಿರುವಾಗ ಕೆಲ ಮದ್ಯದ ದರ ಏರಿಕೆಗೆ ಕಂಪನಿಗಳು ನಿರ್ಧಾರ ಮಾಡಿವೆ. ಈ ಕುರಿತಾಗಿ ಅಬಕಾರಿ ಇಲಾಖೆಗೆ ಪತ್ರ ಬರೆದಿದೆ.

ಅಬಕಾರಿ ಇಲಾಖೆಗೆ ಬರೆದ ಪತ್ರದ ಮುಖಾಂತರ ಕಂಪನಿಗಳು ದರ ಏರಿಕೆ ಮಾಡುತ್ತಿರುವ ಬಗ್ಗೆ ಮಾಹಿತಿ ಹಂಚಿಕೊಂಡಿದೆ.

ಮದ್ಯ ತಯಾರಿಕೆ ಕಂಪನಿಗಳು ಓಟಿ, ಬಿಪಿ, 8 ಪಿಎಂ ದರ ಹೆಚ್ಚಳ ಮಾಡ್ತೇವೆ ಅಂತ ಅಬಕಾರಿ



ಇಲಾಖೆಗೆ ಪತ್ರದಲ್ಲಿ ಹೇಳಿದೆ. ಮದ್ಯ ತಯಾರಿಕ ಕಂಪನಿಗಳು ಈಗಾಗಲೇ ಬಾರ್ ಮಾಲೀಕರಿಗೂ ಸಂದೇಶ ಕಳುಹಿಸಿದ್ದು, ದರ ಹೆಚ್ಚಳ ಮಾಡುವ ಬಗ್ಗೆ ಹೇಳಿದೆ.

ಇನ್ನು ಪ್ರತಿ ಕ್ವಾಟರ್ ಮೇಲೆ 20–30 ರೂಪಾಯಿ ಹೆಚ್ಚಳ ಮಾಡುವುದಾಗಿ ಪತ್ರದಲ್ಲಿ ತಿಳಿಸಿದೆ.

## ಭಾರತಕ್ಕೆ ಮೋಸ್ಟ್ ವಾಟೆಂಡ್ ಉಗ್ರ ಹಫೀಜ್ ಸಯೀದ್ ಹಸ್ತಾಂತರ ಸಾಧ್ಯವಿಲ್ಲ: ಪಾಕಿಸ್ತಾನ

ಇಸ್ಲಾಮಾಬಾದ್: 26/11 ದಾಳಿಯ ಮಾಸ್ಟರ್ ಮೈಂಡ್ ಹಫೀಜ್ ಸಯೀದ್ ನನ್ನು ಹಸ್ತಾಂತರಿಸುವಂತೆ ಭಾರತದ ಮನವಿಯನ್ನು ಪಾಕಿಸ್ತಾನ ಸ್ವೀಕರಿಸಿದೆ ಎಂದು ಪಾಕಿಸ್ತಾನ ವಿದೇಶಾಂಗ ಸಚಿವಾಲಯದ ವಕ್ತಾರ ಮುಮ್ತಾಜ್ ಜಹ್ರಾ ಬಲೂಚ್ ಹೇಳಿದ್ದಾರೆ.



ಭಾರತ ಮತ್ತು ಪಾಕಿಸ್ತಾನದ ನಡುವೆ ಯಾವುದೇ ದ್ವಿಪಕ್ಷೀಯ ಹಸ್ತಾಂತರ ಒಪ್ಪಂದ ಅಸ್ತಿತ್ವದಲ್ಲಿಲ್ಲ. ಹೀಗಾಗಿ ಈ ಹಸ್ತಾಂತರ ಸಾಧ್ಯವಿಲ್ಲ. ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಹಫೀಜ್ ಸಯೀದ್ ನನ್ನು ಹಸ್ತಾಂತರಿಸುವಂತೆ ಪಾಕಿಸ್ತಾನವು ಭಾರತೀಯ ಅಧಿಕಾರಿಗಳಿಂದ ಮನವಿ ಬಂದಿತ್ತು ಎಂದು ಮುಮ್ತಾಜ್ ಜಹ್ರಾ ಬಲೂಚ್ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಪಾಕಿಸ್ತಾನ ಮತ್ತು ಭಾರತದ ನಡುವೆ ಯಾವುದೇ ದ್ವಿಪಕ್ಷೀಯ ಹಸ್ತಾಂತರ ಒಪ್ಪಂದ ಅಸ್ತಿತ್ವದಲ್ಲಿಲ್ಲ ಎಂಬುದನ್ನು ಗಮನಿಸುವುದು ಸೂಕ್ತವಾಗಿದೆ ಎಂದು ಅವರು ಹೇಳಿದರು. ಹಫೀಜ್ ಸಯೀದ್‌ನನ್ನು ಭಾರತಕ್ಕೆ ಹಸ್ತಾಂತರಿಸುವ ಕುರಿತು ವಿಶೇಷ ಪ್ರಕರಣದಲ್ಲಿ ವಿಚಾರಣೆ ಎದುರಿಸಲು ಭಾರತವು ಪಾಕಿಸ್ತಾನ ಸರ್ಕಾರಕ್ಕೆ ಮನವಿ ಮಾಡಿದೆ ಎಂದು ವಿದೇಶಾಂಗ ಸಚಿವಾಲಯದ ಅಧಿಕೃತ ವಕ್ತಾರ ಅರಿಂದಮ್ ಬಾಗ್ಚಿ ಹೇಳಿದ್ದರು.

ಅರಿಂದಮ್ ಬಾಗ್ಚಿ ಅವರು, ಹಫೀಜ್ ಸಯೀದ್ ಭಾರತದಲ್ಲಿ ಹಲವಾರು ಪ್ರಕರಣಗಳಲ್ಲಿ ಬೇಕಾಗಿದ್ದಾರೆ. ಈತ ವಿಶ್ವಸಂಸ್ಥೆಯಿಂದ ನಿಷೇಧಿತ ಭಯೋತ್ಪಾದಕನೂ ಹೌದು. ಈ ನಿಟ್ಟಿನಲ್ಲಿ, ನಾವು ಸಂಬಂಧಿತ ಪೋಷಕ ದಾಖಲೆಗಳೊಂದಿಗೆ ವಿನಂತಿಯನ್ನು ಕಳುಹಿಸಿದ್ದೇವೆ. ವಿಶೇಷ ಪ್ರಕರಣದಲ್ಲಿ ವಿಚಾರಣೆ ಎದುರಿಸಲು ಪಾಕಿಸ್ತಾನ ಸರ್ಕಾರ ಅವರನ್ನು ಭಾರತಕ್ಕೆ ಹಸ್ತಾಂತರಿಸಬೇಕು ಎಂದು ಹೇಳಿದ್ದರು.

ಆತ ಭಾರತಕ್ಕೆ ಯಾಕೆ ಬೇಕು ಎಂಬುದನ್ನು ನಾವು ಎತ್ತಿ ತೋರಿಸಿದ್ದೇವೆ ಎಂದು ಹೇಳಿದರು. ಗಮನಾರ್ಹವೆಂದರೆ, ವಿಶ್ವಸಂಸ್ಥೆಯ ನಿಯೋಜಿತ ಭಯೋತ್ಪಾದಕನಾಗಿರುವ ಸಯೀದ್, ಭಯೋತ್ಪಾದಕ ಸಂಘಟನೆ ಲಷ್ಕರ್–ಎ–ತೈಬಾ (ಎಲ್‌ಇಟಿ) ಸ್ಥಾಪಕ. ಮುಂಬೈನಲ್ಲಿ ನಡೆದ ಮಾರಣಾಂತಿಕ 26/11 ದಾಳಿಯ ಮಾಸ್ಟರ್ ಮೈಂಡ್ ಆಗಿದ್ದ ಈತ ಭಾರತದಲ್ಲಿ ಹಲವು ಪ್ರಕರಣಗಳಲ್ಲಿ ಬೇಕಾಗಿದ್ದಾನೆ.

## ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಕರಡು ಮತದಾರರ ಪಟ್ಟಿ ಪ್ರಕಟ

ಶಿವಮೊಗ್ಗ: ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಕರಡು ಮತದಾರರ ಪಟ್ಟಿಗೆ ತಿದ್ದುಪಡಿಗಳ ಪಟ್ಟಿ ಸಿದ್ಧಪಡಿಸಿರುವುದನ್ನು ಸಾರ್ವಜನಿಕರ ಮಾಹಿತಿಗಾಗಿ ಡಿ.30 ರಂದು ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಜಿಲ್ಲಾಧಿಕಾರಿಗಳ ಕಚೇರಿ, ಶಿವಮೊಗ್ಗ ಮಹಾನಗರ ಪಾಲಿಕೆ, ಶಿವಮೊಗ್ಗ, ಭದ್ರಾವತಿ, ತೀರ್ಥಹಳ್ಳಿ, ಹೊಸನಗರ, ಶಿಕಾರಿಪುರ, ಸೊರಬ, ಸಾಗರ ತಾಲೂಕು ಕಚೇರಿಗಳಲ್ಲಿ ಮತ್ತು ಶಿವಮೊಗ್ಗ, ಸಾಗರ ಉಪವಿಭಾಗಾಧಿಕಾರಿಗಳ ಕಚೇರಿಗಳಲ್ಲಿ ಹಾಗೂ ಜಿಲ್ಲಾಧಿಕಾರಿಗಳ ವೆಬ್ಸೈಟ್ ಮತ್ತು ceo.karnataka.gov.in ರಲ್ಲಿ ಪರಿಶೀಲನೆಗಾಗಿ ಲಭ್ಯವಿರುತ್ತದೆ.

ಭಾರತ ಚುನಾವಣಾ ಆಯೋಗದ ಮ್ಯಾನ್ಯುಯಲ್ ಆನ್ ಎಲೆಕ್ಟ್ರೋಲ್ ರೋಲ್–2016ರ ಅಧ್ಯಾಯ 12 ರಂತೆ ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರನ್ನು ಸೇರಿಸಲು ನಮೂನೆ–18 ರಲ್ಲಿ , ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿಗೆ ಹೆಸರನ್ನು ಸೇರಿಸಲು ನಮೂನೆ–19 ರಲ್ಲಿ ನಾಮಪತ್ರಗಳ ಸ್ವೀಕೃತಿಯ ಕೊನೆಯ ದಿನಾಂಕದವರೆಗೆ ಹೆಸರು ಸೇರ್ಪಡೆಗೆ ಅವಕಾಶಗಳಿದ್ದು, ಸಂಬಂಧಪಟ್ಟ ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ / ನಿಯೋಜಿತ ಅಧಿಕಾರಿಗಳಿಗೆ ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಬಹುದಾಗಿದ್ದು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಎಲ್ಲಾ ಅರ್ಹ ಮತದಾರರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ಕರ್ನಾಟಕ ನೈರುತ್ಯ ಪದವೀಧರರ ಕ್ಷೇತ್ರದ ಮತದಾರರ ಅಂಕಿ ಅಂಶಗಳು: ಭದ್ರಾವತಿ– ಗಂಡಸರು–1672, ಹೆಂಗಸರು –1492 ಒಟ್ಟು 3164, ಹೊಸನಗರ – ಗಂ–739, ಹೆಂ–553 ಒಟ್ಟು 1292, ಸಾಗರ – ಗಂ–971, ಹೆಂ–831 ಒಟ್ಟು 1802, ಶಿಕಾರಿಪುರ– ಗಂ–1891, ಹೆಂ–1007 ಒಟ್ಟು 2898, ಶಿವಮೊಗ್ಗ ಗ್ರಾಮಾಂತರ – ಗಂ–1227, ಹೆಂ–878 ಒಟ್ಟು 2105, ಶಿವಮೊಗ್ಗ ನಗರ – ಗಂ–4774, ಹೆಂ–4121 ಒಟ್ಟು 8895, ಸೊರಬ ಗಂ–1156, ಹೆಂ–606 ಒಟ್ಟು 1762, ತೀರ್ಥಹಳ್ಳಿ– ಗಂ– 1097, ಹೆಂ.–887 ಒಟ್ಟು–1984. ಒಟ್ಟು ಗಂಡಸರು –13527, ಹೆಂಗಸರು –10375 ಒಟ್ಟು –23902.

ಶಿವಮೊಗ್ಗ ಜಿಲ್ಲೆಗೆ ಸಂಬಂಧಿಸಿದಂತೆ ಕರ್ನಾಟಕ ನೈರುತ್ಯ ಶಿಕ್ಷಕರ ಕ್ಷೇತ್ರದ ಮತದಾರರ ಅಂಕಿ ಅಂಶಗಳು: ಭದ್ರಾವತಿ– ಗಂಡಸರು–244, ಹೆಂಗಸರು –198 ಒಟ್ಟು 442, ಹೊಸನಗರ – ಗಂ–124, ಹೆಂ–78 ಒಟ್ಟು 202, ಸಾಗರ – ಗಂ–292, ಹೆಂ–174 ಒಟ್ಟು 466, ಶಿಕಾರಿಪುರ– ಗಂ–395, ಹೆಂ–115 ಒಟ್ಟು 510, ಶಿವಮೊಗ್ಗ ಗ್ರಾಮಾಂತರ – ಗಂ–122, ಹೆಂ–45 ಒಟ್ಟು 167, ಶಿವಮೊಗ್ಗ ನಗರ– ಗಂ – 723, ಹೆಂ–755 ಒಟ್ಟು 1478, ಸೊರಬ ಗಂ–189, ಹೆಂ–59 ಒಟ್ಟು 248, ತೀರ್ಥಹಳ್ಳಿ–ಗಂ– 235, ಹೆಂ.–159 ಒಟ್ಟು–394. ಒಟ್ಟು ಗಂಡಸರು –2324, ಹೆಂಗಸರು –1583 ಒಟ್ಟು –3907.

## ಸೇವಾ ನ್ಯೂನ್ಯತೆ ಎಸಗಿದ ಐಶ್ವರ್ಯ ನ್ಯಾನೊ ಸಿಟಿ ಸಂಸ್ಥೆಗೆ ಬಡ್ಡಿಯೊಂದಿಗೆ ರೂ.6,04,896/– ನೀಡಲು ಆದೇಶ

ಧಾರವಾಡ: ಧಾರವಾಡದ ಬಸವೇಶ್ವರ ನಗರ ನೂಲ್ವಿ ವಾಸಿ ದಿ ವೆಂಕಟರಾವ್ ಕುಲಕರ್ಣಿ ರವರು 2015 ರಲ್ಲಿ ಎದುರುದಾರ ಐಶ್ವರ್ಯ ನ್ಯಾನೊ ಸಿಟಿ ಡೆವಲಪರ್ ಇವರೊಂದಿಗೆ ತಡಸಿನಕೊಪ್ಪದಲ್ಲಿ ನಿರ್ಮಿಸುತ್ತಿದ್ದ ಲೇಔಟ್ನಲ್ಲಿ ಪ್ಲಾಟ್ ನಂ.313 ನ್ನು ರೂ.440 ಚದರ ಪೂ. ನಂತೆ ಒಟ್ಟು ರೂ.5,28,000/–ಗೆ ಖರೀದಿಸಿದ್ದರು. ಈ ಬಗ್ಗೆ ಎದುರುದಾರ ನ್ಯಾನೊ ಸಿಟಿ ರವರು ಒಪ್ಪಂದ ಪತ್ರ ಮಾಡಿಕೊಟ್ಟಿದ್ದರು. ಮೃತರು ರೂ.3,16,800/– ಮುಂಗಡ ಹಣ ಪಾವತಿಸಿದ್ದರು. ಆದರೆ ಎದುರುದಾರರು ಒಪ್ಪಂದ ಪತ್ರದ ನಿಯಮಾವಳಿಗಳಂತೆ ಲೇಔಟ್ ಅಭಿವೃದ್ಧಿ ಮಾಡಿರಲಿಲ್ಲ, ಹೀಗಿರುವಾಗ ದಿ.08/05/2021 ರಂದು ದೂರುದಾರರ ತಂದೆ ವೆಂಕಟರಾವ್ ಕುಲಕರ್ಣಿ ನಿಧನ ಹೊಂದಿದ್ದರು. ದೂರುದಾರರು ತಮ್ಮ ತಂದೆಯ ನಿಧನದ ಬಳಿಕ ಬಾಕಿ ಹಣ ಪಡೆದುಕೊಂಡು ತಮಗೆ ಪ್ಲಾಟ್ ನಂ.313 ರ ಖರೀದಿ ಪತ್ರ ಬರೆದುಕೊಡುವಂತೆ ಎದುರುದಾರ ನ್ಯಾನೊ ಸಿಟಿ ಸಂಸ್ಥೆಯ ಪಾಲುದಾರರಿಗೆ ವಿನಂತಿಸಿದ್ದರು. ಆದರೆ ಎದುರುದಾರರು ಒಂದಿಲ್ಲ ಒಂದು ರೀತಿಯ ನೆಪ ಹೇಳುತ್ತಾ ಕಾಲಹರಣ ಮಾಡುತ್ತಿದ್ದಾರೆ. ಎದುರುದಾರರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತ ಹೇಳಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಎಲ್ಲ ದೂರುದಾರರು ದಿ.06/06/2023 ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಭೂತೆ, ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ ಹಿರೇಮಠ ಸದಸ್ಯರು, 2015 ರಲ್ಲಿ ದೂರುದಾರರ ತಂದೆ ದಿ.ವೆಂಕಟರಾವ್ ಕುಲಕರ್ಣಿ ರವರು ರೂ.3,16,800/– ಹಣ ಎದುರುದಾರರಿಗೆ ಕೊಟ್ಟಿದ್ದಾರೆ. ನಿಗದಿತ ಅವಧಿಯಲ್ಲಿ ಲೇಔಟ್ ಡೆವಲೆಪ್ ಮಾಡಿ ಪ್ಲಾಟ ನೋಂದಣಿ ಮಾಡಿಕೊಡಬೇಕು ಅಂತಾ ಕರಾರು ಇದೆ. ಆದರೆ ಎದುರುದಾರ ಐಶ್ವರ್ಯ ನ್ಯಾನೊ ಸಿಟಿ ಸಂಸ್ಥೆಯವರು ದೂರುದಾರರಿಗೆ ಅವರು ಒಪ್ಪಂದ ಮಾಡಿಕೊಂಡ ಪ್ಲಾಟ್ ನಂ.313 ರ ಖರೀದಿ ಪತ್ರ ಬರೆದು ಕೊಡದೇ ಅವರಿಗೆ ಮೋಸ ಮಾಡಿ ಸೇವಾ ನ್ಯೂನ್ಯತೆ ಎಸಗಿದ್ದಾರೆಂದು ಅಭಿಪ್ರಾಯಪಟ್ಟು ತೀಪು ನೀಡಿದೆ. ದೂರುದಾರರು ಸಂದಾಯ ಮಾಡಿದ ರೂ.3,16,800/– ಜೊತೆಗೆ ಬಡ್ಡಿ ಹಣ ದಿ.31/12/2023 ವರೆಗೆ ರೂ.2,28,096/– ಸೇರಿಸಿ ದೂರುದಾರರಿಗೆ ಹಿಂದಿರುಗಿಸುವಂತೆ ಮತ್ತು ರೂ.3,16,800/– ಅದರ ಮೇಲೆ ದಿ.01/01/2024 ರಿಂದ ಪೂರ್ತಿ ಹಣ ಸಂದಾಯವಾಗುವವರೆಗೆ ಶೇ 8% ರಂತೆ ಬಡ್ಡಿ ಲೆಕ್ಕ ಹಾಕಿ ತೀಪು ನೀಡಿದ ಒಂದು ತಿಂಗಳ ಒಳಗಾಗಿ ಕೊಡುವಂತೆ ಆಯೋಗ ಆದೇಶಿಸಿದೆ. ಎಲ್ಲ ದೂರುದಾರರಿಗೆ ಆಗಿರುವ ಅನಾನುಕೂಲತೆ ಮತ್ತು ಮಾನಸಿಕ ಹಿಂಸೆಗಾಗಿ ರೂ.50,000/– ಪರಿಹಾರ ಹಾಗೂ ಈ ಪ್ರಕರಣದ ಖರ್ಚು ವೆಚ್ಚ ಅಂತಾ ರೂ.10,000/– ನೀಡುವಂತೆ ಎದುರುದಾರ ಐಶ್ವರ್ಯ ನ್ಯಾನೊ ಸಿಟಿ ಸಂಸ್ಥೆಯವರಿಗೆ ಆಯೋಗ ತನ್ನ ತೀರ್ಪಿನಲ್ಲಿ ಹೇಳಿದೆ.

# ನಾವು ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದ್ದು ಬಿಜೆಪಿಯವರಿಗೆ ನುಂಗಲಾರದ ತುತ್ತಾಗಿದೆ: ಸಿಎಂ ವ್ಯಂಗ್ಯ

### ನಮ್ಮ ಗ್ಯಾರಂಟಿ ಯೋಜನೆಗಳಿಂದಾಗಿ ಬರಗಾಲದಲ್ಲೂ ರಾಜ್ಯದ ಬಡವರು ಸಂಕಷ್ಟದಿಂದ ಪಾರಾಗಿದ್ದಾರೆ: ಸಿ.ಎಂ.ಸಿದ್ದರಾಮಯ್ಯ

ಸಿಂಧನೂರು: ನಮ್ಮ ಗ್ಯಾರಂಟಿ ಯೋಜನೆಗಳಿಂದಾಗಿ ಬರಗಾಲದಲ್ಲೂ ರಾಜ್ಯದ ಬಡವರು ಸಂಕಷ್ಟದಿಂದ ಪಾರಾಗಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದರು.

ಸಿಂಧನೂರಿನಲ್ಲಿ ನಡೆದ ಬೃಹತ್ ಕಾರ್ಯಕ್ರಮದಲ್ಲಿ ತಿಮ್ಮಾಪೂರ ಏತ ನೀರಾವರಿ ಯೋಜನೆ ಲೋಕಾರ್ಪಣೆ ಮಾಡಿ, ಜಲ ಜೀವನ್ ಮಿಷನ್ (DBOT) ಯೋಜನೆಯ ಶಂಕುಸ್ಥಾಪನೆ ನೆರವೇರಿಸುವ ಜತೆಗೆ ಸಿಂಧನೂರು ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆಯನ್ನು ನೆರವೇರಿಸಿ ಮಾತನಾಡಿದರು.

ನಾವು ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದ್ದು ಬಿಜೆಪಿಯವರಿಗೆ ನುಂಗಲಾರದ ತುತ್ತಾಗಿದೆ. ಮೋದಿ ಅವರು ರಾಜ್ಯ ಆರ್ಥಿಕವಾಗಿ ದಿವಾಳಿಯಾಗುತ್ತದೆ ಎಂದು ಭಾಷಣ ಮಾಡಿದ್ದರು. ಆದರೆ ಅವರ ಮಾತು ಮತ್ತೊಮ್ಮೆ ಸುಳ್ಳಾಗಿದೆ ಎಂದು ಟೀಕಿಸಿದರು.

120 ಕೋಟಿ ಮಹಿಳೆಯರು ಉಹಿಳೆಯರು ಉಚಿತವಾಗಿ ಬಸ್ ನಲ್ಲಿ ಪ್ರಯಾಣ ಮಾಡಿದ್ದಾರೆ. 1.16 ಕೋಟಿ ಮಹಿಳೆಯರ



ಖಾತೆಗೆ ತಿಂಗಳಿಗೆ 2 ಸಾವಿರ ಕೊಡಲಾಗುತ್ತಿದೆ. ಹೀಗೆ ಪ್ರತಿ ಕುಟುಂಬಕ್ಕೆ ತಿಂಗಳಿಗೆ 5–6 ಸಾವಿರ ರೂಪಾಯಿ ಉಳಿತಾಯ ಆಗುತ್ತಿದೆ.

ನಾವು ಕನ್ನಡಿಗರು ಪ್ರತೀ ವರ್ಷ ಕೇಂದ್ರಕ್ಕೆ 4 ಲಕ್ಷ ಕೋಟಿ ತೆರಿಗೆ ರೂಪದಲ್ಲಿ ಹಣ ಕೊಡ್ತೀವಿ. ಆದರೆ ಕೇಂದ್ರ ನಮಗೆ ವಾಪಾಸ್ ಕೊಡುವುದು 52 ಸಾವಿರ ಕೋಟಿ ಮಾತ್ರ. ಬರಗಾಲ ಬಂದಿದ್ದರೂ ಕೇಂದ್ರದಿಂದ ನಯಾಪೈಸೆ ಬಂದಿಲ್ಲ. ಇದನ್ನು ರಾಜ್ಯದ ಜನತೆ ಬಿಜೆಪಿ ಸಂಸದರಿಗೆ ಪ್ರಶ್ನಿಸಬೇಕು ಎಂದು ಕರೆ ನೀಡಿದರು.

ಕೇಂದ್ರ ಸರ್ಕಾರ ರಾಜ್ಯಜನರ ಮರವಿಗೆ ಬರದಿದ್ದರೂ ನಾವು ರಾಜ್ಯದ ಜನರ ಕೈ ಬಿಡುವುದಿಲ್ಲ. ಹಿಂದಿನ ಬಿಜೆಪಿ ಸರ್ಕಾರ ನೀರಾವರಿ ಹೆಸರಲ್ಲಿ ಹಣ ತಿಂದು ತೇಗಿ ಹೋಗಿದೆ. ಆದರೂ ನಾವು ರಾಜ್ಯದ ಜನರಿಗೆ ಅಗತ್ಯ ನೀರಾವರಿ ಸವಲತ್ತು ಒದಗಿಸುತ್ತೇವೆ ಎಂದು ಭರವಸೆ ನೀಡಿದರು.

ಸಿಂಧನೂರಿಗೆ ಇದುವರೆಗೂ ಶೇ80 ರಷ್ಟು ನೀರಾವರಿ ಸವಲತ್ತು ಸಿಕ್ಕಿದೆ. ಶಾಸಕರು ನೂರಕ್ಕೆ ನೂರರಷ್ಟು ನೀರಾವರಿ ಮಾಡಲು ಬದ್ದರಾಗಿದ್ದಾರೆ. ನಮ್ಮ ಸರ್ಕಾರ ಇದಕ್ಕೆ ಸಂಪೂರ್ಣ ಸಹಕಾರ ನೀಡಿ ರೈತರ ಬದುಕನ್ನು ಉನ್ನತೀಕರಿಸಲು ನಾವು ಬದ್ದರಾಗಿದ್ದೇವೆ. ನವಿಲೆ ಬ್ಯಾಲೆಂಸಿಂಗ್ ಅಣೆಕಟ್ಟು ನಿರ್ಮಿಸಲು ನಮ್ಮ ಸರ್ಕಾರ ಸಿದ್ಧವಿದೆ ಎಂದು ಭರವಸೆ ನೀಡಿದರು.

ಹಂಪನಗೌಡ ಬಾದರ್ಲಿ ಸಜ್ಜನ ಮತ್ತು ಅಭಿವೃದ್ಧಿ ಬಗ್ಗೆ ಹೆಚ್ಚು ಶ್ರಮಿಸುವ ಶಾಸಕರು. ಇವರಂತೆಯೇ ಎಲ್ಲಾ ಶಾಸಕರು ಶ್ರಮಿಸಿದರೆ ಇಡಿ ರಾಜ್ಯ ಮತ್ತು ಹೈದರಾಬಾದ್ ಕರ್ನಾಟಕ ಹೆಚ್ಚು ಅಭಿವೃದ್ಧಿಯಾಗುತ್ತದೆ ಎಂದು ಶಾಸಕರ ಕಾರ್ಯಕ್ಷಮತೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್, ಜಿಲ್ಲೆಯ ಶಾಸಕರುಗಳಾದ ಹಂಪಯ್ಯ ನಾಯಕ್, ಮಾನಪ್ಪ ಡಿ.ವಜ್ಜಲ್, ಬಸವನಗೌಡ ದದ್ದಲ್, ಡಾ.ಎಸ್.ಶಿವರಾಜ್ ಪಾಟೀಲ್, ಆರ್. ಬಸವನಗೌಡ ತುರ್ವಿಹಾಳ, ಶರಣಗೌಡ ಪಾಟೀಲ್ ಬಯ್ಯಾಪುರ ಸೇರಿ ಹಲವು ಮುಖಂಡರು, ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಶಂಕುಸ್ಥಾಪನೆ ಮತ್ತು ಉದ್ಘಾಟನೆಯಾದ ಅಭಿವೃದ್ಧಿ ಕಾರ್ಯಗಳ ಪಟ್ಟಿ

- ತಿಮ್ಮಾಪೂರ ಏತ ನೀರಾವರಿ ಯೋಜನೆ
- ಜಲ ಜೀವನ್ ಮಿಷನ್
- ಸರಕಾರಿ ಪದವಿ ಮಹಾವಿದ್ಯಾಲಯದ ಸುವರ್ಣ ಮಹೋತ್ಸವ
- ಕರ್ನಾಟಕ ಸಂಭ್ರಮ–50ರ ಪ್ರಯುಕ್ತ ಕನ್ನಡ ರಥದ ಮೆರವಣಿಗೆಗೆ ಚಾಲನೆ
- ಹದಿಹರೆಯದ ಹೆಣ್ಣುಮಕ್ಕಳಿಗೆ ಉಚಿತ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್ ವಿತರಣೆ
- ಸಿಂಧನೂರು ನಗರ ಸಂಚಾರ ಪೊಲೀಸ್ ಠಾಣೆ ಕಟ್ಟಡದ ಉದ್ಘಾಟನೆ.



ಬೆಳಗಾವಿ: ದಿ–11.12.2023 ರಂದು ಕಾಕತಿ ಪೊಲೀಸ್ ಠಾಣಾ ವ್ಯಾಪ್ತಿಯ ವಂಟಮೂರಿಯಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಸಂತ್ರಸ್ತ ಮಹಿಳೆಯನ್ನು ರಕ್ಷಿಸಲು ಪ್ರಯತ್ನಿಸಿದ ಅಲ್ಲಿನ ನಾಗರಿಕರಿಗೆ ಹಾಗೂ ಪೊಲೀಸ್ ಅಧಿಕಾರಿ & ಸಿಬ್ಬಂದಿಗಳಿಗೆ ವಾರದ ಕವಾಯತು ಸಮಯದಲ್ಲಿ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಸಂತ್ರಸ್ತ ಮಹಿಳೆಯನ್ನು ರಕ್ಷಿಸಲು ಪ್ರಯತ್ನಿಸಿದ ನಾಗರಿಕರಿಗೆ ಮಾನ್ಯ ಉಚ್ಚ ನ್ಯಾಯಾಲಯ ಬೆಂಗಳೂರು ರವರು ಮಾಡಿರುವ ಪ್ರಶಂಸನೆ ಆದೇಶ ಪ್ರತಿಯನ್ನು ನೀಡಲಾಯಿತು.

## ಶಿಕ್ಷಕಿಗೆ ನಶೆ ಬರುವ ಔಷಧಿ ಕೊಟ್ಟು ಅತ್ಯಾಚಾರ: ಮೌಲ್ವಿ ಪೊಲೀಸ್ ವಶಕ್ಕೆ



ಹುಬ್ಬಳ್ಳಿ : ಮದರಾಸಾದಲ್ಲಿ ಶಿಕ್ಷಕಿಯಾಗಿದ್ದ ಯುವತಿಯ ಮೇಲೆ ಮತ್ತು ಬರುವ ಔಷಧಿ ನೀಡಿ ಅತ್ಯಾಚಾರ ಮಾಡಿದ ಆರೋಪದಡಿ ಮೌಲ್ವಿಯನ್ನು ಹಳೆ ಹುಬ್ಬಳ್ಳಿ ಠಾಣೆ ಪೊಲೀಸರು ಮಹಾರಾಷ್ಟ್ರದಲ್ಲಿ ಬಂಧಿಸಿರುವ ಬಗ್ಗೆ ವರದಿಯಾಗಿದೆ.

ಬಂಧಿತ ಆರೋಪಿ ಗುಲಾಮ ಜಿಲಾನಿ ಅಜಹರಿ ಎಂಬ ಮುಫ್ತಿಯನ್ನು ಎಂದುದಾಗಿದ್ದು, ಮಹಾರಾಷ್ಟ್ರದ ಖಂಡ್ವಾ ಎಂಬಲ್ಲಿ ಬಂಧಿಸಿ ಹುಬ್ಬಳ್ಳಿಗೆ ಕರೆತರುತ್ತಿದ್ದಾರೆ. ಆತನ ಮದರಸಾದಲ್ಲಿ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದ ಹುಬ್ಬಳ್ಳಿ ಮೂಲದ ಯುವತಿಗೆ ಮತ್ತು ಬರುವ ಔಷಧಿ ಕೊಟ್ಟು ಬಲಾತ್ಕಾರ ಮಾಡಿದ ಆರೋಪ ಕೇಳಿ ಬಂದಿದೆ.

ಮದುವೆ ಮಾಡಿಕೊಳ್ಳುವದಾಗಿ ಹೇಳಿ ಎರಡು ವರ್ಷದ ಅವಧಿಯಲ್ಲಿ ಮೇಲಿಂದ ಮೇಲೆ ಬಲಾತ್ಕಾರ ತನ್ನ ಮೇಲೆ ಮಾಡಿದ್ದಾನೆಂದು ಯುವತಿ ದೂರಿನಲ್ಲಿ ತಿಳಿಸಿದ್ದಾಳೆ. ಎರಡು ವರ್ಷದ ಅವಧಿಯಲ್ಲಿ ಗುಲಾಮ ಜಿಲಾನಿ ಅಜಹರಿ, ಒಟ್ಟು ನಾಲ್ಕು ಬಾರಿ ಆಕೆಯ ಗರ್ಭಪಾತ ಮಾಡಿಸಿದ್ದಾನೆ ಎನ್ನಲಾಗಿದೆ. ಯುವತಿ ಪುನಃ ಐದನೇ ಬಾರಿಗೆ ಗರ್ಭಿಣಿಯಾದ ನಂತರ ಯುವತಿಯನ್ನು ತನ್ನ ತವರು ಮನೆ ಹುಬ್ಬಳ್ಳಿಯಲ್ಲಿ ಬಿಟ್ಟು, ನನ್ನ ನಿನ್ನ ನಡುವೆ ಇನ್ಮೇಲೆ ಯಾವದೇ ಸಂಬಂಧ ಇಲ್ಲ, ನಮ್ಮಿಬ್ಬರ ವಿಷಯ ಬಹಿರಂಗ ಮಾಡಿದರೆ ನಿನ್ನನ್ನು ಮತ್ತು ನಿನ್ನ ಕುಟುಂಬ ಸಮೇತ ಬಿಡಲ್ಲ ಎಂದು ಬೆದರಿಕೆ ಹಾಕಿದ್ದಾನೆಂದು ಯುವತಿ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆಗೆ ನೀಡಿರುವ ದೂರಿನಲ್ಲಿ ಉಲ್ಲೇಖಿಸಿದ್ದಾಳೆ. ತಂದೆಯಿಂದ ಪರಿಚಿತನಾದ ಗುಲಾಮ ಜಿಲಾನಿ ಅಜಹರಿಯ ಮಹಾರಾಷ್ಟ್ರದ ಖಂಡವಾದಲ್ಲಿರುವ ಈತನ ಮದರಸಾದಲ್ಲಿ 23 ವರ್ಷದ ಯುವತಿ ಶಿಕ್ಷಕಿಯಾಗಿ ಕೆಲಸ ಮಾಡುತ್ತಿದ್ದಳು. ಮದುವೆಯಾಗಲು ಮೌಲ್ವಿ ನಿರಾಕರಿಸಿದನೋ ಆಗ ನೊಂದ ಯುವತಿ ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆಯಲ್ಲಿ ರಂದು ಕೇಸ್ ದಾಖಲಿಸಿದ್ದಾಳೆ.

ಯುವತಿಯ ದೂರಿನ್ವಯ ಹಳೇ ಹುಬ್ಬಳ್ಳಿ ಪೊಲೀಸರು ಮುಫ್ತಿ (ಮೌಲ್ವಿ) ಸೇರಿ ಎಂಟು ಜನರ ವಿರುದ್ಧ ಪ್ರಕರಣ ದಾಖಲಾಲಿಸಿಕೊಂಡಿದ್ದರು. ಇದೀಗ , ಅತ್ಯಾಚಾರದ ಆರೋಪಿ ಮುಫ್ತಿ ಗುಲಾಮ ಜಿಲಾನಿ ಅಜಹರಿಯನ್ನು ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛತೆ ಪ್ರಕರಣ

### ಶೌಚಾಲಯ ನಿರ್ವಹಣೆಗೆ ಆದ್ಯತೆ ನೀಡಲು ಸುತ್ತೋಲೆ

**ಎಚ್. ಮಾರುತಿ**

ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಸ್ವಚ್ಛತಾ ಕಾರ್ಯಕ್ಕೆ ವಿದ್ಯಾರ್ಥಿಗಳನ್ನು ಬಳಸಿಕೊಂಡಿರುವ ಕೆಲವು ಪ್ರಕರಣಗಳು ಬೆಳಕಿಗೆ ಬಂದಿದ್ದು, ಕಡ್ಡಾಯವಾಗಿ ವಿದ್ಯಾರ್ಥಿಗಳನ್ನು ಇಂತಹ ಕಾರ್ಯಗಳಿಗೆ ಬಳಸದೇ ಇರಲು ಸರ್ಕಾರ ಕಟ್ಟುನಿಟ್ಟಿನ ಆದೇಶ ಹೊರಡಿಸಿದೆ.

ಶಾಲೆಯ ನಿರ್ವಹಣೆಗೆ ಬಿಡುಗಡೆ ಮಾಡಿರುವ ಅನುದಾನವನ್ನು ಪ್ರಥಮ ಆದ್ಯತೆಯಾಗಿ ಶೌಚಾಲಯ ನಿರ್ವಹಣೆಗೆ ಬಳಸಿಕೊಳ್ಳಬೇಕು ಎಂದೂ ಸ್ಪಷ್ಟವಾಗಿ ಸೂಚಿಸಿದೆ.

ಇತ್ತೀಚೆಗೆ ಬೆಂಗಳೂರು, ಕೋಲಾರ ಮತ್ತು ಶಿವಮೊಗ್ಗ ಜಿಲ್ಲೆಗಳ ಸರ್ಕಾರಿ ಶಾಲೆಗಳಲ್ಲಿ ಶೌಚಾಲಯಗಳನ್ನು ಸ್ವಚ್ಛಗೊಳಿಸಲು ವಿದ್ಯಾರ್ಥಿಗಳನ್ನು ಬಳಕೆ ಮಾಡಿಕೊಂಡಿರುವುದರ ವಿರುದ್ಧ ಪ್ರತಿಪಕ್ಷಗಳು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದವು. ಪೋಷಕರು ಮತ್ತು ಸಾರ್ವಜನಿಕರು ಕಿಡಿ ಕಾರಿದ್ದರು. ಇದರಿಂದ ಸರ್ಕಾರ ಮುಜುಗರಕ್ಕೀಡಾಗಿತ್ತು. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕ್ರಮಕ್ಕೆ ಮುಂದಾಗಿದೆ.

ಸರ್ಕಾರಿ ಶಾಲೆಗಳಲ್ಲಿ ಶೌಚಾಲಯ ಸ್ವಚ್ಛತಾ ಕಾರ್ಯಕ್ಕೆ ವಿದ್ಯಾರ್ಥಿಗಳನ್ನು ಬಳಸಿಕೊಂಡಿರುವ ಕೆಲವು ಪ್ರಕರಣಗಳು ಬೆಳಕಿಗೆ ಬಂದಿದ್ದು, ಕಡ್ಡಾಯವಾಗಿ ವಿದ್ಯಾರ್ಥಿಗಳನ್ನು ಇಂತಹ ಕಾರ್ಯಗಳಿಗೆ ಬಳಸದೇ ಇರುವಂತೆ ಸುತ್ತೋಲೆಯಲ್ಲಿ ಸೂಚಿಸಿದೆ.

ಅನುದಾನವನ್ನು ಪ್ರಥಮ ಆದ್ಯತೆಯ ಮೇರೆಗೆ ಶೌಚಾಲಯ ನಿರ್ವಹಣೆಗೆ ಬಳಸಿಕೊಳ್ಳಬೇಕು ಮತ್ತು ನೈರ್ಮಲ್ಯಕ್ಕೆ ಪ್ರಥಮ ಆದ್ಯತೆ ನೀಡಬೇಕು. ನಂತರ ಉಳಿದ ಅನುದಾನವನ್ನು ಇತರೆ ಖರ್ಚುಗಳಿಗೆ ವೆಚ್ಚ ಮಾಡಬಹುದು ಎಂದು ತಿಳಿಸಲಾಗಿದೆ. 2023–24 ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದ ರೀತಿಯಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ ಮತ್ತು ಶಾಲೆಯ ಇತರೇ ನಿರ್ವಹಣೆಗೆ ಖರ್ಚು ಭರಿಸಲು ಈಗಾಗಲೇ ಅನುದಾನ 43. 52 ಕೋಟಿ ರೂ. ಗಳನ್ನು

ಜಿಲ್ಲಾವಾರು ಮತ್ತು ತಾಲ್ಲೂಕುವಾರು ಅನುದಾನ ಹಂಚಿಕೆ ಮಾಡಿ ರಾಜ್ಯದ ಎಲ್ಲಾ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಈ ಅನುದಾನವನ್ನು ಹೇಗೆ ಬಳಸಬೇಕು ಎಂದು ಸರ್ಕಾರ ಜ್ಞಾಪನಾ ಪತ್ರವನ್ನು ಹೊರಡಿಸಿದೆ.



1 ರಿಂದ 50 ಮಕ್ಕಳ ಸಂಖ್ಯೆ ಇದ್ದಲ್ಲಿ ಘಟಕ ವೆಚ್ಚ ರೂ. 20 ಸಾವಿರ, 51–100 ಮಕ್ಕಳಿದ್ದರೆ 28 ಸಾವಿರ, 101 ರಿಂದ 500 ಮಕ್ಕಳಿದ್ದರೆ 33 ಸಾವಿರ ಮತ್ತು 500 ಕ್ಕೂ ಹೆಚ್ಚು ಮಕ್ಕಳಿದ್ದರೆ ರೂ. 45 ಸಾವಿರ ವೆಚ್ಚ ಮಾಡಬಹುದಾಗಿದೆ.

**ಸ್ವಚ್ಛತೆ ಜವಾಬ್ದಾರಿ ಎಸ್ ಡಿ ಎಂಸಿ ಹೆಗಲಿಗೆ: ಮಧು ಬಂಗಾರಪ್ಪ:**

ಶಾಲೆಗಳಲ್ಲಿ ಸ್ವಚ್ಛ ಮಾಡುವ ಸಿಬ್ಬಂದಿ ಇಲ್ಲ ಎಂದು ಶಿಕ್ಷಕರು ಆರೋಪ ಮಾಡುತ್ತಿದ್ದಂತೆ ಎಚ್ಚೆತ್ತುಕೊಂಡ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಶಾಲೆ ಮತ್ತು ಶೌಚಾಲಯ ಸ್ವಚ್ಛಗೊಳಿಸುವ ಜವಾಬ್ದಾರಿಯನ್ನು ಎಸ್ ಡಿ ಎಂಸಿ ಸಮಿತಿಗೆ ನೀಡಲು ಉದ್ದೇಶಿಸಲಾಗಿದೆ ಎಂದು ತಿಳಿಸಿದ್ದು, ಈ ಸಂಬಂಧ ಅಧಿಸೂಚನೆ ಹೊರಡಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಶಾಲಾ ಮಕ್ಕಳಿಂದ ಯಾವುದೇ ಕೆಲಸ ಮಾಡಿಸಬಾರದು. ಇದರಿಂದ ಶಿಕ್ಷಣ ಇಲಾಖೆ ಮತ್ತು ಸರ್ಕಾರಕ್ಕೆ ಕೆಟ್ಟ ಹೆಸರು ಬರಲು ಕಾರಣವಾಗುತ್ತದೆ. ಆದ್ದರಿಂದ ಶಾಲಾ ಮಕ್ಕಳಿಂದ ಶೌಚಾಲಯ ಸ್ವಚ್ಛಗೊಳಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

# ಟಿಪ್ಪು ಸುಲ್ತಾನನಂತೆ ಹಿಂದೂ–ಮುಸ್ಲಿಮರನ್ನು ಒಡೆಯುತ್ತಿರುವ ಸಿಎಂ ಸಿದ್ದರಾಮಯ್ಯ: ಪ್ರತಿಪಕ್ಷ ನಾಯಕ ಆರ್.ಅಶೋಕ

### ರೈತರಿಗೆ ರೂ2 ಸಾವಿರ ಕೊಡುವ ಯೋಗ್ಯತೆ ಇಲ್ಲದ ಕಾಂಗ್ರೆಸ್ ಸರ್ಕಾರ ಓಟಿಗಾಗಿ ರೂ 11 ಸಾವಿರ ಕೋಟಿ ನೀಡಲಿದೆ

ಬೆಂಗಳೂರು: ಅಲ್ಪಸಂಖ್ಯಾತರ ಬಡಾವಣೆಗಳ ಸುಧಾರಣೆಗೆ 11 ಸಾವಿರ ಕೋಟಿ ರೂಪಾಯಿ ನೀಡುವುದಾಗಿ ಹೇಳಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಟಿಪ್ಪು ಸುಲ್ತಾನ ಮಾಡಿದಂತೆಯೇ ಹಿಂದೂ–ಮುಸ್ಲಿಮರನ್ನು ಬೇರೆ ಮಾಡುತ್ತಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ಹೊರಹಾಕಿದ್ದಾರೆ.

ಅವರು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದರು.

ಒಂದೇ ವಾರದಲ್ಲಿ ಪ್ರತಿ ರೈತರಿಗೆ 2 ಸಾವಿರ ರೂ. ನೀಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದರು. ವಾಸ್ತವವಾಗಿ ಪ್ರತಿಯೊಬ್ಬರಿಗೆ 30–40 ಸಾವಿರ ರೂ. ಕೊಡಬೇಕಿತ್ತು. ಇವರಿಗೆ ಅಷ್ಟು ಹಣ ನೀಡಲು ಕೂಡ ಯೋಗ್ಯತೆ ಇಲ್ಲ. ಬೆಳಗಾವಿ ಅಧಿವೇಶನದಲ್ಲಿ ವಿರೋಧ ಬರುತ್ತದೆಂದು 2 ಸಾವಿರ ರೂ. ಘೋಷಿಸಿದ್ದರು. ಅದನ್ನು ಕೊಡುವ ಯೋಗ್ಯತೆ ಇಲ್ಲದವರು ಮಾನ ಮರ್ಯಾದೆ ಇಲ್ಲದೆ 11 ಸಾವಿರ ಕೋಟಿ ರೂಪಾಯಿಯನ್ನು ಅಲ್ಪಸಂಖ್ಯಾತರ ಬಡಾವಣೆಗೆ ಖರ್ಚು ಮಾಡುತ್ತೇನೆ ಎಂದು ಹೇಳುತ್ತಾರೆ ಎಂದು ದೂರಿದರು.

ಹಿಂದೆ ಟಿಪ್ಪು ಸುಲ್ತಾನ ಹಿಂದೂ ಮುಸ್ಲಿಮರನ್ನು ಬೇರೆ ಮಾಡಿದಂತೆ ಸಿಎಂ ಸಿದ್ದರಾಮಯ್ಯನವರು ಈಗ ಮಾಡುತ್ತಿದ್ದಾರೆ. ಮುಸ್ಲಿಮರ ಕಾಲೋನಿ ಬೇರೆ, ಹಿಂದೂಗಳ ಪ್ರದೇಶ ಬೇರೆ ಎಂದು ವರ್ಗೀಕರಣ ಮಾಡಿ ಸಂವಿಧಾನಕ್ಕೆ ಅಪಚಾರವಸೆಗಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ, ಅಲ್ಪಸಂಖ್ಯಾತರಿಗೆ ಕಾಣಿಕೆ ಮೇಲೆ ಕಾಣಿಕೆ ನೀಡುತ್ತಿದ್ದರೆ, ಬರಗಾಲದಿಂದ ನೊಂದ ರೈತರಿಗೆ ನೇಣಿನ ಕುಣಿಕೆ ನೀಡಿದೆ. ಸಾಲ ತೀರಿಸಲಾಗದೆ ಕಳೆದ ಏಳು ತಿಂಗಳಲ್ಲಿ 500 ಕ್ಕೂ ಅಧಿಕ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಇಷ್ಟಿದ್ದರೂ ಅಲ್ಪಸಂಖ್ಯಾತರಿಗೆ ಬಂಪರ್ ಮೇಲೆ ಬಂಪರ್ ಕಾಣಿಕೆ ನೀಡುತ್ತಿದ್ದಾರೆ. ಈ ಹಿಂದೆ 10 ಸಾವಿರ ಕೋಟಿ ರೂಪಾಯಿ ಎಂದು ಘೋಷಣೆ ಮಾಡಿದ್ದರು. ಈಗ 1 ಸಾವಿರ ಕೋಟಿ ರೂ. ಸೇರಿ 11 ಸಾವಿರ ಕೋಟಿ ರೂಪಾಯಿ ಆಗಿದೆ ಎಂದರು.

ರಾಜ್ಯದಲ್ಲಿ ಅಭಿವೃದ್ಧಿಗೆ ಸಿಗುವುದೇ 50 ರಿಂದ 60 ಸಾವಿರ ಕೋಟಿ ರೂ. ಉಳಿದಿದ್ದು ವೆಚ್ಚಗಳಿಗೆ ಹೋಗುತ್ತದೆ. ಅದರಲ್ಲಿ 11 ಸಾವಿರ ಕೋಟಿ ರೂಪಾಯಿಯನ್ನು ಅಲ್ಪಸಂಖ್ಯಾತರ ಪ್ರದೇಶಗಳಿಗೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಿಂದೂಗಳ ಕಾಲೋನಿ ಎರಡನೇ ದರ್ಜೆಯದ್ದಾ? ದಲಿತರು ಇರುವ ಕಾಲೋನಿಗಳ ಪಾಡು ಏನು? ಎಂದು ಪ್ರಶ್ನೆ ಮಾಡಿದರು.

ಸಿಎಂ ಸಿದ್ದರಾಮಯ್ಯ ತುಘಲಕ್ ದರ್ಬಾರ್ ನಡೆಸುತ್ತಿದ್ದಾರೆ. ಲೋಕಸಭಾ ಚುನಾವಣೆಗೆ ಮುಸಲ್ಮಾನರನ್ನು ಓಲೈಕೆ ಮಾಡುವ ಪ್ರವೃತ್ತಿ ಅವರಿಗೆ ಕರಗತವಾಗಿದೆ. ಟಿಪ್ಪು ಸಂಸ್ಕೃತಿಯನ್ನು ಹೇರುವ ಕೆಲಸ ಮಾಡುತ್ತಿದ್ದಾರೆ. ಒಂದೇ ಒಂದು ಅಭಿವೃದ್ಧಿ ಯೋಜನೆಯ ಅಡಿಗಲ್ಲು ಹಾಕಿಲ್ಲವೆಂದು ಕಾಂಗ್ರೆಸ್ ಶಾಸಕರು ಹೇಳಿದ್ದಾರೆ. ಸರ್ಕಾರ ರೈತರ ತಲೆಯ ಮೇಲೆ ಕಲ್ಲು ಹಾಕಿದೆ ಎಂದು ದೂರಿದರು.

ಏಳು ತಿಂಗಳಲ್ಲಿ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ. ಹಿಂದಿನ ಸರ್ಕಾರದ ಯೋಜನೆಗಳ ಅನುದಾನ ಸ್ಥಗಿತಗೊಂಡಿದೆ. ಆದರೂ ಓಲೈಕೆ ರಾಜಕಾರಣ ನಡೆಯುತ್ತಿದೆ. ಪಿಎಫ್ಐ ಮೊದಲಾದ ಸಂಘಟನೆಗಳ ಮೇಲಿದ್ದ 135 ಪ್ರಕರಣಗಳನ್ನು ವಾಪಸು ಪಡೆಯಲಾಗಿದೆ. ಕೆಜಿ ಹಳ್ಳಿ, ಡಿಜೆ ಹಳ್ಳಿ ಘಟನೆ ಕುರಿತು ಮುಸ್ಲಿಮ್ ಶಾಸಕರು ಪತ್ರ ಬರೆದಾಗ ಸರ್ಕಾರ ಬಹಳ ಮುತುವರ್ಜಿ ವಹಿಸಿ ಕಡತವನ್ನು ಕಳುಹಿಸಿದೆ. ಕುಕ್ಕರ್ ಬಾಂಬ್ ಸ್ಫೋಟವಾದಾಗ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ನನ್ನ ಬ್ರದರ್ ಎಂದು ಹೇಳಿದ್ದರು. ಶಿವಮೊಗ್ಗದ ಘಟನೆಯಾದಾಗ ಆರೋಪಿಗಳೆಲ್ಲ ಅಮಾಯಕರು, ಬಂಧಿಸಬೇಡಿ ಎಂದು ಗೃಹ ಸಚಿವರು ಹೇಳಿದ್ದರು. ಇವನ್ನೆಲ್ಲ ನೋಡುತ್ತಿದ್ದರೆ ಯಾವ ದೇಶದಲ್ಲಿದ್ದೇವೆ ಎಂದು ಅರ್ಥವಾಗುವುದಿಲ್ಲ. ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವಾಗ ಎಲ್ಲ ಧರ್ಮದವರನ್ನು ಒಂದಾಗಿ ಕರೆದೊಯ್ಯುತ್ತೇನೆ ಎನ್ನುತ್ತಾರೆ. ಈಗ ಅದಕ್ಕೆ ಅಪವಾದವಾಗಿ ಕೆಲಸ ಮಾಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

### 132 ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣೆ

## ನಗರ ಸ್ವಚ್ಛತೆಗೆ ಪೌರಕಾರ್ಮಿಕರ ಪಾತ್ರ ಅತ್ಯಗತ್ಯ: ಸಚಿವ ಬಿ.ನಾಗೇಂದ್ರ

ಬಳ್ಳಾರಿ: ನಗರದಲ್ಲಿ ದಿನನಿತ್ಯದ ಸ್ವಚ್ಛತೆ ಸೇವೆ ಸೇರಿದಂತೆ ನಗರ ಸುಂದರೀಕರಣಕ್ಕೆ ಪೌರಕಾರ್ಮಿಕರ ಪಾತ್ರ ಅತ್ಯಗತ್ಯವಾಗಿದೆ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಹೇಳಿದರು.

ಇಲ್ಲಿಯ ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ಶನಿವಾರ ಹಮ್ಮಿಕೊಂಡಿದ್ದ 132 ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಳ್ಳಾರಿ ನಗರವನ್ನು ಸ್ವಚ್ಛ ಮತ್ತು ಸುಂದರವನ್ನಾಗಿ ಮಾಡಲು ಪಣ ತೊಟ್ಟಿದ್ದು, ಹಂತ ಹಂತವಾಗಿ ಪೌರ ಕಾರ್ಮಿಕರನ್ನು ನೇಮಕಾತಿ ಮಾಡಿಕೊಳ್ಳಲಾಗುವುದು.




ಈಗಾಗಲೇ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 341 ಪೌರಕಾರ್ಮಿಕರಲ್ಲಿ ಮೊದಲ ಹಂತವಾಗಿ 132 ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರಗಳನ್ನು ವಿತರಿಸಲಾಗುತ್ತಿದೆ ಎಂದರು.

ಖಾಯಂ ಉದ್ಯೋಗದ ಜೊತೆಗೆ ಭದ್ರತಾ ಸೇವೆ ಮತ್ತು ನೇಮಕಾತಿ ಆದೇಶ ಪತ್ರ ವಿತರಿಸಲಾಗಿದೆ. ಎರಡನೇ ಹಂತವಾಗಿ ಇನ್ನುಳಿದ ಪಾಲಿಕೆಯ ವಾಹನ ಚಾಲಕರು ಮತ್ತು ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಿಸಲಾಗುವುದು ಎಂದು ಹೇಳಿದರು.

ನೇಮಕಾತಿ ಪತ್ರ ಪಡೆದ ಎಲ್ಲಾ ಪೌರಕಾರ್ಮಿಕರು ಸಹ ತಮ್ಮ ಆರೋಗ್ಯದ ಕಡೆಗೆ ಗಮನ ನೀಡಬೇಕು. ಈ ದಿನ ಎಲ್ಲರ ಮುಖದಲ್ಲಿ ಮಂದಹಾಸವಿದೆ. ಬಹಳ ದಿನಗಳ ಬೇಡಿಕೆ ಈಗ ಈಡೇರಿದೆ. ಮುಂದಿನ ದಿನಗಳಲ್ಲಿ ಇನ್ನುಳಿದ ಪೌರಕಾರ್ಮಿಕರ ನೇಮಕಕ್ಕೆ ಕ್ರಮ ವಹಿಸಲಾಗುವುದು. ಯಾರೂ ಆತಂಕ ಪಡಬಾರದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ರಾಜ್ಯ ಸರ್ಕಾರದ 4 ಗ್ಯಾರಂಟಿ ಯೋಜನೆಗಳು ಸಕಾಲದಲ್ಲಿ ತಲುಪುತ್ತಿದೆಯೇ ಎಂದು ವಿಚಾರಿಸಿದರು. ನಂತರ 132 ಪೌರಕಾರ್ಮಿಕರಿಗೆ ನೇಮಕಾತಿ ಆದೇಶ ಪತ್ರ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ವಕ್ಫ್ ಮಂಡಳಿ ಅಧ್ಯಕ್ಷ ಹುಮಾಯೂನ್ ಖಾನ್, ಪಾಲಿಕೆಯ ಸ್ಥಾಯಿ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಸೆಬಿಗೆ ಡಿಆರ್ಎಚ್ಪಿ ಸಲ್ಲಿಸಿದ ವಾರೀ ಎನರ್ಜಿಸ್ ಲಿಮಿಟೆಡ್

ಹುಬ್ಬಳ್ಳಿ: 12 ಜಿಡಬ್ಲ್ಯೂನ ಅತಿದೊಡ್ಡ ಒಟ್ಟು ಸ್ಥಾಪಿತ ಸಾಮರ್ಥ್ಯ ಹೊಂದಿರುವ, ಭಾರತದಲ್ಲಿನ ಅತಿದೊಡ್ಡ ಸೌರ ಪಿವಿ ಮಾಡ್ಯೂಲ್‌ಗಳ ತಯಾರಕರಾದ ವಾರೀ ಎನರ್ಜಿಸ್ ಲಿಮಿಟೆಡ್, ಜೂನ್ 30, 2023ರ ಪ್ರಕಾರ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್ಎಚ್ಪಿ) ಅನ್ನು ಮಾರುಕಟ್ಟೆ ನಿಯಂತ್ರಕರಾದ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ(ಸೆಬಿ) ಗೆ ಸಲ್ಲಿಸಿದೆ.

ಕಂಪನಿಯ ಇನಿಷಿಯಲ್ ಪಬ್ಲಿಕ್ ಆಫರಿಂಗ್(ಐಪಿಓ) 30,000 ಮಿಲಿಯನ್ ವರೆಗಿನ ಒಟ್ಟುಗೂಡಿಸಲಾದ ಈಕ್ವಿಟಿ ಷೇರುಗಳ ಹೊಸ ಇಶ್ಯೂ ಮತ್ತು 10 ಮುಖಬೆಲೆಯ 3,200,000 ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆಯನ್ನು ಒಳಗೊಂಡಿದೆ.

ಮಾರಾಟದ ಆಫರ್ ವಾರೀ ಸಸ್ಟೈನಬಲ್ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್‌ನಿಂದ(ಹಿಂದೆ ಮಹಾವೀರ್ ಥರ್ಮೋಕ್ವಿಪ್ ಪ್ರೈವೇಟ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು) (ಪ್ರಮೋಟರ್ ಸೆಲ್ಲಿಂಗ್ ಶೇರ್‌ಹೋಲ್ಡರ್), 2,700,000ವರೆಗಿನ ಈಕ್ವಿಟಿ ಷೇರುಗಳು, ಚಂದೂರ್ಕರ್ ಇನ್ವೆಸ್ಟ್‌ಮೆಂಟ್‌ನಿಂದ 450,000ವರೆಗಿನ ಈಕ್ವಿಟಿ ಷೇರುಗಳು, ಸಮೀರ್ ಸುರೇಂದ್ರ ಶಾ (ಇತರ ಮಾರಾಟದ ಷೇರುದಾರರು) ರಿಂದ 50,000ವರೆಗಿನ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಕಂಪನಿಯು ಭಾರತದ ಒಡಿಶಾದಲ್ಲಿ 6 ಡಿಡಬ್ಲ್ಯೂನ ಇಂಗೋಟ್ ವೇಫರ್, ಸೌರ ಸೆಲ್ ಮತ್ತು ಸೌರ ಪಿವಿ ಮಾಡ್ಯೂಲ್ ಉತ್ಪಾದನಾ ಸೌಲಭ್ಯವನ್ನು ಸ್ಥಾಪಿಸುವ ವೆಚ್ಚವನ್ನು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಇಟ್ಟಿರುವ ಹಣಕಾಸಿನ ಭಾಗದ ನಿವ್ವಳ ಆದಾಯವನ್ನು ಬಳಸಿಕೊಳ್ಳಲು ಪ್ರಸ್ತಾಪಿಸುತ್ತದೆ.

ವಾರೀ ಎನರ್ಜಿಸ್ ಲಿಮಿಟೆಡ್ 2007ರಲ್ಲಿ ಸೌರ ಪಿವಿ ಮಾಡ್ಯೂಲ್ ತಯಾರಿಕೆಯ ಮೇಲೆ ಗಮನ ಕೇಂದ್ರೀಕರಿಸುವ ಕಾರ್ಯಾಚರಣೆಯನ್ನು ಪ್ರಾರಂಭಿಸಿತು.

ಇದು ಮಾರುಕಟ್ಟೆಗಳಾದ್ಯಂತ ಗುಣಮಟ್ಟದ, ವೆಚ್ಚ–ಪರಿಣಾಮಕಾರಿ ಸುಸ್ಥಿರ ಇಂಧನ ಪರಿಹಾರಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ.

ಕಾರ್ಬನ್ ಫುಟ್–ಪ್ರಿಂಟ್ ಅನ್ನು ಕಡಿಮೆ ಮಾಡುವಲ್ಲಿ ಸಹಾಯ ಮಾಡುತ್ತದೆ ಮತ್ತು ಸುಸ್ಥಿರ ಶಕ್ತಿಯ ಹಾದಿಯನ್ನು ಸುಗಮಗೊಳಿಸುವ ಮೂಲಕ ಜೀವನದ ಗುಣಮಟ್ಟವನ್ನು ಸುಧಾರಿಸುತ್ತದೆ. ಇಂದು, ಕಂಪನಿಯು ಜೂನ್ 30, 2023ರ ಪ್ರಕಾರ 12 ಜಿಡಬ್ಲ್ಯೂನ ಅತಿದೊಡ್ಡ ಒಟ್ಟು ಸ್ಥಾಪಿತ ಸಾಮರ್ಥ್ಯದೊಂದಿಗೆ ಭಾರತದಲ್ಲಿನ ಸೌರ ಪಿವಿ ಮಾಡ್ಯೂಲ್‌ಗಳ ಅತಿದೊಡ್ಡ ಉತ್ಪಾದಕ ಕಂಪನಿಯಾಗಿದೆ.

ಆರ್ಥಿಕ ವರ್ಷ 23ರಲ್ಲಿ, ಕಂಪನಿಯು ಭಾರತದಲ್ಲಿನ ಎಲ್ಲಾ ದೇಶೀಯ ಸೌರ ಪಿವಿ ಮಾಡ್ಯೂಲ್ ತಯಾರಕರಲ್ಲಿ ಎರಡನೇ ಅತ್ಯುತ್ತಮ ಕಾರ್ಯಾಚರಣೆ ಆದಾಯವನ್ನು ಹೊಂದಿದೆ.

ಸೌರ ಶಕ್ತಿಯ ಉತ್ಪನ್ನಗಳ ಪೋರ್ಟ್ ಫೋಲಿಯೋ ಈ ಕೆಳಗಿನ ಪಿವಿ ಮಾಡ್ಯೂಲ್‌ಗಳನ್ನು ಒಳಗೊಂಡಿದೆ: ಮಲ್ಟಿಕ್ರಿಸ್ಟಲಿನ್ ಮಾಡ್ಯೂಲ್‌ಗಳು; ಮೊನೊಕ್ರಿಸ್ಟಲಿನ್ ಮಾಡ್ಯೂಲ್‌ಗಳು; ಟಾಪ್‌ಕಾನ್ ಮಾಡ್ಯೂಲ್‌ಗಳು, ಹೊಂದಿಕೊಳ್ಳುವ(ಫ್ಲೆಕ್ಸಿಬಲ್) ಮಾಡ್ಯೂಲ್‌ಗಳು. ಇವು ಬೈಫೇಶಿಯಲ್ ಮಾಡ್ಯೂಲ್‌ಗಳನ್ನು (ಮೊನೊ ಪಿಇಆರ್ಸಿ) (ಫ್ರೇಮ್ಡ್ ಮತ್ತು ಅನ್‌ಫ್ರೇಮ್ಡ್) ಮತ್ತು ಬಿಲ್ಡಿಂಗ್ ಇಂಟಿಗ್ರೇಟೆಡ್ ಫೋಟೋ ವೋಲ್ಟಾಯಿಕ್ (ಬಿಐಪಿವಿ) ಮಾಡ್ಯೂಲ್‌ಗಳನ್ನೂ ಒಳಗೊಂಡಿದೆ.

# ತಿಮ್ಮಾಪುರ ಏತನೀರಾವರಿ ಯೋಜನೆಗೆ ಸಿಎಂ ಸಿದ್ದರಾಮಯ್ಯರಿಂದ ಲೋಕಾರ್ಪಣೆ

ರಾಯಚೂರು: ಜಿಲ್ಲೆಯ ಸಿಂಧನೂರು ತಾಲೂಕಿನ ಒಳಬಳ್ಳಾರಿ ಬಳಿ ತುಂಗಭದ್ರಾನದಿ ಮೂಲಕ 24 ಗ್ರಾಮಗಳ ಸುಮಾರು 40 ಸಾವಿರ ಎಕರೆ ಜಮೀನಿಗೆ ನೀರುಣಿಸುವ ತಿಮ್ಮಾಪುರ ಏತನೀರಾವರಿ ಯೋಜನೆಯನ್ನು ಸಿಂಧನೂರಿನಲ್ಲಿ ಶನಿವಾರ (ಇಂದು) ಸಿಎಂ ಸಿದ್ದರಾಮಯ್ಯ ಉದ್ಘಾಟಿಸಿದರು.

ಜಿಲ್ಲೆಯ ತುಂಗಭದ್ರಾ ನದಿ ಅಚ್ಚುಕಟ್ಟು ಪ್ರದೇಶದ ಜಮೀನುಗಳ ರೈತರು ನದಿ ಹತ್ತಿರದಲ್ಲಿದ್ದರೂ ನೀರಿನ ಸಮಸ್ಯೆ ಎದುರಿಸುತ್ತಿದ್ದರು.

ಹೀಗಾಗಿ 2018 ಫೆಬ್ರವರಿ 18ರಲ್ಲಿ ಸಿದ್ದರಾಮಯ್ಯ ಅವರು ಸಿಎಂ ಆಗಿದ್ದಾಗಲೇ ಯೋಜನೆಯ ಶಂಕುಸ್ಥಾಪನೆ ನೆರವೇರಿಸಿದ್ದರು. 2019 ರಲ್ಲಿ ಕಾಮಗಾರಿಯನ್ನ ಗುತ್ತಿಗೆ ನೀಡಲಾಗಿತ್ತು.

ತುಂಗಭದ್ರಾ ನದಿಯಿಂದ 160 ಎಚ್.ಪಿ ಸಾಮರ್ಥ್ಯದ 4 ಮೋಟರ್‌ಗಳನ್ನ ಅಳವಡಿಸಿ ನೀರೆತ್ತುವ ಯೋಜನೆಯನ್ನ 90 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ.

ನದಿಯಿಂದ 17.10 ಕಿಮೀ ಅಂತರದಲ್ಲಿರುವ ತುರಕಟ್ಟಿ ಗ್ರಾಮದ ಹತ್ತಿರದ ಆರ್.ಎನ್ ನಗರದ ಬಳಿಯ ತುಂಗಭದ್ರಾ ಎಡದಂಡೆ ನಾಲೆಯ ವಿತರಣಾ ಕಾಲುವೆ ನೀರು ಹಾಯಿಸುವುದು ಯೋಜನೆಯ ಮೂಲ ಉದ್ದೇಶವಾಗಿದೆ.

ನಂತರ ಕೆಳಭಾಗದ ಕಾಲುವೆ ಮತ್ತು ಅಕ್ಕಪಕ್ಕದ ಗ್ರಾಮಗಳ ರೈತರ ಜಮೀನುಗಳಿಗೆ



ನೀರು ಪೂರೈಕೆ ಮಾಡುವ ಗುರಿ ಹೊಂದಲಾಗಿದೆ.

ಈ ಯೋಜನೆಯಿಂದ ಕಾಲುವೆಯ ಕೆಳಭಾಗದ 40 ಸಾವಿರ ಎಕರೆ ಪ್ರದೇಶಕ್ಕೆ ಅನುಕೂಲವಾಗಲಿದೆ.

ತುಂಗಭದ್ರಾ ಎಡದಂಡೆ ಉಪಕಾಲುವೆಯ ನೀರು ಸಮರ್ಪಕವಾಗಿ ಜಮೀನುಗಳಿಗೆ ಹರಿಯದ ಕಾರಣ ತೊಂದರೆ ಅನುಭವಿಸುತ್ತಿದ್ದ ತಾಲೂಕಿನ 24ಕ್ಕೂ ಹೆಚ್ಚು ಗ್ರಾಮಗಳ ರೈತರ ಎರಡು ದಶಕಗಳ ಕನಸು ಈಗ ನನಸಾಗುತ್ತಿದೆ.

ವಾರ್ಷಿಕ ಮಳೆ ಪ್ರಮಾಣ ಕುಸಿತ, ತುಂಗಭದ್ರಾ ಅಣೆಕಟ್ಟೆಯಿಂದ ನೀರಿನ ಅಲಭ್ಯತೆಯಿಂದಾಗಿ ಈ ಭಾಗದ ರೈತರ ಜಮೀನುಗಳಿಗೆ ನೀರಿನ ಕೊರತೆಯಾಗಿತ್ತು.

ಇದರಿಂದ ಪ್ರತಿವರ್ಷ ರೈತರು ಬೆಳೆನಷ್ಟ ಅನುಭವಿಸುತ್ತಿದ್ದರು.

ತುಂಗಭದ್ರಾ ನದಿ ಪಕ್ಕದಲ್ಲಿದ್ದರೂ ಭತ್ತ ಸೇರಿ ತೋಟಗಾರಿಕೆ ಬೆಳೆ ಬೆಳೆಯಲು ಆಗದೇ ಅಸಹಾಯಕತೆ ವ್ಯಕ್ತಪಡಿಸುತ್ತಿದ್ದ ರೈತರು ಸರ್ಕಾರಕ್ಕೆ ಏತ ನೀರಾವರಿ ಯೋಜನೆಗೆ ಬೇಡಿಕೆಯಿಟ್ಟಿದ್ದರು.

ಅಂದಿನ ಶಾಸಕ ಹಂಪನಗೌಡ ಬಾದರ್ಲಿ ಈ ಯೋಜನೆ ಜಾರಿಗೊಳಿಸಲು ಮುಖ್ಯಮಂತ್ರಿಗಳ ಗಮನ ಸೆಳೆದಿದ್ದರು. ಈ ಹಿಂದೆ 2018 ರಲ್ಲಿ ಸಿಎಂ ಆಗಿದ್ದಾಗ ಈ ಯೋಜನೆಗೆ ಚಾಲನೆ ನೀಡಿದ್ದ ಸಿದ್ದರಾಮಯ್ಯ ಅವರೇ ಲೋಕಾರ್ಪಣೆ ಮಾಡುತ್ತಿರುವುದು ವಿಶೇಷವಾಗಿದೆ.

## ಅರ್ಜಿ ಆಹ್ವಾನ

ಶಿವಮೊಗ್ಗ: ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು 2023–24ನೇ ಸಾಲಿಗೆ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ಜಿಲ್ಲೆಯಿಂದ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸುತ್ತಿರುವ ಅರ್ಹ ಸಂಸ್ಥೆಗಳಿಗೆ ಮತ್ತು ವ್ಯಕ್ತಿಯನ್ನು ಒಳಗೊಂಡಂತೆ ಕಲೆ, ಕ್ರೀಡೆ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿರುವ ಮಹಿಳೆಯರು ಹಾಗೂ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಆತ್ಮಸ್ಥೈರ್ಯದಿಂದ ಹೋರಾಡಿ ಅಪಾಯದಿಂದ ವ್ಯಕ್ತಿಯ ಜೀವ ಉಳಿಸಿದ ಮಹಿಳೆಯರನ್ನು ಗುರುತಿಸಿ ಪ್ರಶಸ್ತಿ ನೀಡಲಾಗುತ್ತಿದ್ದು, ಅರ್ಹ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅರ್ಜಿ ನಮೂನೆಯನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 100 ಅಡಿರಸ್ತೆ, ಆಲ್ಕೋಳ, ಶಿವಮೊಗ್ಗ ಇವರಿಂದ ಪಡೆದು, ದಿ: 10/01/2024 ರೊಳಗಾಗಿ ಯೂನಿಕೋಡ್ (ನುಡಿ6.0) ನಲ್ಲಿಯೇ ಭರ್ತಿ ಮಾಡಿ ದ್ವಿಪ್ರತಿಗಳಲ್ಲಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ.: 08182–295515 ನ್ನು ಸಂಪರ್ಕಿಸುವುದು.

# ಧಾರ್ಮಿಕತೆ ರಾಜಕೀಯದಲ್ಲಿಯೂ ಸೇರಿದೆ: ಸಚಿವ ಸತೀಶ್ ಜಾರಕಿಹೊಳಿ

ರಾಣೇಬೆನ್ನೂರು: ದೇಶದಲ್ಲಿ ಎಲ್ಲದರಲ್ಲಿಯೂ ರಾಜಕೀಯ ಇದ್ದೆ ಇರುತ್ತದೆ. ಹೀಗಾಗಿ ಧಾರ್ಮಿಕತೆಯಲ್ಲಿಯೂ ರಾಜಕೀಯ ಸೇರಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ನಗರದ ಆರ್ಟಿ.ಇ.ಎಸ್ ಕಾಲೇಜಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಬಹಳ ಜನರ ನಿರೀಕ್ಷೆಯಂತೆ ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾಗಿದೆ. ಅಯೋಧ್ಯೆಗೆ ಇಂದು ಪ್ರಧಾನಿ ನರೇಂದ್ರ ಮೋದಿ ಅವರು ಭೇಟಿ ನೀಡುತ್ತಿದ್ದಾರೆ. ಚುನಾವಣಾ ವೇಳೆ ಅಭಿವೃದ್ಧಿಗಿಂತ ಧಾರ್ಮಿಕ ವಿಚಾರಗಳು ಹೈಲೆಟ್ ಆಗುತ್ತವೆ. ಆದರೆ ಚುನಾವಣೆ ಮುಗಿದ ಬಳಿಕ ಅದರ ಲಾಭ, ನಷ್ಟ ತಿಳಿಯಲಿದೆ ಎಂದು ತಿಳಿಸಿದ್ದಾರೆ.

ದೇಶದಲ್ಲಿ ಸುಮಾರು ಪ್ರತಿಷ್ಠಿತ ಮಂದಿರಗಳು ಇವೆ, ಬಹಳಷ್ಟು ಮಂದಿರದಲ್ಲಿ ರಾಮ ಮಂದಿರವು ಒಂದಾಗಿದೆ. ಈ ಮಂದಿರ ಮಾರ್ಡನ್ ಅರ್ಕಿಟೆಕ್ ನಿಂದ ಕೂಡಿದೆ ಎಂದರು. ಇನ್ನು ಅಯೋಧ್ಯೆ



ಏರ್ ಪೋರ್ಟ್ ಗೆ ವಾಲ್ಮೀಕಿ ಶ್ರೀಗಳ ಹೆಸರಿಟ್ಟ ವಿಚಾರ ಬಗ್ಗೆ ಮಾತನಾಡಿ, ಅಯೋಧ್ಯೆ ಏರ್ ಪೋರ್ಟ್ ಗೆ ವಾಲ್ಮೀಕಿಯವರ ಹೆಸರಿಟ್ಟಿದ್ದು ಸಂತಸದ ವಿಚಾರ. ನಾವು ಸ್ವಾಗತ ಮಾಡುತ್ತೇವೆ, ಇದನ್ನೆ ಈ ಹಿಂದೆ ನಾವು ಒತ್ತಾಯ ಮಾಡಿದ್ದೇವು. ರಾಮ ಮಂದಿರ ಪಕ್ಕದಲ್ಲೇ ವಾಲ್ಮೀಕಿ ಮಂದಿರ ನಿರ್ಮಾಣ ಮಾಡಬೇಕು. ಏಕೆಂದರೆ ರಾಮನನ್ನು ಪರಿಚಯಿಸಿದ್ದು ವಾಲ್ಮೀಕಿ ಎಂದು ತಿಳಿಸಿದರು.

ಡಿಸಿಎಂ ಆಯ್ಕೆ ವಿಚಾರ ಬಗ್ಗೆ ಮಾತನಾಡಿ, ಡಿಸಿಎಂ ಸ್ಥಾನದ ಬಗ್ಗೆ ಸದ್ಯ ಯಾವುದೇ ಪ್ರಸ್ತಾಪ ಮಾಡಿಲ್ಲ. ಡಿಸಿಎಂ ಮಾಡೋದು, ಬಿಡೋದು ಹೈಕಮಾಂಡ್ ಗೆ ಬಿಟ್ಟ ವಿಚಾರ. ಈ ಬಗ್ಗೆ ಹೈಕಮಾಂಡ್ ತಿರ್ಮಾನವೇ ಅಂತಿಮ ಎಂದು ತಿಳಿಸಿದರು.

ಕಲ್ಲಡ್ಕರ್ ಪ್ರಭಾಕರ್ ಭಟ್ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಸಚಿವ ಸತೀಶ್ ಜಾರಕಿಹೊಳಿ, ಕಲ್ಲಡ್ಕರ್ ಪ್ರಭಾಕರ್ ಭಟ್ ಮೇಲೆ ಈಗಾಗಲೇ ಕೇಸ್ ದಾಖಲಾಗಿದೆ. ಈ ಬಗ್ಗೆ ಕೋರ್ಟ್ ನಿರ್ಣಯ ಮಾಡುತ್ತದೆ. ಯಾವ ಸಮಯದಲ್ಲಿ ಏನ್ ಹೇಳಿದಾರೆ ಎನ್ನೋದು ಕೋರ್ಟ್ ಗಮನಿಸಿ ನಿರ್ಣಯಿಸುತ್ತದೆ. ಬಗ್ಗೆ ಕಾಯ್ದು ನೋಡೋಣ ಎಂದರು.

ಸಚಿವ ಮಧು ಬಂಗಾರಪ್ಪ ಚೆಕ್ ಬೌನ್ಸ್ ವಿಚಾರ ಬಗ್ಗೆ ಮಾತನಾಡಿ, ಸಚಿವ ಮಧು ಬಂಗಾರಪ್ಪ ಅವರು ಯಾಕೆ ರಾಜೀನಾಮೆ ಕೊಡಬೇಕು.? ಅದು ಖಾಸಗಿ ವಿಚಾರ. ವ್ಯವಹಾರದಲ್ಲಿ ಇದೆಲ್ಲಾ ಇರುತ್ತದೆ. ಇಂತಹ ಕೇಸ್ ಗಳು ಸಾಕಷ್ಟು ಆಗಿವೆ. ರಾಜಕೀಯವಾಗಿ ತಪ್ಪು ಮಾಡಿದರೆ ಬೇರೆ. ಬಿಜಿನೆಸ್ ಮಾಡೋರಿಗೆ ಇದೆಲ್ಲಾ ಇದ್ದೆ ಇರುತ್ತದೆ ಎಂದಿದ್ದಾರೆ.

# ಕರವೇ ಕಾರ್ಯಕರ್ತರ ಬಂಧನ ಖಂಡಿಸಿ ಹುಕ್ಕೇರಿಯಲ್ಲಿ ಪ್ರತಿಭಟನೆ

ಹುಕ್ಕೇರಿ: ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಅವರನ್ನು ಬಂಧಿಸಿರುವ ಕ್ರಮ ಖಂಡಿಸಿ ಪಟ್ಟಣದಲ್ಲಿ ಕರವೇ ಕಾರ್ಯಕರ್ತರು ಶನಿವಾರ ಪ್ರತಿಭಟನೆ ನಡೆಸಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಜಮಾಯಿಸಿದ ಕರವೇ ಕಾರ್ಯಕರ್ತರು, ಕೋರ್ಟ್ ಸರ್ಕಲವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು. ಬಳಿಕ ಮಾನವ ಸರಪಳಿ ನಿರ್ಮಿಸಿ ಸರ್ಕಾರ ಹಾಗೂ ಪೊಲೀಸರ ಕ್ರಮ ಖಂಡಿಸಿ ಆಕ್ರೋಶ ವ್ಯಕ್ತಪಡಿಸಿದರು. ಇದರಿಂದ ಕೆಲಕಾಲ ವಾಹನ ಹಾಗೂ ಜನ ಸಂಚಾರಕ್ಕೆ ಅಡಚಣೆಯಾಯಿತು. ಯಾವುದೇ ಅಹಿತಕರ ಘಟನೆ ನಡೆದಂತೆ ಪೊಲೀಸರು ಬಿಗು ಬಂದೋಬಸ್ತ್



ಏರ್ಪಡಿಸಿದ್ದರು.

ನಾಮಫಲಕಗಳಲ್ಲಿ ಕನ್ನಡ ಕಡ್ಡಾಯ ಬಳಕೆಗೆ ಆಗ್ರಹಿಸಿ ಬೆಂಗಳೂರಿನಲ್ಲಿ ಹೋರಾಟ ನಡೆಸಿದ ಕರವೇ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಮತ್ತು ಕನ್ನಡ ಹೋರಾಟಗಾರರನ್ನು ಬಂಧಿಸಿರುವುದು ಅತ್ಯಂತ ಖಂಡನೀಯವಾಗಿದೆ. ನಾಡು–ನುಡಿ, ನೆಲ–ಜಲ ರಕ್ಷಣೆಗಾಗಿ ಹೋರಾಟ ನಡೆಸುವವರನ್ನು ಹತ್ತಿಕ್ಕಲಾಗುತ್ತಿದೆ. ಕೂಡಲೇ ಬಂಧಿತರನ್ನು ಬಿಡುಗಡೆಗೊಳಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪಟ್ಟಣದಲ್ಲಿ ಅಳವಡಿಸಿರುವ ಆಂಗ್ಲ, ಮರಾಠಿ ಭಾಷೆ ನಾಮಫಲಕಗಳನ್ನು ತೆರವುಗೊಳಿಸಬೇಕು.

ಇಲ್ಲದಿದ್ದರೆ ಉಗ್ರ ಹೋರಾಟ ಮಾಡುವುದು ಅನಿವಾರ್ಯ ಎಂದು ಪ್ರತಿಭಟನಾಕಾರರು ತಹಶೀಲ್ದಾರರಿಗೆ ಸಲ್ಲಿಸಿದ ಮನವಿಯಲ್ಲಿ ಎಚ್ಚರಿಸಿದ್ದಾರೆ.

ತಾಲೂಕು ಅಧ್ಯಕ್ಷ ಪ್ರಮೋದ ಹೊಸಮನಿ, ಘಟಕ ಅಧ್ಯಕ್ಷ ಪ್ರಮೋದ ಕೂಗೆ, ಜಿಲ್ಲಾ ಸಂಚಾಲಕ ಮಹೇಶ ಹಟ್ಟಿಹೊಳಿ, ಮುಖಂಡರಾದ ರಾಮಚಂದ್ರ ರೆಂಗಟೆ, ಬಸು ಲೋಳಸೂರಿ, ಸಂತೋಷ ಸತ್ಯನಾಯಕ, ವಿನಾಯಕ ಕೋಳಿ, ರಾಬಿನ್ ಕೌಜಲಗಿ, ಚೇತನ ಮಗದುಮ, ಸೌರಭ ತಳವಾರ, ಲಕ್ಷ್ಮಣ ಪೂಜಾರಿ, ಆಕಾಶ ಜಿರಳೆ ಮತ್ತಿತರರು ಉಪಸ್ಥಿತರಿದ್ದರು.

# ಸೇತುವೆ ಕೆಳಗೆ ಸಿಲುಕಿದ ಹಳೆಯ ವಿಮಾನ, ಸಂಚಾರ ಅಸ್ತವ್ಯಸ್ತ

ಮೋತಿಹಾರಿ: ಲಖನೌದಿಂದ ಅಸ್ಸಾಂಗೆ ಟ್ರಕ್‌ನಲ್ಲಿ ಸಾಗಿಸುತ್ತಿದ್ದ ಹಳೆಯ ವಿಮಾನ, ಬಿಹಾರದ ಪೂರ್ವ ಚಂಪಾರಣ್ ಜಿಲ್ಲೆಯಲ್ಲಿ ಸೇತುವೆಯ ಕೆಳಗೆ ಸಿಲುಕಿಕೊಂಡಿದ್ದು, ಭಾರೀ ಟ್ರಾಫಿಕ್ ಜಾಮ್ ಉಂಟಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಶುಕ್ರವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಮೋತಿಹಾರಿಯ ಪಿಪರಕೋಠಿ ಬಳಿ ಈ ಘಟನೆ ನಡೆದಿದೆ.

ಮೋತಿಹಾರಿ(ಸದರ್) ಸಹಾಯಕ ಪೊಲೀಸ್ ಅಧೀಕ್ಷಕ(ಎಎಸ್‌ಪಿ) ರಾಜ್ ಪ್ರಕಾರ, "ಸ್ಕ್ರ್ಯಾಪ್ ಮಾಡಿದ ವಿಮಾನವನ್ನು ಲಖನೌನಿಂದ ಅಸ್ಸಾಂಗೆ ಟ್ರಕ್‌ನಲ್ಲಿ ಸಾಗಿಸಲಾಗುತ್ತಿತ್ತು. ಈ ವೇಳೆ ಮೋತಿಹಾರಿಯ ಪಿಪರಕೋಠಿ ಸೇತುವೆಯ ಕೆಳಗೆ ಟ್ರಕ್ ಸಿಲುಕಿಕೊಂಡಿತು. ಇದರಿಂದ ಟ್ರಾಫಿಕ್ ಜಾಮ್ ಉಂಟಾಗಿದೆ.

ಸೇತುವೆ ಕೆಳಗೆ ವಿಮಾನದ ಹಿಂಭಾಗ ಸಿಲುಕಿಕೊಂಡಿತ್ತು. ಇತರ ಟ್ರಕ್ ಚಾಲಕರು ಮತ್ತು ಸ್ಥಳೀಯರ ನೆರವಿನಿಂದ ನಾವು ಟ್ರಕ್ ತೆರೆವುಗೊಳಿಸಲು ಸಾಧ್ಯವಾಯಿತು.ಕೆಲವು ಗಂಟೆಗಳ ನಂತರ ಸಂಚಾರ ಮರುಸ್ಥಾಪಿಸಲಾಯಿತು ಎಂದು ರಾಜ್ ಹೇಳಿದ್ದಾರೆ.

'ಚಾಲಕ ಸೇತುವೆಯ ಎತ್ತರವನ್ನು ತಪ್ಪಾಗಿ ಗ್ರಹಿಸಿದ್ದರಿಂದ ಟ್ರಕ್ ಸೇತುವೆ ಕೆಳಗೆ ಸಿಲುಕಿಕೊಂಡಿದೆ' ಎಂದು ಅಧಿಕಾರಿ ತಿಳಿಸಿದ್ದಾರೆ.

## ವಿಜಯ ದಿವಸ–2023: ವೀರ ನಾರಿಯರಿಗೆ ಸನ್ಮಾನ

# ಯೋಧರ ಕುಟುಂಬಗಳನ್ನು ಗೌರವಿಸಬೇಕು: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಜಯ್ ದಿವಸ್ ಭಾರತಕ್ಕೆ ಅಪಾರ ಹೆಮ್ಮೆಯ ದಿನವಾಗಿದೆ. ಯುದ್ಧದ ಸಮಯದಲ್ಲಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ ಸೈನಿಕರಿಗೆ ಹಾಗೂ ಅವರ ಕುಟುಂಬದ ತ್ಯಾಗಮಯಿ ವೀರ ನಾರಿಯರಿಗೆ ಗೌರವ ಸಲ್ಲಿಸುವುದು ನಮ್ಮ ಕರ್ತವ್ಯ. ಅದರಂತೆ ದೇಶಕ್ಕೆ ಸೇವೆ ಸಲ್ಲಿಸುತ್ತಿರುವ ಯೋಧರ ಕುಟುಂಬವನ್ನು ಸಮಾಜದ ಪ್ರತಿಯೊಬ್ಬರೂ ಗೌರವಿಸಬೇಕು" ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಡಳಿತ ವತಿಯಿಂದ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಡಿ.30) ನಡೆದ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಹಾಗೂ ವಿಜಯ ದಿವಸ–2023ರ ಕಾರ್ಯಕ್ರಮದಲ್ಲಿ ವೀರನಾರಿಯರಿಗೆ ಸನ್ಮಾನಿಸಿ ಅವರು ಮಾತನಾಡಿದರು.

ಪ್ರತಿ ವರ್ಷದಂತೆ ಡಿಸೆಂಬರ್ 7 ರಂದು





ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ಹಾಗೂ ಡಿಸೆಂಬರ್ 16 ರಂದು ವಿಜಯ ದಿವಸ ಎಂದು ದೇಶದ ಎಲ್ಲೆಡೆ ಹಾಗೂ ಹೊರ ದೇಶಗಳಲ್ಲಿರುವ ಭಾರತೀಯರು ಸಹ ಆಚರಿಸುತ್ತಾರೆ. ಜಿಲ್ಲೆಯಲ್ಲಿ ಈ ವರ್ಷ ಡಿಸೆಂಬರ್ 4 ರಿಂದ ಡಿ.15 ರವರೆಗೆ ವಿಧಾನಮಂಡಲ ಚಳಿಗಾಲದ ಅಧಿವೇಶನ ನಡೆದ ಕಾರಣ ಇವತ್ತು ವಿಜಯ ದಿವಸ ಆಚರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

1971 ರಲ್ಲಿ ಪಾಕಿಸ್ತಾನದ ವಿರುದ್ಧ ನಡೆದ ಯುದ್ಧದಲ್ಲಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರ ಕುಟುಂಬದ ಸದಸ್ಯರಾದ ವೀರನಾರಿಯರಿಗೆ ಹಾಗೂ ಯುದ್ಧದಲ್ಲಿ ಗಾಯಗೊಂಡ ಮಾಜಿ ಯೋಧರಿಗೆ ಇವತ್ತಿನ ದಿನ ಸನ್ಮಾನ ಮಾಡುತ್ತಿರುವುದು ನಮ್ಮ ಸೌಭಾಗ್ಯ ಎಂದು ತಿಳಿಸಿದರು.

ಪ್ರತಿ ವರ್ಷ 1000 ರಿಂದ 1200 ಯೋಧರು ಗಡಿಯಲ್ಲಿ ತಮ್ಮ ಪ್ರಾಣ ತ್ಯಾಗ ಮಾಡುವುದರ ಮೂಲಕ ದೇಶದ ಭದ್ರತೆಗೆ ಸಾಕ್ಷಿಯಾಗಿದ್ದಾರೆ ಹಾಗೆ ಕುಟುಂಬದವರು ಸಹ ಈ ತ್ಯಾಗಕ್ಕೆ ಪ್ರಮುಖ ಕಾರಣರಾಗುತ್ತಾರೆ.

ಭಾರತದ ಸ್ವಾತಂತ್ರ್ಯ ಯೋಧರು ಹಾಗೂ ಸೈನಿಕರ ಕೊಡುಗೆಯಾಗಿ ನಾವು ಭಾರತದ 75ನೇ ಆಜಾದಿಕಾ ಅಮೃತ ಮಹೋತ್ಸವವನ್ನು ಆಚರಿಸಿದ್ದವೆ. ಯೋಧರು ತಮ್ಮ ತ್ಯಾಗ ಬಲಿದಾನದಿಂದ ನಮಗೆ ಸ್ವಾತಂತ್ರ್ಯ ನೀಡುವುದರ ಮೂಲಕ ದೇಶ ವಾಸಿಗಳಿಗೆ ನೆಮ್ಮದಿಯ ಬದುಕು ಕಲ್ಪಿಸಿಕೊಟ್ಟಿದ್ದಾರೆ ಅವರೆಲ್ಲರನ್ನೂ ನಾವು ನಿರಂತರ ಸ್ಮರಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಹೇಳಿದರು.

ವೀರ ನಾರಿಯರಿಗೆ ಸನ್ಮಾನ:

ಇದಕ್ಕೂ ಮುಂಚೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು 1971 ರಲ್ಲಿ ನಡೆದ ಯುದ್ಧದಲ್ಲಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರ ಕುಟುಂಬದ ಸದಸ್ಯರಾದ ವೀರ ನಾರಿಯರಿಗೆ ಹಾಗೂ ಯುದ್ಧದಲ್ಲಿ ಗಾಯಗೊಂಡ ಮಾಜಿ ಯೋಧರಿಗೆ ಸನ್ಮಾನಿಸಿ ಗೌರವಿಸಿದರು. ಅದೇ ರೀತಿಯಲ್ಲಿ ಸಶಸ್ತ್ರ ಪಡೆಗಳ ಧ್ವಜ ದಿನಾಚರಣೆ ನಿಮಿತ್ಯ ಸ್ಟಿಕರ್ ಗಳನ್ನು ಬಿಡುಗಡೆ ಮಾಡಿದರು.

# ನಿರಂತರ ಅಧ್ಯಯನದಿಂದ ಮಾತ್ರ ಯಶಸ್ಸು ಸಾಧ್ಯ: ಬಿಇಒ ಮನ್ನಿಕೇರಿ

ರಾಷ್ಟ್ರ ಪ್ರಶಸ್ತಿ ವಿಜೇತರ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಗೈದವರಿಗೆ ವಿದ್ಯಾರ್ಥಿಗಳಿಗೆ ಗಣ್ಯರಿಂದ ಸತ್ಕಾರ

ಮೂಡಲಗಿ: ನಿರಂತರ ಹಾಗೂ ವ್ಯಾಪಕವಾಗಿ ಅಧ್ಯಯನಕ್ಕಿಳಿದಾಗ ಮಾತ್ರ ಯಶಸ್ಸು ದೊರೆಯುತ್ತದೆ. ಇಲಾಖೆಯ ಅಧಿಕಾರಿ ವರ್ಗ ಸಹೋದ್ಯೋಗಿಗಳು ಶಿಕ್ಷಕರು ಪಾಲಕರು ಹಾಗೂ ಚುನಾಯಿತ ಪ್ರತಿನಿಧಿಗಳ ಸಹಕಾರದಿಂದ ಮಾತ್ರ ವಿಶೇಷ ಸಾಧನೆ ಗೈಯಲು ಸಾಧ್ಯ ಎಂದು ಕ್ಷೇತ್ರ ಶಿಕ್ಷಣಾದಿಕಾರಿ ಅಜಿತ ಮನ್ನಿಕೇರಿ ಹೇಳಿದರು.

ಸಮೀಪದ ಕೌಜಲಗಿ ಗ್ರಾಮದಲ್ಲಿ ಜರುಗಿದ ರಾಷ್ಟ್ರ ಪ್ರಶಸ್ತಿ ವಿಜೇತರ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಗೈದಿರುವವರ ಸತ್ಕಾರ ಹಾಗೂ ಕೌಜಲಗಿ ಸಮೂಹ ಮಟ್ಟದ ಆಪ್ತಾಲೋಚನೆ ಸಭೆಯಲ್ಲಿ ಮಾತನಾಡಿದರು. ಸರಕಾರಿ ಶಾಲೆಗಳಿಗೆ ವಿವಿಧ ಕ್ಷೇತ್ರಗಳಲ್ಲಿ ಮತ್ತು ಉನ್ನತ ವ್ಯಾಸಂಗದಲ್ಲಿ ಉತ್ಕೃಷ್ಟ ಸಾಧನೆಯ ವಿದ್ಯಾರ್ಥಿಗಳ ಪುರಸ್ಕಾರ, ಶತಮಾನಕಂಡ ಶಾಲೆಗಳ ಪೋಷಣೆ, ತೀವ್ರ ಶಿಕ್ಷಕರ ಕೊರತೆ ನೀಗಿಸುವಲ್ಲಿ ಅತಿಥಿ ಶಿಕ್ಷಕರ ನಿಯೋಜನೆ, ಎಸ್.ಎಸ್.ಎಲ್.ಸಿ. ಫಲಿತಾಂಶ ಸುಧಾರಣೆಯ ಶ್ರೇಷ್ಠ ಫಲಿತಾಂಶ



ಪಡೆದವರನ್ನು ಅಭಿನಂದಿಸುವಿಕೆ, ಬಿ.ಆರ್ಪಿ. ಮತ್ತು ಸಿ.ಆರ್ಪಿ. ಗಳಂತಹ ಶೈಕ್ಷಣಿಕ ಮೇಲುಸ್ತುವಾರಿ ಸಂಸ್ಥೆಗಳನ್ನು ಸಂಪನ್ಮೂಲ ಕೇಂದ್ರಗಳನ್ನಾಗಿ ಪರಿವರ್ತನೆಗೊಳಿಸಿ ಪುನಶ್ಚೇತನಗೊಳಿಸಲಾಗಿದೆ. . ಶೈಕ್ಷಣಿಕ ಕಾರ್ಯಕ್ರಮಗಳ ಆಯೋಜನೆ ಮತ್ತು ಅನುಷ್ಠಾನದಲ್ಲಿ ಶಾಸಕರಾದ ಬಾಲಚಂದ್ರ ಜಾರಕಿಹೊಳಿಯವರ ಶಿಕ್ಷಣಕ್ಕಾಗಿನ ನಿರಂತರ ಪ್ರೋತ್ಸಾಹವನ್ನು ಸ್ಮರಣಾರ್ಹವಾಗಿದೆ. ವಲಯದ ಶಿಕ್ಷಕರ ಶ್ರಮವು ಅವಿರತವಾಗಿದೆ ಎಂದು ನುಡಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತ ಎ.ಸಿ ಮನ್ನಿಕೇರಿ, ರಾಜ್ಯಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ವಿಜೇತ ಈರಣ್ಣ ಕಡಕೋಳ, ಕೌಜಲಗಿಯ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿಗಳು 14 ವರ್ಷದೊಳಗಿನ ಖೋ–ಖೋ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಸಾಧಸಿದ ವಿದ್ಯಾರ್ತಿಗಳು, ಅರಳಿಮಟ್ಟಿಯ ಸರಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳು ಕಲೋತ್ಸವ ಸ್ಪರ್ಧೆಯಲ್ಲಿ ಆಟಿಕೆ ತಯಾರಿಕೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದವರು, ಇಲಾಖಾ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಆವಿಷ್ಕಾರ ವಿಭಾಗದಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದವರನ್ನು ಸತ್ಕರಿಸಿ ಸನ್ಮಾನಿಸಿದರು.

ಪ್ರಾಸ್ತವಿಕವಾಗಿ ಮಾಲತೇಶ ಸಣ್ಣಕ್ಕಿ ಮಾತನಾಡಿದರು. ಎ.ಪಿ ಪರಸಣ್ಣವರ, ಕೆ.ಆರ್ ಅಜ್ಜಪ್ಪನವರ, ಬಿ.ಬಿ ಕಿವಟಿ, ಪಿ.ಬಿ ಕುಲಕರ್ಣಿ, ಎಸ್.ಎಮ್ ದಬಾಡಿ ಮಾತನಾಡಿ, ಮೂಡಲಗಿ ಶೈಕ್ಷಣಿಕ ವಲಯದಲ್ಲಿ ನಡೆಯುತ್ತಿರುವ ಶೈಕ್ಷಣಿಕ ಕಾರ್ಯಚಟುವಟಿಕೆಗಳು ಹಾಗೂ ಅವುಗಳನ್ನು ಫಲಪ್ರದಗೊಳಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ವಿವರಿಸಿದರು.

ಸಭೆಯಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾದ್ಯಕ್ಷ ಎಲ್.ಎಮ್ ಬಡಕಲ, ಶಿವಾನಂದ ಕುರನಗಿ, ಎನ್ ಜಿ ಹೆಬ್ಬಳ್ಳಿ, ಗೋವಿಂದ ಸಣ್ಣಕ್ಕಿ, ಆರ್ಪಿ ಕಟಗಾವಲಿ, ಅಲ್ಲಪ್ಪ ನಾಯಕ, ಸಿ.ಆರ್ಪಿಗಳಾದ ವಿ.ಐ ಮಿಲ್ಲಾನಟ್ಟಿ, ಎಚ್.ಎನ್ ಬೆಳಗಲಿ, ವಿ.ಆರ್ ಬರಗಿ ಹಾಗೂ ಸಮೂಹ ವ್ಯಾಪ್ತಿಯ ಶಿಕ್ಷಕರ ಬಳಗದವರು ಹಾಜರಿದ್ದರು. ಕಾರ್ಯಕ್ರಮವನ್ನು ಎ.ಎಸ್ ದಳವಾಯಿ ನಿರೂಪಿಸಿ, ವೆಂಕಟೇಶ ಕೌಜಲಗಿ ವಂದಿಸಿದರು.

# ಸಮಾಜದಲ್ಲಿ ವಕೀಲ ವೃತ್ತಿಗಿದೆ ಪವಿತ್ರ ಸ್ಥಾನ: ರಮೇಶ್ ಕತ್ತಿ



ಹುಕ್ಕೇರಿ: ಸಮಾಜದಲ್ಲಿ ವಕೀಲರಿಗೆ ವಿಶೇಷವಾದ ಗೌರವವಿದ್ದು ವೃತ್ತಿಗೆ ಚ್ಯುತಿ ಬರದಂತೆ ಸೇವೆ ಸಲ್ಲಿಸುವ ಮೂಲಕ ಮಾದರಿ ನ್ಯಾಯವಾದಿಗಳಾಗಿ ಹೊರಹೊಮ್ಮಬೇಕು ಎಂದು ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ್ ಕತ್ತಿ ಕಿವಿಮಾತು ಹೇಳಿದರು.

ತಾಲೂಕಿನ ಬೆಲ್ಲದ ಬಾಗೇವಾಡಿಯ ತಮ್ಮ ಗ್ರಹ ಕಚೇರಿಯಲ್ಲಿ ಶನಿವಾರ ಹುಕ್ಕೇರಿ ನ್ಯಾಯವಾದಿಗಳ ಸಂಘದ ನೂತನ ಪದಾಧಿಕಾರಿಗಳು ಏರ್ಪಡಿಸಿದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಬದ್ಧತೆ ಹಾಗೂ ಸೇವಾ ಮನೋಭಾವದೊಂದಿಗೆ ಕಕ್ಷಿದಾರರ ಹಿತ ಕಾಪಾಡುವಲ್ಲಿ ನ್ಯಾಯವಾದಿಗಳು ಮುತುವರ್ಜಿ ವಹಿಸಬೇಕು ಎಂದು ಸಲಹೆ ಮಾಡಿದರು.

ಚುನಾವಣೆಯಲ್ಲಿ ಸೋಲು ಗೆಲುವು ಸಹಜ. ಎರಡನ್ನೂ ಸಮಾನವಾಗಿ ಸ್ವೀಕರಿಸಿ ಮುಂಬರುವ ದಿನಗಳಲ್ಲಿ ನ್ಯಾಯವಾದಿಗಳ ಸಂಘವನ್ನು ರಾಜ್ಯದಲ್ಲಿಯೇ ಮಾದರಿಯನ್ನಾಗಿ ಮಾಡಬೇಕು.

ಇದಕ್ಕೆ ಬೇಕಾದ ಅಗತ್ಯ ಸಹಾಯ, ಸಹಕಾರ, ನೆರವು ನೀಡಲು ಕತ್ತಿ ಕುಟುಂಬ ಸದಾಕಾಲ ಬದ್ಧವಿದೆ ಎಂದು ಅವರು ಹೇಳಿದರು. ಸಂಘದ ಕಾರ್ಯದರ್ಶಿ ಎಸ್.ಜಿ.ನದಾಫ್, ಮಹಿಳಾ ಪ್ರತಿನಿಧಿ ಅನಿತಾ ಕುಲಕರ್ಣಿ, ಹಿರಿಯ ನ್ಯಾಯವಾದಿಗಳಾದ ಕೆ. ಬಿ. ಕುರಬೇಟ, ಎಸ್. ಆರ್.ಶೆಟ್ಟಿ, ಸಿ.ಎಂ.ಸಂಸುದ್ದಿ, ಬಿ.ಆರ್.ಚಂದರಗಿ, ಭೀಮಸೇನ ಬಾಗಿ, ಬಿ.ವಿ.ಹುಂಡೇಕಾರ ಆರ್ಪಿ.ಪಾಟೀಲ, ಸಂಜು ನಾಗನೂರಿ, ವೀರುಪಾಕ್ಷಿ ಹಳಿಜೋಳ, ವಿ.ಎ ಪಲ್ಲೆದ, ಎಚ್.ಎಲ್.ಪಾಟೀಲ, ಎಸ್.ಎಸ್.ಮರಿನಾಯಿಕ, ರಾಜೇಂದ್ರ ಮೋಶಿ, ಬಿ.ಎಸ್.ಕರಡಿ. ಆಶಾ ಸಿಂಗಾಡಿ, ರೂಪಾ ಬಡಗಾಂವಿ ಮತ್ತಿತರರು ಉಪಸ್ಥಿತರಿದ್ದರು.

# ಒಂದೇ ಕುಟುಂಬದ 4 ಕೊಲೆ ಕೇಸ್: ಬೆಳಗಾವಿ ಮೂಲದ ಆರೋಪಿ ಪ್ರವೀಣ್ ಜಾಮೀನು ಅರ್ಜಿ ವಜಾ



ಉಡುಪಿ: ನಗರದಲ್ಲಿ ಒಂದೇ ಕುಟುಂಬದ ನಾಲ್ವರ ಬರ್ಬರ ಕೊಲೆ ಪ್ರಕರಣ ಆರೋಪಿ ಪ್ರವೀಣ್ ಚೌಗುಲೆ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಉಡುಪಿಯ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತಿರಸ್ಕರಿಸಿ ಆದೇಶ ಹೊರಡಿಸಿದೆ.

ಬೆಳಗಾವಿ ಜಿಲ್ಲೆಯ ಕುಡಿಚಿ ಮೂಲದ ಆರೋಪಿ ಪ್ರವೀಣ್ ಚೌಗುಲೆ ಸದ್ಯ ನ್ಯಾಯಾಂಗ ಬಂಧನದಲ್ಲಿದ್ದು, ಜಾಮೀನು ಕೋರಿ ಡಿಸೆಂಬರ್ 14ರಂದು ವಕೀಲ ಕೆ.ಎಸ್.ಎನ್.ರಾಜೇಶ್ ಮೂಲಕ ಅರ್ಜಿ ಸಲ್ಲಿಸಿದ್ದ. ಜಾಮೀನಿಗೆ ಸರ್ಕಾರಿ ಅಭಿಯೋಜಕ ಪ್ರಕಾಶ್‌ಚಂದ್ರ ಶೆಟ್ಟಿ ಆಕ್ಷೇಪಣೆ ವ್ಯಕ್ತಪಡಿಸಿದ್ದರು. ಜಾಮೀನು ಅರ್ಜಿ ವಜಾಗೊಳಿಸಿ ನ್ಯಾಯಾಧೀಶ ದಿನೇಶ್ ಹೆಗ್ಡೆ ಆದೇಶ ಹೊರಡಿಸಿದೆ.

ಒಂದೇ ಕಂಪನಿಯಲ್ಲಿ ಜೊತೆ ಜೊತೆಗೆ ಕೆಲಸ ಮಾಡ್ತಿದ್ದವನೇ ಇರಿದು ಇರಿದು ಕೊಂದಿದ್ದ. ಹಲವಾರು ಬಾರಿ ಸಹಾಯ ಮಾಡಿದ್ದವನೇ ಮಾಡ ಬಾರದ ಕೆಲಸ ಮಾಡಿದ್ದ. ರಾಜ್ಯವನ್ನೇ ಬೆಚ್ಚಿ ಬೀಳಿಸಿದ ಉಡುಪಿಯ ನಾಲ್ವರ ಹತ್ಯೆ ಪ್ರಕರಣದಲ್ಲಿ ಮತ್ತಷ್ಟು ಸಂಗತಿಗಳು ಬಯಲಾಗಿವೆ. ಪೊಲೀಸರು ಒಂದು ಹಂತದ ತನಿಖೆ ಮುಗಿಸಿದ್ದಾರೆ.

ಒಂದೇ ಕುಟುಂಬದ ನಾಲ್ವರ ಬರ್ಬರ ಹತ್ಯೆ ಮಾಡಿದ್ದ ಆರೋಪಿ ಪೊಸೆಸಿವ್ನೆಸ್ನಿಂದ ಕೊಲೆ ಮಾಡಬೇಕೆಂದು ಪೂರ್ವಸಿದ್ಧತೆ ಮಾಡಿಕೊಂಡಿದ್ನಂತೆ. ಆರೋಪಿ ಪ್ರವೀಣ್ ಜತೆ ಅಯ್ನಾಝ್ ಒಂದು ತಿಂಗಳಿಂದ ಸರಿಯಾಗಿ ಮಾತನಾಡ್ತಿರಲಿಲ್ವಂತೆ.

ಹೀಗಾಗಿ ಕೊಲೆ ಮಾಡಬೇಕೆಂದು ಸ್ಕೆಚ್ ಹಾಕಿದ್ನಂತೆ. ಕೊಲೆ ಮಾಡುವ ದಿನ ಟೋಲ್ ಗೇಟ್ ಬಳಿ ಕಾರು ಬಿಟ್ಟು ಬೇರೆ ವಾಹನದಲ್ಲಿ ಡ್ರಾಪ್ ಪಡೆದುಕೊಂಡು ತೃಪ್ತಿನಗರಕ್ಕೆ ಬಂದಿದ್ನಂತೆ. ಹತ್ಯೆ ಬಳಿಕ ಚಾಕು ಮನೆಯಲ್ಲೇ ಇಟ್ಟು ಹೆಂಡತಿಯ ಸಂಬಂಧಿಕರ ಮನೆಗೆ ಹೋಗಿದ್ನಂತೆ.

ಪ್ರಕರಣ ಸಂಬಂಧ ಕುಟುಂಬಸ್ಥರು ಮಾತನಾಡಿ, ಹಂತಕನ ವಿರುದ್ಧ ಕಠಿಣ ಕ್ರಮಕ್ಕೆ ಪಟ್ಟು ಹಾಕಿದ್ದರು.

ಇನ್ನು, ಕೆಲಸ ಮಾಡೋ ಸ್ಥಳದಲ್ಲಿ ಮಹಿಳೆಯರಿಗೆ ಅಭದ್ರತೆ ಕಾಡುತ್ತಿದೆ. ಇದು ಕೊನೆ ಆಗ್ಬೇಕೆಂದು ಆಗ್ರಹಿಸಿದ್ದರು.

## ಫಾಲ್ಸ್ ನೋಡಲು ತೆರಳಿದ್ದ ವಿದ್ಯಾರ್ಥಿಗಳು ಕಾಡಿನಲ್ಲಿ ಕಣ್ಮರೆ

# ಅರಣ್ಯ ಇಲಾಖೆ ಸಿಬ್ಬಂದಿಯಿಂದ 9 ಜನರ ರಕ್ಷಣೆ

ಬೆಳಗಾವಿ: ಚಾರಣಕ್ಕೆಂದು ಹೋಗಿ ಕಾಡಿನಲ್ಲಿ ಕಣ್ಮರೆಯಾಗಿದ್ದ ಬೆಳಗಾವಿ ಕಾಲೇಜುವೊಂದರ 9 ವಿದ್ಯಾರ್ಥಿಗಳನ್ನು ಕರ್ನಾಟಕ ಹಾಗೂ ಗೋವಾ ಅರಣ್ಯ ಇಲಾಖೆ ಸಿಬ್ಬಂದಿ ಜಂಟಿ ಕಾರ್ಯಾಚರಣೆ ಮೂಲಕ ರಕ್ಷಣೆ ಮಾಡಿದ್ದಾರೆ.

ಕಣ್ಮರೆಯಾಗಿದ್ದ 9 ವಿದ್ಯಾರ್ಥಿಗಳು ಕರ್ನಾಟಕ– ಗೋವಾ ಗಡಿಭಾಗದಲ್ಲಿರುವ ಜಲ್ವಾಣಿ ಫಾಲ್ಸ್ ನೋಡುವ ಸಲುವಾಗಿ ಕಣಕುಂಬಿ ಅರಣ್ಯ ಪ್ರದೇಶದ ಮೂಲಕ ತೆರಳಿದ್ದರು. ಈ ಯುವಕರು ಪಾರವಾಡ ಗ್ರಾಮದಿಂದ ಮೂರು ಕಿಲೋಮೀಟರ್ ಬೈಕ್‌ನಲ್ಲಿ ತೆರಳಿದ್ದು,



ಬಳಿಕ ಕಾಲು ದಾರಿಯಲ್ಲೇ ಜಲ್ವಾಣಿ ಫಾಲ್ಸ್‌ಗೆ ತೆರಳಿ ಎಂಜಾಯ್ ಮಾಡಿದ್ದರು.

ಶುಕ್ರವಾರ ಸಂಜೆ ಮರಳಿ ಬರುವ ವೇಳೆ ದಾರಿ ತಿಳಿಯದೇ ಯುವಕರು ದಟ್ಟ ಕಾಡಿನಲ್ಲಿ ಕಣ್ಮರೆಯಾಗಿದ್ದಾರೆ. ತಕ್ಷಣವೇ ಯುವಕರು ಸ್ನೇಹಿತರಿಗೆ ಫೋನ್ ಮಾಡಿ ಕಾಡಿನಲ್ಲಿ ಕಣ್ಮರೆಯಾಗಿರುವ ಕುರಿತು ಮಾಹಿತಿ ರವಾನಿಸಿದ್ದಾರೆ.

ಇದಾದ ಬಳಿಕ ರಾತ್ರಿಯಿಡೀ ಕರ್ನಾಟಕ ಹಾಗೂ ಗೋವಾ ಅರಣ್ಯ ಇಲಾಖೆ ಸಿಬ್ಬಂದಿ ಜಂಟಿ ಕಾರ್ಯಾಚರಣೆ ನಡೆಸಿದ್ದಾರೆ. ರಾತ್ರಿ 8 ಗಂಟೆಯಿಂದ ಬೆಳಗ್ಗೆ 5 ಗಂಟೆಯವರೆಗೆ 30 ಸಿಬ್ಬಂದಿ ಕಾರ್ಯಾಚರಣೆ ನಡೆಸಿದ್ದು, ವಿದ್ಯಾರ್ಥಿಗಳನ್ನು ಪತ್ತೆಹಚ್ಚಿ ಸುರಕ್ಷಿತವಾಗಿ ಕಾಡಿನಿಂದ ಹೊರಗೆ ಕರೆದುಕೊಂಡು ಬಂದಿದ್ದಾರೆ. ಖಾನಾಪುರ ಎಸಿಎಫ್ ಸಂತೋಷ ಚೌಹಾಣ್ ಮಾರ್ಗದರ್ಶನದಲ್ಲಿ ಕಾರ್ಯಾಚರಣೆ ನಡೆಸಲಾಗಿದೆ.

ಕಣಕುಂಬಿ ಆರ್‌ಎಫ್‌ಒ ಶಿವಕುಮಾರ್, ಭೀಮಗಡ ಆರ್‌ಎಫ್‌ಒ ರಾಕೇಶ್, ಖಾನಾಪುರ ಆರ್‌ಎಫ್‌ಓ ನಾಗರಾಜ್, ಡಿಆರ್‌ಎಫ್‌ಒ ವಿನಾಯಕ್ ಪಾಟೀಲ್, ಗೋವಾದ ಮಹಾದಾಯಿ ವೈಲ್ಡ್ ಲೈಫ್ ಡಿಎಫ್‌ಒ ಆನಂದ್ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ಇನ್ನು ಅಕ್ರಮ ಅರಣ್ಯ ಪ್ರದೇಶ ಪ್ರವೇಶ ಆರೋಪದಡಿ ಗೋವಾ ಅರಣ್ಯ ಇಲಾಖೆಯಿಂದ ವಿದ್ಯಾರ್ಥಿಗಳ ವಿರುದ್ಧ ದೂರು ದಾಖಲಿಸಲಾಗಿದೆ.

## ಟೀ ಅಂಗಡಿಗೆ ಟ್ರಕ್ ನುಗ್ಗಿಸಿದ ಚಾಲಕ: ಐವರ ದುರ್ಮರಣ




ಚೆನ್ನೈ: ಚಾಲಕನೊಬ್ಬ ನಿದ್ದೆ ಮಂಪರಿನಲ್ಲಿ ಟೀ ಅಂಗಡಿಯೊಳಗೆ ಟ್ರಕ್ ನುಗ್ಗಿಸಿದ ಪರಿಣಾಮ ಐವರು ದಾರುಣವಾಗಿ ಮೃತಪಟ್ಟ ಘಟನೆ ತಮಿಳುನಾಡಿನ ಪುದುಕೊಟ್ಟೈ ಜಿಲ್ಲೆಯಲ್ಲಿ ಶನಿವಾರ ನಡೆದಿದೆ.

ಈ ಅವಘಡದಲ್ಲಿ 19 ಮಂದಿ ಗಾಯಗೊಂಡಿದ್ದು, ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಸಿಮೆಂಟ್ ತುಂಬಿದ ಟ್ರಕ್ ಅರಿಯಲೂರಿನಿಂದ ಶಿವಗಂಗೈಗೆ ತೆರಳುತ್ತಿತ್ತು.

ಹೀಗೆ ಹೋಗುತ್ತಿದ್ದ ಸಂದರ್ಭದಲಿ ಚಾಲಕನಿಗೆ ನಿದ್ದೆ ಬಂದಿದ್ದು, ಪರಿಣಾಮ ಟ್ರಕ್ ಚಾಲಕನಿಂದ ನಿಯಂತ್ರಣ ಕಳೆದುಕೊಂಡು ಕೆಲವು ವಾಹನಗಳಿಗೆ ಡಿಕ್ಕಿ ಹೊಡೆದು ಬಳಿಕ ಟೀ ಅಂಗಡಿಗೆ ನುಗ್ಗಿದೆ.

ಇತ್ತ ಟೀ ಅಂಗಡಿಯಲ್ಲಿ ಶಬರಿಮಲೆ ಯಾತ್ರಾರ್ಥಿಗಳು ಟೀ ಕುಡಿಯುತ್ತಿದ್ದರು. ಈ ವೇಳೆ ಟ್ರಕ್ ಏಕಾಏಕಿ ನುಗ್ಗಿದೆ. ಅಪಘಾತದಿಂದ ಟೀ ಅಂಗಡಿ ಬಳಿ ನಿಲ್ಲಿಸಿದ್ದ ಕಾರು ಹಾಗೂ ಇತರೆ ದ್ವಿಚಕ್ರ ವಾಹನಗಳಿಗೂ ಹಾನಿಯಾಗಿದೆ. ಪ್ರಾಥಮಿಕ ತನಿಖೆಯ ಪ್ರಕಾರ, ಸಿಮೆಂಟ್ ಟ್ರಕ್ ಚಾಲನೆ ಮಾಡುವಾಗ ನಿದ್ರಿಸಿದ ಕಾರಣ ಚಾಲಕ ತನ್ನ ನಿಯಂತ್ರಣ ಕಳೆದುಕೊಂಡಿದ್ದಾನೆ ಎಂದು ಪೊಲೀಸರು ಹೇಳಿದ್ದಾರೆ. ಸದ್ಯ ಘಟನೆ ಸಂಬಂಧ ತನಿಖೆ ಮುಂದುವರಿದಿದೆ.

## ಸಮ ಸಮಾಜ ನಿರ್ಮಾಣವಾಗಲು ಅಸಮಾನತೆ ತೊಲಗಲೇಬೇಕು: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಸಂವಿಧಾನದ ಧ್ಯೇಯೋದ್ದೇಶಗಳನ್ನು ಜಾರಿಗೊಳಿಸುವುದು ಸರ್ಕಾರದ ಜವಾಬ್ದಾರಿ. ಸಂವಿಧಾನದ ಆಶಯಗಳನ್ನು ಈಡೇರಿಸಲು ದುರ್ಬಲ ವರ್ಗದವರಿಗೆ ಆರ್ಥಿಕ , ಸಾಮಾಜಿಕ ಶಕ್ತಿ ತುಂಬುವ ಕೆಲಸವನ್ನು ಸರ್ಕಾರ ಮಾಡುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಿಳಿಸಿದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಿಡುಮಾಮಿಡಿ ಶ್ರೀ ಪೀಠಾರೋಹಣ–33 ಕಾರ್ಯಕ್ರಮವನ್ನು ಉದ್ಘಾಟಿಸಿ 'ಹೋರಾಟಕ್ಕೆ ಸಾವಿಲ್ಲ' ಮತ್ತು 'ಓಲೆ ಒಳದನಿ' ಕೃತಿಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಸಮಾಜ ಬದಲಾವಣೆಯಾಗಬೇಕು. ಸಮಾಜದಲ್ಲಿನ ವೈರುಧ್ಯಗಳು, ಜಾತೀಯತೆ, ಅಸಮಾನತೆಗಳು ತೊಲಗಬೇಕು. ಇದು ಆದಾಗ ಮಾತ್ರ ಸಮಾಜ ಪರಿವರ್ತನೆಯಾಗಲು ಸಾಧ್ಯ. ಸಮ ಸಮಾಜ ನಿರ್ಮಾಣವಾಗಲು




ಅಸಮಾನತೆ ತೊಲಗಲೇಬೇಕು. ಮನುಷ್ಯನ ಸ್ವಾರ್ಥದಿಂದ ಸಮಾಜದಲ್ಲಿ ಅಸಮಾನತೆ ಉಂಟಾಗಿದೆ. ಆದ್ದರಿಂದ ಡಾ.ಅಂಬೇಡ್ಕರ್ ಅವರು ಆರ್ಥಿಕ ಹಾಗೂ ಸಾಮಾಜಿಕ ಅಸಮಾನತೆಯನ್ನು ನೀಗಿಸದೇ ಹೋದರೆ, ದೇಶಕ್ಕೆ ಸ್ವಾತಂತ್ರ್ಯ ದೊರೆತರೂ ಪ್ರಯೋಜನವಿಲ್ಲ ಎಂದಿದ್ದರು.

ಸಾಮಾಜಿಕ ನ್ಯಾಯದ ತಳಹದಿಯ ಪ್ರಜಾಪ್ರಭುತ್ವ ನಿಲ್ಲಬೇಕು ಎಂದು ಬಾಬಾ ಸಾಹೇಬರು ಪ್ರತಿಪಾದಿಸಿದ್ದರು. ಹಿಂದುಳಿದವರಿಗೆ ಆರ್ಥಿಕ , ಸಾಮಾಜಿಕ ಸಮಾನತೆ ದೊರೆತಾಗ ಮಾತ್ರ ಸ್ವಾತಂತ್ರ್ಯ ಸಾರ್ಥಕವಾಗುತ್ತದೆ. ಈ ಅಂಶವನ್ನು ಗಮನದಲ್ಲಿರಿಸಿ ಕಾರ್ಯನಿರ್ವಹಿಸುವುದು ಎಲ್ಲರ ಜವಾಬ್ದಾರಿ ಎಂದರು.

ಮನುಷ್ಯತ್ವ ಪ್ರತಿಯೊಬ್ಬರ ಅಂತಿಮ ಗುರಿಯಾಗಬೇಕು. ಅಲ್ಪಮಾನವರಾಗದೇ, ವಿಶ್ವಮಾನವರಾಗುವತ್ತ ನಮ್ಮೆಲ್ಲರ ಪ್ರಯತ್ನವಿರಬೇಕು. ಸಾಮಾಜಿಕ ಹಾಗೂ ಆರ್ಥಿಕ ಚಟುವಟಿಕೆಗಳ ಮೂಲಕ ಸಮಾಜದಲ್ಲಿ ಚಲನೆ ಉಂಟಾಗುತ್ತದೆ. ಸಮಾಜದಲ್ಲಿ ಬದಲಾವಣೆ ಆಗುವವರೆಗೂ ಹೋರಾಟ ನಡೆಸುವ ಗುರಿಯಿಂದಲೇ'ಹೋರಾಟಕ್ಕೆ ಸಾವಿಲ್ಲ' ಎಂಬ ಕೃತಿಯನ್ನು ಹೊರತರಲಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಹೋರಾಟವನ್ನು ಹತ್ತಿಕ್ಕಬಾರದು. ಆದರೆ ಹೋರಾಟಗಳು ಅಹಿಂಸಾತ್ಮಕವಾಗಿರಬೇಕೆಂದು ತಿಳಿಸಿದರು.

ಚಿಕ್ಕಬಳ್ಳಾಪುರ ಶ್ರೀ ನಿಡುಮಾಮಿಡಿ ಮಠದ ವತಿಯಿಂದ ಧಾರ್ಮಿಕ ಚಟುವಟಿಕೆಗಳು, ಶಿಕ್ಷಣ ಸಂಸ್ಥೆಗಳು ನಡೆಯುತ್ತಿವೆ. ಶ್ರೀ ಮಠವು ಯಾವುದೇ ಜಾತಿ, ಧರ್ಮ, ಸಂಸ್ಕೃತಿಗಳಿಗೆ ಮೀಸಲಾಗದ ಜಾತ್ಯಾತೀತವಾದ ಮಾನವೀಯ ಧರ್ಮ ಪೀಠ ಎನಿಸಿದೆ. ಸ್ವಾಮೀಜಿಗಳು ನಿರ್ಭಿತಿಯಿಂದ ನಿಷ್ಕಲ್ಮಶವಾಗಿ ಜಾತ್ಯಾತೀತ ಮಾನವೀಯ ಸಮಾಜ ಸ್ಥಾಪನೆಯಾಗಬೇಕೆಂಬ ಆಶಯವನ್ನು ಹೊಂದಿದ್ದು, ತಮ್ಮ ಜೀವನದುದ್ದಕ್ಕೂ ಆ ನಿಟ್ಟಿನಲ್ಲಿ ಶ್ರಮಿಸುತ್ತಿದ್ದಾರೆ. ಮಾನವ ಧರ್ಮ ಸ್ಥಾಪಿಸುವ ಶ್ರೀಮಠದ ಗುರಿ ಈಡೇರಿಕೆಗೆ ಸರ್ಕಾರ ಎಲ್ಲ ರೀತಿಯ ಸಹಕಾರವನ್ನು ನೀಡಲಿದೆ ಎಂದರು.

ವೀರಭದ್ರ ಚನ್ನಮಲ್ಲ ದೇಶೀಕೇಂದ್ರ ಮಹಾಸ್ವಾಮೀಜಿ, ಸಾರಂಗಧರ ದೇಶೀಕೇಂದ್ರ ಮಹಾಸ್ವಾಮೀಜಿ ದಿವ್ಯ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್, ಸಂಸ್ಕೃತಿ ಚಿಂತಕರಾದ ರಂಜಾನ್ ದರ್ಗಾ, ಡಾ.ನಟರಾಜ್ ಹುಳಿಯಾರ್ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

## ಶೈಕ್ಷಣಿ ಸೌಲಭ್ಯಗಳು ಸದುಪಯೋಗ ಪಡಿಸಿಕೊಳ್ಳಿ: ರಾಹುಲ್ ಜಾರಕಿಹೊಳಿ

ಯಮಕನಮರಡಿ: ಮಕ್ಕಳಿಗೆ ಉತ್ತಮ ಗುಣಾತ್ಮಕ ಶಿಕ್ಷಣ ದೊರೆಯಬೇಕಾದರೆ ಶಾಲೆಯಲ್ಲಿ ಕಲಿಕಾ ಸಾಮಗ್ರಿಗಳು ಇನ್ನಿತರ ಸೌಲಭ್ಯಗಳು ಸಿಗಬೇಕು ಇದಕ್ಕೆ ಪೂರಕವಾಗಿ ಪ್ರಥಮದರ್ಜೆಯ ಶಾಲಾ ಕಟ್ಟಡಗಳು ಬೇಕು ಇದರಿಂದ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯಾಗುವುದೆಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.



ಚಿಲಭಾಂವಿ ಗ್ರಾಮದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿವೇಕ ಯೋಜನೆಯಡಿಯಲ್ಲಿ ನಿರ್ಮಿಸಲಾದ 2 ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಉತ್ತಮ ಶಿಕ್ಷಣ ದೊರೆಯಬೇಕಾದರೆ ಶಿಕ್ಷಕರದಷ್ಟೇ ಜವಾಬ್ದಾರಿಯು ಪಾಲಕರದು ಕೂಡಾ ಆಗಿದೆ. ಸಚಿವ ಸತೀಶ ಜಾರಕಿಹೊಳಿಯವರು ಯಮಕನಮರಡಿ ಕ್ಷೇತ್ರದ ಶಾಸಕರಾಗಿ ಆಯ್ಕೆಯಾದ ನಂತರ ಕಳೆದ 15 ವರ್ಷಗಳಿಂದ ಅಭಿವೃದ್ಧಿ ಕಾರ್ಯಗಳನ್ನು ಮಾಡುವುದರ ಜೊತೆಗೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಾ ಬಂದಿದ್ದು, ಯಮಕನಮರಡಿ ಮತಕ್ಷೇತ್ರದಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳು ಸುಧಾರಣೆಯಾಗಿವೆ. ಮುಂಬರುವ ದಿನಗಳಲ್ಲಿ ಪ್ರತಿಯೊಂದು ಗ್ರಾಮಪಂಚಾಯತಿ ಮಟ್ಟದಲ್ಲಿ ಸಿಬಿಎಸ್ ಶಾಲೆಗಳನ್ನು ಪ್ರಾರಂಭಿಸಲು ಚಿಂತನೆ ಮಾಡುತ್ತಿದ್ದಾರೆ. ಶಿಕ್ಷಣಕ್ಕೆ ಇನ್ನೂ ಹೆಚ್ಚಿನ ಆದ್ಯತೆ ನೀಡುವುದಾಗಿ ರಾಹುಲ ಜಾರಕಿಹೊಳಿ ಹೇಳಿದರು.

ಹುಕ್ಕೇರಿ ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಭಾವತಿ ಪಾಟೀಲ ಮಾತನಾಡಿ ಅಭಿವೃದ್ಧಿ ಹರಿಕಾರರೇ ಎಂದು ಎನಿಸಿಕೊಂಡಿರುವ ಸಚಿವ ಸತೀಶ ಜಾರಕಿಹೊಳಿಯವರು ರಾಜಕೀಯ ಕ್ಷೇತ್ರದಲ್ಲಿ ಅಷ್ಟೇ ಅಲ್ಲ ಸಾಮಾಜಿಕ ಶೈಕ್ಷಣಿಕ, ಸಂಸ್ಕೃತಿಕ, ಕ್ಷೇತ್ರದಲ್ಲಿ ಸಾಕಷ್ಟು ಕೆಲಸಗಳನ್ನು ಮಾಡಿದ್ದಾರೆ. ಅವರು ತಮ್ಮ ವ್ಯಕ್ತಿತ್ವ ವಿಚಾರಧಾರೆ ಮೂಲಕ ಯಮಕನಮರಡಿ ಮತಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿಯನ್ನೇ ಮಾಡಿದ್ದಾರೆ. ಸತೀಶ ಪ್ರತಿಭಾ ಪುರಸ್ಕಾರ ಆಯೋಜಿಸುವ ಮೂಲಕ ಪ್ರತಿಭಾವಂತ ಮಕ್ಕಳ ಪ್ರತಿಭೆಯನ್ನು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಮೆರೆಯಲು ಭವ್ಯವಾದ ವೇದಿಕೆ ಕಲ್ಪಿಸಿಕೊಟ್ಟಿದ್ದಾರೆ. ಇಂತಹ ಸರಳ ಸಜ್ಜನಿಕೆ ಸದಾ ಚಿಂತನಶೀಲವುಳ್ಳ ಸಾಮಾಜಿಕ ಕಳಕಳಿಯುಳ್ಳ ಶಾಸಕರು ಸಿಕ್ಕಿದ್ದು, ಈಭಾಗದ ಜನರ ಸೌಭಾಗ್ಯವೆ ಎಂದು ಹೇಳಿದರು.

ಮಕ್ಕಳ ಸಾಹಿತ್ಯ ಪರಿಷತ್ ಬೆಳಗಾವಿ ಜಿಲ್ಲಾ ಉಪಾಧ್ಯಕ್ಷ ಪ್ರಕಾಶ ಹೊಸಮನಿ ಮಾತನಾಡಿ, ಮುಂಬರುವ ದಿನಗಳಲ್ಲಿ ಬೆಳಗಾವಿ ಜಿಲ್ಲಾ ಮಟ್ಟದ ಮಕ್ಕಳ ಸಮ್ಮೇಳನ ಮಾಡುವ ವಿಚಾರವನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಕಾನಿ ಅಭಿಯಂತ ಎಮ್.ಎಸ್. ಹೊಸಮನಿ, ಎ.ಎಮ್. ಇನಾಮದಾರ, ಪಾಶ್ಚಾಪೂರ ಗ್ರಾ.ಪಂ.ಮಾಜಿ ಅಧ್ಯಕ್ಷ ಅಬ್ದುಲಗಣಿ ದರ್ಗಾ, ಮಲ್ಲಪ್ಪ ನಾಯಿಕ, ಸಚಿವ ಸತೀಶ ಜಾರಕಿಹೊಳಿಯವರ ಶೈಕ್ಷಣಿಕ ಆಪ್ತ ಸಹಾಯಕ ಜಂಗ್ಲಿಸಾಹೇಬ ನಾಯಿಕ, ಲಗಮಣ್ಣಾ ಪಣಗುದ್ದಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಹುಕ್ಕೇರಿ ತಾಲೂಕಾಧ್ಯಕ್ಷ ಎನ್.ಎಸ್. ದೇವರಮನಿ, ಉಪಾಧ್ಯಕ್ಷೆ ಉಮಾದೇವಿ ಪಡೆಪ್ಪನವರ, ಸಿಆರ್ಪಿ ರಾಜಗೋಪಾಲ ಮಿತ್ರನ್ನವರ, ಎಸ್.ಬಿ. ಸಿಂಗೆ, ರುಸ್ತುಂಪೂರ ಗ್ರಾ.ಪಂ ಉಪಾಧ್ಯಕ್ಷ ಸುರೇಶ ಪೂಜೇರಿ, ಮಹ್ಮದರಫೀಕ ಮೋಮಿನ, ರಫೀಕ ನಧಾಪ ಮುಖ್ಯ ಶಿಕ್ಷಕ ಎಮ್.ಎನ್. ಮಗದುಮ್ಮ, ಪ್ರಾಸ್ತಾವಿಕವಾಗಿ ಮಾತನಾಡಿದರು.

## ಕುಖ್ಯಾತ ಬೈಕ್ ಕಳ್ಳನ ಬಂಧಿಸಿದ ಬೆಳಗಾವಿ ಪೊಲೀಸರು



ಬೆಳಗಾವಿ: ಬೆಳಗಾವಿ ನಗರ ಹಾಗೂ ಸುತ್ತಮುತ್ತ ಬೈಕ್ ಕಳ್ಳತನ ಪ್ರಕರಣಗಳು ಜರಗುತ್ತಿದ್ದು, ಅವುಗಳ ಪತ್ತೆಗಾಗಿ ಸ್ನೇಹಾ. ಪಿ. ವಿ. ಡಿಸಿಪಿ (ಅಪರಾಧ ಮತ್ತು ಸಂಚಾರ) ಬೆಳಗಾವಿ ನಗರ ಇವರ ಮಾರ್ಗದರ್ಶನದಲ್ಲಿ ಪಿಐ ಎಪಿಎಂಸಿ ಪೊಲೀಸ್ ಠಾಣೆ ಹಾಗೂ ಅಧೀನ ಸಿಬ್ಬಂದಿ ಕುಖ್ಯಾತ ಬೈಕ್ ಕಳ್ಳನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬೆಳಗಾವಿಯ ಕೆ.ಎಲ್.ಇ ಆಸ್ಪತ್ರೆಯ ಮುಂದೆ ಹಾಗೂ ಸಿವಿಲ್ ಹಾಸ್ಪಿಟಲ್ ಮುಂದೆ ನಿಲ್ಲಿಸಿ ಇಡುತ್ತಿದ್ದ ಮೋಟರ್ ಸೈಕಲ್ ಕಳ್ಳತನ ಬಗ್ಗೆ ಆರೋಪಿತರ ಪತ್ತೆಗಾಗಿ ನಿಖರವಾದ ಮಾಹಿತಿ ಕಲೆ ಹಾಕಲಾಯಿತು. ಕೊನೆಗೂ ಆರೋಪಿ ವಿಠ್ಠಲ ಸದೆಪ್ಪಾ ಆರೇರ, (35), ಸಾ: ಶೀಗಿಹಳ್ಳಿ ತಾ: ಬೈಲಹೊಂಗಲ ಜಿಲ್ಲಾಃ ಬೆಳಗಾವಿ. ಈತನನ್ನು ವಶಕ್ಕೆ ಪಡೆದುಕೊಂಡು ಕೂಲಂಕುಷವಾಗಿ ವಿಚಾರಣೆ ಮಾಡಿದಾಗ ಈತ ಹಲವಾರು ಕಳ್ಳತನ ಮಾಡಿದ ಬಗ್ಗೆ ಒಪ್ಪಿಕೊಂಡಿದ್ದು, ಆತನ ವಶದಲ್ಲಿದ್ದ ಸುಮಾರು ರೂ.3,35,000/– ಮೌಲ್ಯದ 13 ಮೋಟರ್ ಸೈಕಲ್ (ಹೀರೋ ಹೊಂಡಾ ಸ್ಪೆಂಡರ್ –9, ಹೀರೋ ಎಚ್‌ಎಫ್ ಡಿಲಕ್ಸ್ –2, ಹೀರೋ ಹೊಂಡಾ ಸಿ.ಡಿ ಡಿಲಕ್ಸ್ –1 ಹಾಗೂ ಹೀರೋ ಹೊಂಡಾ ಪ್ಯಾಶನ್ ಪ್ಲಸ್–1) ಗಳನ್ನು ವಶಪಡಿಸಿಕೊಂಡು ಆರೋಪಿತನ ವಿರುದ್ಧ ಕಾನೂನು ಕ್ರಮ ಜರುಗಿಸಿ, ತನಿಖೆ ಮುಂದುವರಿಸಲಾಗಿದೆ.

ಪ್ರಕರಣದಲ್ಲಿ ಎಪಿಎಂಸಿ ಪೊಲೀಸ್ ಠಾಣೆಯ ಮಂಜುನಾಥ ಭಜಂತ್ರಿ ಪಿಎಸ್‌ಐ, ತ್ರಿವೇಣಿ ನಾಟೀಕರ, ಪಿಎಸ್‌ಐ, ಕಿರಣ ಸಿ ಹೊನಕಟ್ಟಿ, ಪಿಎಸ್‌ಐ, ಬಿ ಕೆ ಮಿಟಗಾರ, ಎ.ಎಸ್.ಐ, ವಿ.ಡಿ. ಬಾಬಾನಗರ, ಡಿ. ಸಿ. ಸಾಗರ, ಬಸವರಾಜ ಬಾನಸೆ, ಕೆಂಪಣ್ಣ ದೊಡಮನಿ, ನಾಮದೇವ ಲಮಾಣಿ ಹಾಗೂ ಸಿಬ್ಬಂದಿಯವರ ಕಾರ್ಯವನ್ನು ಪೊಲೀಸ್ ಆಯುಕ್ತರು ಹಾಗೂ ಉಪ ಪೊಲೀಸ್ ಆಯುಕ್ತರು (ಅಪರಾಧ ಮತ್ತು ಸಂಚಾರ) ಬೆಳಗಾವಿ ನಗರ ಅವರು ಮೆಚ್ಚುಗೆ ವ್ಯಕ್ತಪಡಿಸಿರುತ್ತಾರೆ.

## ನಕಲಿ ಪೊಲೀಸಪ್ಪನ ಬಂಧನ



ಮೈಸೂರು: ಕ್ರೈಂ ಬ್ರ್ಯಾಂಚ್ ಪೊಲೀಸ್ ಅಂತಾ ಹಣ ವಸೂಲಿ ಮಾಡುತ್ತಿದ್ದ ಆರೋಪಿಯನ್ನು ಬೈಲಕುಪ್ಪೆ ಪೊಲೀಸರು ಬಂಧಿಸಿದ್ದಾರೆ. ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲೂಕಿನ ಮಧುವನಹಳ್ಳಿ ನಿವಾಸಿ ದಿವ್ಯರಾಜ್ ಬಂಧಿತ ಆರೋಪಿ. ಈತ ತಾನೊಬ್ಬ ಕ್ರೈಂ ಬ್ರ್ಯಾಂಚ್ ಪೊಲೀಸ್ ಎಂದು ಹೇಳಿಕೊಂಡು ಜನರನ್ನು ನಂಬಿಸಿ ಹಣ ಪಡೆಯುತ್ತಿದ್ದ. ಸದ್ಯ ಆರೋಪಿ ಮಾತನ್ನು ನಂಬದ ವ್ಯಕ್ತಿಯೋರ್ವರು ದೂರು ದಾಖಲಿಸಿದ್ದು ದಿವ್ಯರಾಜ್ ಅರೆಸ್ಟ್ ಆಗಿದ್ದಾನೆ. ಕೊಪ್ಪ ಗ್ರಾಮದಲ್ಲಿರುವ ಆಯುರ್ವೇದಿಕ್ ಸ್ಪಾ ಮಾಲೀಕ ಪುಷ್ಪ ಕುಮಾರ್ ಅವರ ಬಳಿ ಆರೋಪಿ ದಿವ್ಯರಾಜ್ ತಾನೊಬ್ಬ ಕ್ರೈಂ ಬ್ರ್ಯಾಂಚ್ ಪೊಲೀಸ್ ಎಂದು ಹೇಳಿಕೊಂಡು ಹಣಕ್ಕೆ ಬೇಡಿಕೆ ಇಟ್ಟಿದ್ದ. ಈ ಬಗ್ಗೆ ಪುಷ್ಪ ಕುಮಾರ್ ಅವರು ಬೈಲು ಕುಪ್ಪೆ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಅದರಂತೆ ದಿವ್ಯರಾಜ್ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿದ್ದು ನಕಲಿ ಕ್ರೈಂ ಪೊಲೀಸ್ ಎಂದು ತಿಳಿದು ಬಂದ ಹಿನ್ನೆಲೆ ದಿವ್ಯರಾಜ್ ಬಂಧಿಸಲಾಗಿದೆ. ಬೈಲಕುಪ್ಪೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಪಘಾತ; 5 ಮಂದಿ ದುರ್ಮರಣ

ತಿರುಚಿ (ತಮಿಳುನಾಡು): ತಮಿಳುನಾಡಿನಲ್ಲಿ ಭೀಕರ ಅಪಘಾತ ಸಂಭವಿಸಿದ್ದು, ವೇಗವಾಗಿ ಬಂದ ಲಾರಿಯೊಂದು ನಿಯಂತ್ರಣ ಕಳೆದುಕೊಂಡು ರಸ್ತೆ ಪಕ್ಕದಲ್ಲಿದ್ದ ಟೀ ಅಂಗಡಿಗೆ ನುಗ್ಗಿದ ಪರಿಣಾಮ ಮಹಿಳೆ ಸೇರಿ 5 ಮಂದಿ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ತಿರುಚಿಯಲ್ಲಿ ಶನಿವಾರ ನಡೆದಿದೆ.

ಘಟನೆಯಲ್ಲಿ 19 ಮಂದಿ ಗಾಯಗೊಂಡಿದ್ದು, ಗಾಯಾಳುಗಳನ್ನು ಸಮೀಪದ ಪುದುಕೊಟ್ಟೈ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ತಿರುಚಿ–ರಾಮೇಶ್ವರಂ ಹೆದ್ದಾರಿಯಲ್ಲಿ ನಿಯಂತ್ರಣ ಕಳೆದುಕೊಂಡ ಲಾರಿ ಏಕಾಏಕಿ ಟೀ ಅಂಗಡಿಗೆ ನುಗ್ಗಿದೆ ಎಂದು ವರದಿಯಾಗಿದೆ.

ಅಪಘಾತದಲ್ಲಿ ಲಾರಿಯ ಮುಂಭಾಗ ಸಂಪೂರ್ಣವಾಗಿ ನಜ್ಜು–ಗುಜ್ಜಾಗಿದೆ. ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿದ್ದಾರೆ. ಸಿಮೆಂಟ್ ತುಂಬಿದ್ದ ಲಾರಿ ಅರಿಯಲೂರಿನಿಂದ ಶಿವಗಂಗೈಗೆ ತೆರಳುತ್ತಿತ್ತು. ಈ ವೇಳೆ ಚಾಲಕ ನಿದ್ರೆಗೆ ಜಾರಿದ್ದು, ಪರಿಣಾಮ ಚಾಲಕನ ನಿಯಂತ್ರಣ ತಪ್ಪಿ ಮೊದಲಿಗೆ ಎರಡು ವಾಹನಗಳಿಗೆ ಡಿಕ್ಕಿ ಹೊಡೆದು ನಂತರ, ತಿರುಚ್ಚಿ–ರಾಮೇಶ್ವರಂ ಹೆದ್ದಾರಿಯಲ್ಲಿ ಟೀ ಅಂಗಡಿಗೆ ನುಗ್ಗಿದೆ ಎಂದು ತಿಳಿದುಬಂದಿದೆ. ಲಾರಿ ಡಿಕ್ಕಿ ಹೊಡೆದ ವಾಹನಗಳಲ್ಲಿ ಓಶಕ್ತಿ ದೇವಸ್ಥಾನ ಹಾಗೂ ಅಯ್ಯಪ್ಪ ದೇವಸ್ಥಾನಕ್ಕೆ ಹೋಗುತ್ತಿದ್ದ ಭಕ್ತರಿದ್ದರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಪ್ಲಾಸ್ಟಿಕ ಸರ್ಜರಿ ಶಿಬಿರ: 82 ಜನರಿಗೆ ಉಚಿತ ಚಿಕಿತ್ಸೆ

ಬೆಳಗಾವಿ: ಭರತೇಶ ಶಿಕ್ಷಣ ಸಂಸ್ಥೆಯ ಭರತೇಶ ಹೋಮೊಯೋಪೆಥಿಕ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಹಾಗೂ ಭಾರತೀಯ ಜೈನ ಸಂಘಟನೆ ಸಹಯೋಗದೊಂದಿಗೆ ಇತ್ತಿಚಿಗೆ ಹಮ್ಮಿಕೊಳ್ಳಲಾದ ಎರದು ದಿನಗಳ ಉಚಿತ ಪ್ಲಾಸ್ಟಿಕ ಸರ್ಜರಿ ಶಿಬಿರದಲ್ಲಿ 82 ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡಲಾಯಿತು.

ಈ ಶಿಬಿರದಲ್ಲಿ ಒಟ್ಟು 82 ರೋಗಿಗಳ ಪೈಕಿ 49 ರೋಗಿಗಳಿಗೆ ಉಚಿತ ಶಸ್ತ್ರ ಚಿಕಿತ್ಸೆ ಮಾಡಲಾಯಿತು. 13 ಶಿಳು ತುಟಿ ಶಸ್ತ್ರ ಚಿಕಿತ್ಸೆ, 5 ಬಾಃಯ ಕಿವಿ ವಿರೂಪಗಳ ಶಸ್ತ್ರಚಿಕಿತ್ಸೆ, ಸೇರದಂತೆ ಒಟ್ಟು 49 ರೋಗಿಗಳಿಗೆ ಉಚಿತ ಶಸ್ತ್ರಚಿಕಿತ್ಸೆ ಮಾಡಲಾಯಿತು.

ಬಸವನ ಕುಡಚಿಯಲ್ಲಿರುವ ಭರತೇಶ ಹೋಮಿಯೋಪೇಥಿಕ ಮಹಾವಿದ್ಯಾಲಯದಲ್ಲಿ ನಡೆದ ಈ ಶಿಬಿರವನ್ನು ಖ್ಯಾತ ವೈದ್ಯ ಡಾ. ದೇವೆಗೌಡ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಭಾರತೀಯ ಜೈನ ಸಂಘಟನೆಯ ಕಾರ್ಯದರ್ಶಿ, ಶ್ರೀಪಾಲ ಖೇಮಾಲಾಪೂರೆ, ಭರತೇಶ ಶಿಕ್ಷಣ



ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ, ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷೆ ಡಾ.ಸಾವಿತ್ರಿ ದೊಡ್ಡಣ್ಣವರ, ಭಾರತೀಯ ಜೈನ ಸಂಘಟನೆಯ ಬೆಳಗಾವಿ ವಿಭಾಗೀಯ ಕಾರ್ಯದರ್ಶಿ ಹೀರಾಚಂದ ಕಲಮನಿ, ರಾಜೇಶ ಕಲಮನಿ, ಪ್ರಾಚಾರ್ಯ ಡಾ. ಶ್ರಿಕಾಂತ ಕೊಂಕಣಿ, ಡಾ.ರಾಜ ಲಲ್ಲಾ, ಡಾ.ಅಮೀತ ಬಸಣ್ಣವರ, ಡಾ. ಶ್ರೀಕಾಂತ ಅಸ್ಕಿ, ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

## ಹರಳಯ್ಯ ಕಾಲೋನಿ ನಿವಾಸಿಗಳಿಗೆ ಮನೆಗಳ ಹಕ್ಕು ಪತ್ರ ವಿತರಿಸುವಂತೆ ಮನವಿ

ಬೈಲಹೊಂಗಲ : ಕೊಳಚೆ ನಿರ್ಮೂಲನಾ ಅಧಿಕಾರಿಗಳು ಹರಳಯ್ಯ ಕಾಲೋನಿ ನಿವಾಸಿಗಳ ನ್ಯಾಯಯುತ ಬೇಡಿಕೆಗೆ ಸ್ಪಂದಿಸಿ ಅವರಿಗೆ ಮನೆಗಳ ಹಕ್ಕು ಪತ್ರ ವಿತರಿಸಬೇಕೆಂದು ನ್ಯಾಯವಾದಿಗಳ ಸಂಘದ ಅಧ್ಯಕ್ಷ ಮಡಿವಾಳಪ್ಪ ಮೆಳವಂಕಿ ಸರಕಾರವನ್ನು ಒತ್ತಾಯಿಸಿದರು.

ಅವರು ಪಟ್ಟಣದ ಹರಳಯ್ಯ ಕಾಲೋನಿ ನಿವಾಸಿಗಳು ಎಸಿ ಕಚೇರಿ ಎದುರು ಕಳೆದ 26 ದಿನಗಳಿಂದ ನಡೆದ ಆಹೋರಾತ್ರಿ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಭೇಟಿ ನೀಡಿ,



ಸಂಘದ ಸದಸ್ಯರೊಂದಿಗೆ ಸಂಪೂರ್ಣ ಬೆಂಬಲ ವ್ಯಕ್ತಪಡಿಸಿ, ಮಾತನಾಡಿ, 42 ವರ್ಷಗಳಿಂದ ವಾಸಿಸುತ್ತಿರುವ ಬಡ ನಿವಾಸಿಗಳಿಗೆ ಮನೆ ಹಕ್ಕುಪತ್ರ ವಿತರಿಸಬೇಕು. ಇಲ್ಲಿಯವರೆಗೂ ಯಾವುದೇ ಜನಪ್ರತಿನಿಧಿಗಳು, ಅಧಿಕಾರಿಗಳು ಅವರನ್ನು ಕಂಡು ಸಮಸ್ಯೆ ಆಲಿಸದಿರುವದು ಖೇದದ ಸಂಗತಿಯಾಗಿದೆ ಎಂದರು.

ರಾಜ್ಯ ನೋಟರಿ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಎಸ್. ಚಿಕ್ಕನಗೌಡರ ಮಾತನಾಡಿ, ಈಗಾಗಲೇ ಪುರಸಭೆಯಲ್ಲಿ ಠರಾವಿಸಿ, ಹರಳಯ್ಯ ಕಾಲೋನಿಯನ್ನು ಕೊಳಚೆ ನಿಗಮದ ವ್ಯಾಪ್ತಿಗೆ ಒಳಪಡಿಸಿಲಾಗಿದೆ. ನಿಗಮದ ಅಧಿಕಾರಿಗಳು ಕೂಡಲೇ ಸರ್ವೇ ಮಾಡಿ, ಹಕ್ಕು ಪತ್ರ ವಿತರಿಸಬೇಕು. ಮುಂದೆ ಪ್ರತಿಭಟಣಾಕಾರರು ಉಪವಾಸ ಸತ್ಯಾಗ್ರಹಕ್ಕೆ ಸಜ್ಜಾಗುತ್ತಿದ್ದು, ಆಗುವ ಸಮಸ್ಯೆಗಳಿಗೆ ಅಧಿಕಾರಿಗಳೆ ಹೊಣೆಗಾರರಾಗಲಿದ್ದಾರೆ ಎಂದರು.

ನ್ಯಾಯವಾದಿ ಡಿ.ವಾಯ್. ಗರಗದ ಮಾತನಾಡಿ, ಕಾಲೋನಿ ನಿವಾಸಿಗಳು ಕೊರೆಯುವ ಚಳಿಯಲ್ಲಿ ಪ್ರತಿಭಟಿಸುತ್ತಿರುವದು ಅಧಿಕಾರಿಗಳ ಕಣ್ಣಿಗೆ ಕಾಣುತ್ತಿಲ್ಲ.

ಬಡ ಜನರು ದಿನ ನಿತ್ಯದ ತಮ್ಮ ಕೂಲಿ, ನಾಲಿ ಬಿಟ್ಟು ಪ್ರತಿಭಟಿಸುತ್ತಿರುವದರಿಂದ ಕುಟುಂಬದ ನಿರ್ವಹಣೆಗೆ ತೊಂದರೆಯಾಗುತ್ತಿದೆ ಶಿಘ್ರವೇ ಶಾಸಕರು, ಅಧಿಕಾರಿಗಳು ಇತ್ತ ಗಮನ ಹರಿಸಿ ಹಕ್ಕು ಪತ್ರ ವಿತರಿಸಲು ಕ್ರಮ ಜರುಗಿಸಬೇಕೆಂದರು. ಸಂಘದ ಪ್ರಧಾನ ಕಾರ್ಯದರ್ಶಿ ವಿ.ಜಿ. ಕಟದಾಳ, ಈರಣ್ಣ ಮೇಟಿ, ವಿ.ಸಿ. ಸಂಗೊಳ್ಳಿ, ಆರ್ಬಿ. ರುದ್ರಾಪೂರ, ಎಸ್.ಬಿ. ಸಿದ್ದಮನಿ, ಶ್ರೀಕಾಂತ ಬೋರಕನವರ, ಎಂ.ಎಂ. ಅಲ್ಲಯ್ಯನವರಮ್ಮಠ, ಅನೀಲ ಕರಬನ್ನವರ, ಎಂ.ಎಂ. ಮಲ್ಲೇಶನವರ, ವಿಜಯಶಂಕರ ಮರಿತಮ್ಮನವರ ಹಾಗೂ ಮುಂತಾದವರು ಇದ್ದರು.

## ಮಾಸಿಕ ಶಿವಾನುಭವ ಕಾರ್ಯಕ್ರಮ

ಬೆಳಗಾವಿ: ಶಿವಬಸವನಗರ ಕಾರಂಜಿ ಮಠದಲ್ಲಿ ದಿನಾಂಕ 1 ಜನೆವರಿ 2024 ರಂದು 270ನೆಯ ಮಾಸಿಕ ಶಿವಾನುಭವ ಕಾರ್ಯಕ್ರಮ ಸಾಯಂಕಾಲ 6 ಗಂಟೆಗೆ ಜರುಗುವುದು.ಕಾರ್ಯಕ್ರಮದ ಸಾನ್ನಿಧ್ಯವನ್ನು ಶ್ರೀ ಮ.ನಿ.ಪ್ರ ಗುರುಸಿದ್ದ ಮಹಾಸ್ವಾಮಿಗಳು ಕಾರಂಜಿಮಠ, ಬೆಳಗಾವಿ ಅವರು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಡಾ. ನಿರ್ಮಲಾ ಬಟ್ಟಲ ಅವರು ವಹಿಸುವರು. ಪ್ರೊ. ಎಸ್. ಆರ್. ಕಲಹಾಳ ಅವರು ಶಿವಶರಣರ ದೃಷ್ಟಿಯಲ್ಲಿ ದಾಸೋಹ ಪರಿಕಲ್ಪನೆ ಕುರಿತು ಉಪನ್ಯಾಸ ನೀಡುವರು.

ಇದೇ ಸಂದರ್ಭದಲ್ಲಿ ವಿಶೇಷ ಶಿಕ್ಷಕ ರಾಜ್ಯ ಪ್ರಶಸ್ತಿ ಪಡೆದ ಶ್ರೀಮತಿ ಸುಮಿತಾ ಪಿ. ಮಿಟಗಾರ ಅವರನ್ನು ಸನ್ಮಾನಿಸಲಾಗುವುದು. ಕಾರಂಜಿಮಠ ಮಾತೃಮಂಡಳಿ ತಾಯಂದಿರಿಂದ ಸಾಮೂಹಿಕ ಪ್ರಾರ್ಥನೆ ಜರುಗುವುದು. ಎಂದು ಶ್ರೀಮಠದ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಶ್ರೀರಾಮ ಮಂತ್ರಾಕ್ಷತೆ ಕಲಶ ಪೂಜೆ



ಬೆಳಗಾವಿ: ನಗರದ ಲಕ್ಷ್ಮಿ ಟೇಕಡಿಯಲ್ಲಿರುವ ಹುಕ್ಕೇರಿ ಹಿರೇಮಠದಲ್ಲಿ ಶ್ರೀರಾಮ ಮಂತ್ರಾಕ್ಷತೆ ಕಲಶ ಪೂಜೆಯನ್ನ ಶ್ರೀ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳವರು ತಮ್ಮ ಗುರುಕುಲದ ವೇದವಿದ್ವಾಂಸರೊಂದಿಗೆ ನೆರವೇರಿಸಿ ಆರತಿ ಮಾಡಿದರು.

ಅಯೋಧ್ಯೆ ಶ್ರೀರಾಮ ಮಂದಿರದ ನಿರ್ಮಾಣಕ್ಕಾಗಿ ಸಾರ್ವಜನಿಕರಿಗೆ ಮಂತ್ರಾಕ್ಷತೆ ಕಲಶ ಪೂಜೆ ವಿನಾಯಕ ನಗರದಲ್ಲಿ ಇವತ್ತು ಸಂಚರಿಸುತ್ತಿದೆ ಪ್ರಾರಂಭದಲ್ಲಿ ಹುಕ್ಕೇರಿ ಹಿರೇಮಠದಲ್ಲಿ ಅತಿ ಭಕ್ತಿಭಾವದಿಂದ ಪೂಜೆ ನೆರವೇರಿತು

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು ಭಾರತೀಯರ ಬಹುದಿನದ ಕನಸು ಇವತ್ತು ನನಸಾಗುತ್ತಿದೆ ಶ್ರೀರಾಮ ಮಂದಿರ ನಿರ್ಮಾಣಗೊಂಡು ರಾಮನ ಭಕ್ತರಿಗೆ ಅತೀವ ಸಂತಸ ತರುವ ದಿನ ಜನವರಿ 22 ಇವತ್ತು ಶ್ರೀಮಠಕ್ಕೆ ಮಂತ್ರಾಕ್ಷತೆ ಕಲಶ ಆಗಮಿಸಿ ಪೂಜೆಗೊಂಡಿದೆ ,ಎಲ್ಲರು ಅಯೋಧ್ಯೆಗೆ ಹೋಗಿ ರಾಮನ ದರ್ಶನವನ್ನ ಪಡೆಯಿರಿ ಎಂದರು .

ಈ ಸಂದರ್ಭದಲ್ಲಿ ನಿಶಾಂತ ಸ್ವಾಮಿ . ಮಹಾಂತೇಶ ಶಾಸ್ತ್ರೀ ,ಉದಯಕುಮಾರ ಶಾಸ್ತ್ರೀ ಹಾಗು ಸಿದ್ದು ಶಾಸ್ತ್ರೀ ಸೇರಿದಂತೆ ಸುಮಾರು 21 ವೇದಪಂಡಿತರು ಪೂಜೆಯನ್ನ ನೆರವೇರಿಸಿದರು . ವಿನಾಯಕ ನಗರದ ಹಿರಿಯರಾದ ಸುನಿಲ ದೇಶಪಾಂಡೆ ,ವಿಲಾಸ ಪೈ ,ರಾಜು ಸೋಜಿಕರ ,ಅರವಿಂದರಾವ್ ಕುಲಕರ್ಣಿ ಈಶ್ವರ ದಳವಿ,ನಿಖಿಲ ಮಟ್ಟಿ , ಬಸವರಾಜ ಸವದಿ ಸೇರಿದಂತೆ ಅನೇಕ ಗಣ್ಯಮಾನ್ಯರು ಉಪಸ್ಥಿತರಿದ್ದರು.

## ಪ್ರೊ.ಎಂ.ಎಸ್.ಇಂಚಲ ಹಾಗೂ ಸುಭಾಷ ಏಣಗಿ ಅಮೃತ ಮಹೋತ್ಸವ ಸಮಾರಂಭ

ಬೆಳಗಾವಿ: ಸಾಹಿತ್ಯ ಹಾಗೂ ಸಾಂಸ್ಕೃತಿಕ ಲೋಕಕ್ಕೆ ಪ್ರೊ.ಎಂ.ಎಸ್.ಇಂಚಲ ಹಾಗೂ ಸುಭಾಷ ಏಣಗಿಯವರ ಕೊಡುಗೆ ಅನನ್ಯವಾಗಿದೆ. ಸಮಾಜವು ಅವರ ಸೇವೆಗೆ ಉಪಕೃತವಾಗಿದೆ ಎಂದು ನಿಡಸೋಸಿ ಸಿದ್ಧಸಂಸ್ಥಾನಮಠದ ಪೂಜ್ಯ ಜಗದ್ಗುರು ಪಂಚಮಶಿವಲಿಂಗೇಶ್ವರ ಮಹಾಸ್ವಾಮಿಗಳು ನುಡಿದರು. ಅವರು ಬೆಳಗಾವಿಯ ನಾಗನೂರು ರುದ್ರಾಕ್ಷಿಮಠದ ಎಸ್.ಜಿ.ಬಿ.ಟಿ.ಆಯ್ ಸಭಾಗೃಹದಲ್ಲಿ ಆಯೋಜಿಸಿದ್ದ ಪ್ರೊ. ಎಂ. ಎಸ್. ಇಂಚಲ ಹಾಗೂ ಶ್ರೀ ಸುಭಾಷ ಏಣಗಿ ಅಮೃತ ಮಹೋತ್ಸವ ಸಮಾರಂಭದ ದಿವ್ಯ ಸಾನ್ನಿಧ್ಯವಹಿಸಿ ಮಾತನಾಡಿದರು.

ಇರ್ವರ ಪೂಜ್ಯ ತಂದೆಯವರು ಕೂಡ ಸಮಾಜದ ಗೌರವಾನ್ವಿತ ವ್ಯಕ್ತಿಗಳಾಗಿದ್ದ ಸಮಾಜಮುಖಿಗಳಾಗಿ ಬದುಕಿದ್ದರು ಎಸ್.ಡಿ.ಇಂಚಲರ ಸುಪುತ್ರರಾದ ಪ್ರೊ. ಎಂ.ಎಸ್.ಇಂಚಲರು ಹಾಗೂ ಖ್ಯಾತ ರಂಗಕಲಾವಿದರಾದ ನಾಡೋಜ ಏಣಗಿ ಬಾಳಪ್ಪನವರ ಮಗ ಸುಭಾಷ ಏಣಗಿಯವರು




ಕೂಡ ತಂದೆಯವರ ಪಥದಲ್ಲಿಯೇ ಸಾಗಿದ ಸಮಾಜಕ್ಕೆ ಬಹುನೆಲೆಗಳಲ್ಲಿ ಸೇವೆಯನ್ನು ಸಲ್ಲಿಸಿರುವುದು ಅಭಿನಂದನೀಯವೆಂದು ಹೇಳಿದರು.

ಸಾನ್ನಿಧ್ಯವಹಿಸಿದ ಗದಗ ತೋಂಟದಾರ್ಯ ಶ್ರೀಮಠದ ಜಗದ್ಗುರು ಡಾ.ಸಿದ್ಧರಾಮ ಮಹಾಸ್ವಾಮೀಜಿಯವರು ಏಣಗಿ ಹಾಗೂ ಇಂಚಲ ಇರ್ವ ಕುಟುಂಬ ನಾಡಿಗೆ ನೀಡಿರುವ ಕೊಡುಗೆ ಅನುಪಮವಾಗಿದೆ. ಅವರ ಸುಪುತ್ರರಾದ ಇವರು ಕೂಡ ಅದನ್ನು ಮುಂದುವರೆಸಿಕೊಂಡು ಹೋಗಿರುವುದು ಅಭಿನಂದನೀಯ. ಇಂದು ಹಿರಿಯರನ್ನು ಗೌರವಿಸುವ ಪರಂಪರೆಯು ದೂರಸರಿಯುತ್ತಿರುವ ಸಂದರ್ಭದಲ್ಲಿ ಅವರ ಸ್ನೇಹಿತರು, ಅಭಿಮಾನಿಗಳು ಜೊತೆಯಾಗಿ ಅಮೃತ ಮಹೋತ್ಸವವನ್ನು ಆಚರಿಸಿರುವುದು ಸಂತೋಷ ತಂದಿದೆ. ಅವರು ಶತಾಯುಷಿಗಳಾಗಲೆಂದು ಶುಭಕೋರಿದರು.

ಹಿರಿಯ ನ್ಯಾಯವಾದಿ ಎಸ್ ಎಂ ಕುಲಕರ್ಣಿ ಅವರು ಮಾತನಾಡಿ ಇದೊಂದು ಅಪರೂಪದ ಸಮಾರಂಭ ಒಂದೇ ವೇದಿಕೆಯ ಮೇಲೆ ಇಬ್ಬರು ಹಿರಿಯ ಜೀವಿಗಳನ್ನು ಅವರ ಸಾಮಾಜಿಕ ಸಾಹಿತ್ಯ ಸಾಂಸ್ಕೃತಿಕ ಸಾಧನೆಗಳನ್ನು ಅವಲೋಕಿಸಿ ಗೌರವಿಸುತ್ತಿರುವುದು ಸಮಾಜಕ್ಕೆ ದಿವ್ಯ ಸಂದೇಶ ನೀಡಿದೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಖ್ಯಾತ ವೈದ್ಯ ಡಾ.ಎಚ್.ಬಿ.ರಾಜಶೇಖರ ಅವರು ಮಾತನಾಡಿ, ಜೀವನದ ಸಂಧ್ಯಾಕಾಲದಲ್ಲಿ ಅವರ ಸಾಧನೆಗಳನ್ನು ಅವಲೋಕಿಸಿ ಸಮಾಜ ಇಂತಹ ಅಪರೂಪದ ಸಮಾರಂಭಗಳನ್ನು ಆಯೋಜಿಸುತ್ತಿರುವುದು ಹೆಮ್ಮೆಯನ್ನುಂಟುಮಾಡಿದೆ. ಏಣಗಿ ಹಾಗೂ ಇಂಚಲರ ಕ್ಷೇತ್ರಗಳು ವಿಭಿನ್ನವಾಗಿದ್ದರೂ ಅವರು ಸಾಂಸ್ಕೃತಿಕ ವಲಯಕ್ಕೆ ನೀಡಿರುವ ಕೊಡುಗೆ ಅಸಾದೃಶ್ಯವೆನಿಸಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಎಂ.ಎಸ್. ಇಂಚಲರ 'ಮುತ್ತಿನಗೊಂಚಲು', ಸುಭಾಷ ಏಣಗಿಯವರ 'ಸ್ನೇಹಭೂಷಣ' ಅಭಿನಂದನ ಸಂಪುಟಗಳನ್ನು ಪೂಜ್ಯರು ಲೋಕಾರ್ಪಣೆ ಗೊಳಿಸಿದರು.

ಈ ಸಂದರ್ಭದಲ್ಲಿ ಕಾರಂಜಿಮಠದ ಗುರುಸಿದ್ಧೇಶ್ವರ ಮಹಾಸ್ವಾಮಿಗಳು, ನಾಗನೂರು ರುದ್ರಾಕ್ಷಿಮಠದ ಡಾ.ಅಲ್ಲಮಪ್ರಭು ಮಹಾಸ್ವಾಮಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಡಾ.ಸರಜೂ ಕಾಟ್ಕರ, ಡಾ.ಗುರುದೇವಿ ಹುಲೆಪ್ಪನವರಮಠ, ಡಾ.ರಾಮಕೃಷ್ಣ ಮರಾಠೆ ಅಭಿನಂದನಪರ ನುಡಿಗಳನ್ನಾಡಿದರು. ಡಾ.ಬಸವರಾಜ ಜಗಜಂಪಿ ಸ್ವಾಗತಿಸಿರು. ಪ್ರಿ.ಬಿ.ಎಸ್.ಗವಿಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಶ್ರೀಮತಿ ನಯನಾ ಗಿರಿಗೌಡರ ವಚನ ಪ್ರಾರ್ಥನೆ ಸಲ್ಲಿಸಿದರು. ಶಿರೀಷ ಜೋಶಿ ಹಾಗೂ ಯ.ರು.ಪಾಟೀಲ ಅಭಿನಂದನ ಪತ್ರ ವಾಚಿಸಿದರು. ಡಾ.ಪಿ.ಜಿ. ಕೆಂಪಣ್ಣನವರ ಹಾಗೂ ಬಸವರಾಜ ಗಾರ್ಗಿ ನಿರೂಪಿಸಿದರು. ಡಾ.ಮಹೇಶ ಗುರನಗೌಡರ ವಂದಿಸಿದರು. ಡಾ.ಎಫ್.ವ್ಹಿ.ಮಾನ್ವಿ, ನೀಲಗಂಗಾ ಚರಂತಿಮಠ, ಆರ್ಬಿ.ಕಟ್ಟಿ, ಎಂ.ವ್ಹಿ.ಅಣ್ಣಿಗೇರಿ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಸಂಪುಟ: 4 ಸಂಚಿಕೆ: 279 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089